03 April 2026 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಒಬ್ಬರ ಖುಷಿಗೆ ನಾವು ಕಾರಣವಾದರೆ, ಅದರಷ್ಟು ತೃಪ್ತಿ ಬೇರೆಯದರಲ್ಲಿ ನಮಗೆ ಸಿಗುವುದಿಲ್ಲ!

-ಸ್ನೇಹಾ ಆನಂದ್

info.varthaman@gmail.com



ಮೈಸೂರು ಆಟೋ ಚಾಲಕರಿಗೆ ಗ್ಯಾಸ್ ಟ್ರಬಲ್ ಪುಟ ಸಂ. 2



ಗಣಪತಿ ಆಶ್ರಮದಲ್ಲಿ ಹನುಮ ಜಯಂತಿ: ಚೈತ್ರ ಶುದ್ಧ ಹುಣ್ಣಿಮೆ ಸಡಗರ ಪುಟ ಸಂ. 3



ಗೆಲುವಿಗೆ ಚಲಾಯಿತ ಮತಗಳಲ್ಲಿ ಶೇ.50 ರಷ್ಟು ನಿಗದಿಪಡಿಸಲ ಪುಟ ಸಂ. 4

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು | ಗ್ರಾಮಾಂತರ ಕೊಡಗು | ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 138 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

## ಎತ್ತಿನ ಹೊಳೆಗೆ 'ಗ್ರೀನ್ ಸಿಗ್ನಲ್'

### ತುಮಕೂರು–ಹಾಸನ ಜಿಲ್ಲೆಗಳ 277 ಎಕರೆ ಅರಣ್ಯ ಭೂಮಿ ಬಳಸಲು ಕೇಂದ್ರದ ಅನುಮತಿ



**ನವದೆಹಲಿ:** ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಎತ್ತಿನ ಹೊಳೆ ಯೋಜನೆಗೆ ಹಾಸನ ಹಾಗೂ ತುಮಕೂರು ಜಿಲ್ಲೆಗಳ 277 ಎಕರೆ ಅರಣ್ಯ ಬಳಸಲು ಕೇಂದ್ರ ಪರಿಸರ ಸಚಿವಾಲಯದ ಅರಣ್ಯ ಸಲಹಾ ಸಮಿತಿ ಷರತ್ತುಬದ್ಧ ಅನುಮತಿ ನೀಡಿರುವ ಬೆನ್ನಲ್ಲೇ ಕೇಂದ್ರ ಸರ್ಕಾರ ತಾತ್ವಿಕ ಅನುಮೋದನೆ ನೀಡಿದೆ.

ಈ ಬಗ್ಗೆ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ ಮಾಹಿತಿ ನೀಡಿದೆ. ಯೋಜನೆ ಮುಂದುವರಿಸಲು 34 ಷರತ್ತುಗಳನ್ನು ವಿಧಿಸಿದೆ. ಈ ಬೆಳವಣಿಗೆ ಬಳಿಕ ಸಚಿವಾಲಯದ ತಕರಾರಿನ ಕಾರಣ ವರ್ಷದಿಂದ ಸ್ಥಗಿತಗೊಂಡಿದ್ದ ಎತ್ತಿನಹೊಳೆ ಯೋಜನೆ ಕಾಮಗಾರಿಗೆ ಮತ್ತೆ ಚಾಲನೆ ಸಿಗಲಿದೆ.

ಈಗಾಗಲೇ ಅರಣ್ಯ ಪ್ರದೇಶದಲ್ಲಿ ಒಪ್ಪಿಗೆ ಇಲ್ಲದೇ ಕಾಮಗಾರಿ ನಡೆಸಿದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ತೆಗೆದುಕೊಳ್ಳಬೇಕು. ಕಾಮಗಾರಿ ನಡೆಸಿದ ಸ್ಥಳದ ಮೌಲ್ಯದ ಆರು ಪಟ್ಟು ಮೌಲ್ಯವನ್ನು ದಂಡದ ರೂಪದಲ್ಲಿ ಪಾವತಿಸಬೇಕು. ಪರಿಸರ ಸಂರಕ್ಷಣೆ ಗಮನದಲ್ಲಿಟ್ಟುಕೊಂಡು ಕಾಮಗಾರಿ ನಡೆಸಬೇಕು ಎಂದು ಕೇಂದ್ರ ಸರ್ಕಾರ ಸೂಚಿಸಿದೆ.

ಅರಣ್ಯ ಭೂಮಿಯ ಪುಟ 2ಕ್ಕೆ

## ಅರಣ್ಯ ಭೂಮಿ ಬಳಕೆ 111 ಹೆಕ್ಟೇರ್ ಮೀರುವಂತಿಲ್ಲ

ಎತ್ತಿನಹೊಳೆ ಯೋಜನೆಗಾಗಿ ಬಳಸುವ ಒಟ್ಟು ಅರಣ್ಯ ಭೂಮಿ ಪ್ರಮಾಣ 111.0277 ಹೆಕ್ಟೇರ್ ಅನ್ನು ಮೀರಬಾರದು. ಅಕ್ಕಪಕ್ಕದ ಪ್ರದೇಶದ ಸಸ್ಯ ಮತ್ತು ಪ್ರಾಣಿ ಜೀವಿಗಳಿಗೆ ಯಾವುದೇ ಹಾನಿ ಉಂಟುಮಾಡುವಂತಿಲ್ಲ. ರಾಜ್ಯ ಸರ್ಕಾರ ಅರಣ್ಯ ಅನುಮೋದನೆ ಷರತ್ತುಗಳ ಅನುಸರಣೆಯನ್ನು ಪ್ರತಿ ವರ್ಷ ಡಿಸೆಂಬರ್ 31ರಂದು ವರದಿ ಸಲ್ಲಿಸಬೇಕು. ಮರಗಳನ್ನು ಕಡಿಯುವುದು ಅನಿವಾರ್ಯವಾಗಿದ್ದಲ್ಲಿ ಮಾತ್ರ ಮತ್ತು ರಾಜ್ಯ ಅರಣ್ಯ ಇಲಾಖೆಯ ಕಟ್ಟುನಿಟ್ಟು ಮೇಲ್ವಿಚಾರಣೆಯಲ್ಲಿ ಮಾತ್ರ ಮಾಡಬೇಕು. ಈ ಷರತ್ತುಗಳಲ್ಲಿ ಯಾವುದಾದರೂ ಒಂದು ಉಲ್ಲಂಘನೆ ಆದರೆ ಅದು ನಿಯಮ 1980 ಉಲ್ಲಂಘನೆ ಎಂದು ಪರಿಗಣಿಸಲಾಗುವುದು ಎಂದು ಕೇಂದ್ರ ಸರ್ಕಾರ ಎಚ್ಚರಿಸಿದೆ.

# ಮಹಿಳಾ ಮೀಸಲಾತಿ: ವಿಶೇಷ ಅಧಿವೇಶನ

## ಲೋಕಸಭೆ, ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ.33ರಷ್ಟು ಮೀಸಲು ಮಸೂದೆ

**ನವದೆಹಲಿ:** ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿಯನ್ನು ಶೀಘ್ರ ಜಾರಿಗೆ ತರುವ ಮಸೂದೆಯನ್ನು ಅಂಗೀಕರಿಸಲು ಏಪ್ರಿಲ್ 2 ಅಥವಾ 3ನೇ ವಾರದಲ್ಲಿ ಸಂಸತ್ ಅಧಿವೇಶನ ನಡೆಸಲಾಗುವುದು ಎಂದು ಕೇಂದ್ರ ಸರ್ಕಾರ ಗುರುವಾರ ತಿಳಿಸಿದೆ.

ರಾಜ್ಯಸಭೆಯಲ್ಲಿ ಕಾಂಗ್ರೆಸ್ ಮುಖ್ಯಸಚೇತಕ ಜೈರಾಮ್ ರಮೇಶ್ ವಿಷಯ ಪ್ರಸ್ತಾಪಿಸಿ, ಬಜೆಟ್ ಅಧಿವೇಶನವನ್ನು ಅನಿರ್ದಿಷ್ಟಾವಧಿಗೆ ಮುಂದೂಡಲಾಗುತ್ತದೆಯೇ ಅಥವಾ ಸ್ವಲ್ಪ ಸಮಯದ ನಂತರ ಮತ್ತೆ ಸಭೆ ಸೇರುವ ಬಗ್ಗೆ ಅಧಿಸೂಚನೆ ಹೊರಡಿಸಲಾಗುತ್ತದೆಯೇ ಎಂಬ ಬಗ್ಗೆ ಸ್ಪಷ್ಟನೆ ನೀಡಬೇಕು ಎಂದು ಒತ್ತಾಯಿಸಿದರು. ಆಗ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಈ ಘೋಷಣೆ ಮಾಡಿದರು.

ಚುನಾವಣೆಗೆ ಮುನ್ನ ರಾಜಕೀಯ ಲಾಭ ಪಡೆಯುವ ಉದ್ದೇಶದಿಂದ ಸರ್ಕಾರವು ತರಾತುರಿಯಿಂದ ಈ ಮಸೂದೆ ಮಂಡಿಸುತ್ತಿದೆ ಎಂದು ಕಾಂಗ್ರೆಸ್ ಸೇರಿದಂತೆ ವಿಪಕ್ಷಗಳು ಆಕ್ಷೇಪಿಸಿವೆ. ಈ ಆರೋಪ ತಿರಸ್ಕರಿಸಿದ ರಿಜಿಜು, ಮುಂದಿನ 2–3 ವಾರಗಳಲ್ಲಿ ಬಹಳ ಮುಖ್ಯವಾದ ಮಸೂದೆ ಮಂಡಿಸಲಾಗುವುದು ಮಹಿಳಾ ಮೀಸಲಾತಿಯನ್ನು ಶೀಘ್ರವಾಗಿ ಜಾರಿಗೆ ತರಲು ಸಂವಿಧಾನ ತಿದ್ದುಪಡಿ ಮಾಡುವ ಮಸೂದೆಯನ್ನು ಅಂಗೀಕರಿಸಲು ಶೀಘ್ರದಲ್ಲೇ ಸಭೆ ಸೇರಲಾಗುವುದು ಎಂದು ಹೇಳಿದರು. ಅಧಿವೇಶನ ಎಂದು ನಡೆಯಲಿದೆ ಎಂದು ಸಚಿವರು ನಿಖರವಾಗಿ ತಿಳಿಸಲಿಲ್ಲ. ಆದರೆ, ಏಪ್ರಿಲ್ 15ರಿಂದ ಮೂರು ದಿನ ಅಧಿವೇಶನ ನಡೆಯುವ ಸಾಧ್ಯತೆ ಇದೆ.



### ಎಸ್‌ಸಿ, ಎಸ್‌ಟಿ ಮೀಸಲಾತಿ: 9ನೇ ಪರಿಚ್ಛೇದಕ್ಕೆ ಆಗ್ರಹ

**ನವದೆಹಲಿ:** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಹೆಚ್ಚುವರಿ ಮೀಸಲಾತಿ ನೀಡುವ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಾಯ್ದೆ–2022 ಅನ್ನು ಸಂವಿಧಾನದ ಒಂಬತ್ತನೇ ಪರಿಚ್ಛೇದಕ್ಕೆ ಸೇರಿಸುವಂತೆ ಸಂಸದ ಜಿ.ಕುಮಾರನಾಯಕ ಆಗ್ರಹಿಸಿದರು.

ಲೋಕಸಭೆಯಲ್ಲಿ ಗುರುವಾರ ಶೂನ್ಯ ವೇಳೆಯಲ್ಲಿ ವಿಷಯ ಪ್ರಸ್ತಾಪಿಸಿದ ಅವರು, ಈ ಕಾಯ್ದೆಯನ್ನು ಒಂಬತ್ತನೇ ಪರಿಚ್ಛೇದದಲ್ಲಿ ಸೇರಿಸುವ ಪ್ರಸ್ತಾವ ಇನ್ನೂ ಕೇಂದ್ರ ಸರ್ಕಾರದ ಮಟ್ಟದಲ್ಲಿ ಬಾಕಿಯಿರುವುದರಿಂದ ರಾಜ್ಯದ ಲಕ್ಷಾಂತರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರಿಗೆ ನ್ಯಾಯ ಹಾಗೂ ಸಮರ್ಪಕ ಪ್ರತಿನಿಧಿತ್ವ ದೊರಕುವಲ್ಲಿ ವಿಳಂಬವಾಗುತ್ತಿದೆ ಎಂದರು. ಕಾಯ್ದೆಯನ್ನು ಒಂಬತ್ತನೇ ಪರಿಚ್ಛೇದದಲ್ಲಿ ಸೇರಿಸುವ ಪ್ರಸ್ತಾವವನ್ನು ಕರ್ನಾಟಕ ಸರ್ಕಾರ ಗೃಹ ಸಚಿವಾಲಯಕ್ಕೆ ಕಳುಹಿಸಿತ್ತು. ಗೃಹ ಸಚಿವಾಲಯ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದಿಂದ ಅಭಿಪ್ರಾಯ ಕೇಳಿದೆ. ಮೂರು ವರ್ಷಗಳಿಂದ ಪ್ರಸ್ತಾವ ನನೆಗುದಿಗೆ ಬಿದ್ದಿದೆ. ಈ ಬಗ್ಗೆ ಕೇಂದ್ರ ಸರ್ಕಾರ ತುರ್ತು ಗಮನ ಹರಿಸಬೇಕು ಎಂದು ಅವರು ಆಗ್ರಹಿಸಿದರು.

ಸರ್ಕಾರವು ಮಾದರಿ ನೀತಿ ಸಂಹಿತೆ ಉಲ್ಲಂಘಿಸಿ ರಾಜಕೀಯ ಲಾಭ ಪಡೆಯುವ ಏಕ ಮನಸ್ಸಿನ ಉದ್ದೇಶ ಹೊಂದಿದೆ ಎಂದು ಜೈರಾಮ್ ರಮೇಶ್ ಟೀಕಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ರಿಜಿಜು, ದೇಶದ ಮಹಿಳೆಯರಿಗೆ ನೀಡಿದ ಭರವಸೆಯನ್ನು ಈಡೇರಿಸಲು ಸರ್ಕಾರ ಬದ್ಧವಾಗಿದೆ. ನಿರ್ದಿಷ್ಟ ರಾಜ್ಯ ಚುನಾವಣೆಗೂ ಮಸೂದೆ ಮಂಡನೆಗೂ ಯಾವುದೇ ಸಂಬಂಧವಿಲ್ಲ ಎಂದು ಸ್ಪಷ್ಟಪಡಿಸಿದರು.

> ನಿಮಗೆ ಮಹಿಳೆಯರ ಬಗ್ಗೆ ಅಷ್ಟೊಂದು ಬದ್ಧತೆ ಇದ್ದಿದ್ದರೆ ಅದನ್ನು ಅಂಗೀಕರಿಸಿದ ನಂತರ ಮೂರು ವರ್ಷ ಏಕೆ ಕಾಯುತ್ತಿದ್ದೀರಿ? ಅಧಿವೇಶನದ ಆರಂಭದಲ್ಲೇ ಈ ಮಸೂದೆ ತರಬೇಕಿತ್ತು. ಚುನಾವಣೆ ಸಮಯದಲ್ಲಿ ಮಸೂದೆ ತರುವ ಕೇಂದ್ರದ ಪ್ರಜಾಪ್ರಭುತ್ವ ವಿರೋಧಿ ನಡವಳಿಕೆ ಯನ್ನು ಸಹಿಸುವುದಿಲ್ಲ.
>
> **ಮಲ್ಲಿಕಾರ್ಜುನ ಖರ್ಗೆ**
> ವಿರೋಧ ಪಕ್ಷದ ನಾಯಕ

ವಿರೋಧ ಪಕ್ಷ ಮಹಿಳಾ ಮೀಸಲಾತಿ ಜಾರಿಯನ್ನು ಬೆಂಬಲಿಸುತ್ತದೆ. ಮಸೂದೆಯು ಮುಖ್ಯವಾಗಿದೆ ಮತ್ತು ದೀರ್ಘಕಾಲೀನ ಪರಿಣಾಮಗಳನ್ನು ಬೀರುತ್ತದೆ. ಆದರೆ, ಸರ್ಕಾರದ ಈ ಆತುರವು ಅನೇಕ ಪ್ರಶ್ನೆಗಳನ್ನು ಹುಟ್ಟು ಹಾಕಿದೆ ಎಂದು ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಹೇಳಿದರು.

ಕ್ಷೇತ್ರ ಮರುವಿಂಗಡಣೆಗೆ 2027ರ ಜನಗಣತಿ ಆಗುವವರೆಗೂ ಕಾಯದೆ, 2011ರ ಜನಗಣತಿ ಆಧಾರದಲ್ಲೇ ಕ್ಷೇತ್ರಗಳ ಮರು ವಿಂಗಡಣೆ ಮತ್ತು ಮಹಿಳೆಯರಿಗೆ ಶೇ 33ರಷ್ಟು ಮೀಸಲಾತಿ ಕಲ್ಪಿಸುವ ಮಸೂದೆ ತರಲು ಸರ್ಕಾರ ಸಿದ್ಧತೆ ನಡೆಸಿದೆ. ಇದಕ್ಕಾಗಿ 2023ರ ನಾರಿ ಪುಟ 2ಕ್ಕೆ

## ಹಿಂದಿಗೆ ಗ್ರೇಡ್ ಪ್ರಶ್ನಿಸಿ ಪಿಐಎಲ್

**ಬೆಂಗಳೂರು:** ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ತೃತೀಯ ಭಾಷೆಗೆ ಅಂಕಗಳ ಬದಲಿಗೆ ಗ್ರೇಡ್ ನೀಡುವ ಸರ್ಕಾರದ ನಿರ್ಧಾರ ಪ್ರಶ್ನಿಸಿ ಹೈಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಕೆ ಮಾಡಲಾಗಿದೆ.

ಬೆಂಗಳೂರಿನ ಎಚ್.ಎನ್.ಚಂದನಾ ಮತ್ತು ಎಸ್.ವೆಂಕಟೇಶ್ ಎಂಬುವವರು ಅರ್ಜಿ ಸಲ್ಲಿಸಿದ್ದಾರೆ. ಅರ್ಜಿಯಲ್ಲಿ ಶಾಲಾ ಶಿಕ್ಷಣ ಇಲಾಖೆ ಕಾರ್ಯದರ್ಶಿ, ಆಯುಕ್ತರು, ಶಿಕ್ಷಣ ಇಲಾಖೆ ಸಚಿವ ಮಧು ಬಂಗಾರಪ್ಪ ಅವರನ್ನು ಪ್ರತಿವಾದಿಗಳನ್ನಾಗಿ ಹೆಸರಿಸಿದ್ದಾರೆ.


ಅರ್ಜಿಯಲ್ಲಿ ಸರ್ಕಾರದ ಕ್ರಮ ಸರಿಯಾಗಿಲ್ಲ. ಯಾವುದೇ ಶೈಕ್ಷಣಿಕ ಬದಲಾವಣೆ ಮಾಡುವ ಮುನ್ನ ಶಿಕ್ಷಣ ತಜ್ಞರ ಜೊತೆಯಲ್ಲಿ ಸಭೆ ಮಾಡಬೇಕು. ಶಿಕ್ಷಣ ತಜ್ಞರ ಅಭಿಪ್ರಾಯ ಪಡೆದುಕೊಳ್ಳಬೇಕು. ಆದರೆ ರಾಜ್ಯ ಸರ್ಕಾರ ಯಾವುದೇ ಪ್ರಕ್ರಿಯೆ ಮಾಡದೇ ಏಕಪಕ್ಷೀಯ ನಿರ್ಧಾರ ಮಾಡಿರುವುದು ಸೂಕ್ತ ಅಲ್ಲ ಎಂದು ದೂರಿದ್ದಾರೆ. ಹೈಕೋರ್ಟ್ ನಲ್ಲಿ ಈ ಅರ್ಜಿ ವಿಚಾರಣೆಗೆ ಬರಬೇಕಿದೆ.

# ಜನಗಣತಿಗೆ ನೇಮಕ: ಶಿಕ್ಷಕರ ವಿರೋಧ

## ಎಸ್ಸೆಸ್ಸೆಲ್ಸಿ ಪರೀಕ್ಷೆ ಮೌಲ್ಯಮಾಪಕರ ಬಳಕೆಗೆ ಶಿಕ್ಷಕರ ಸಂಘದ ಅಸಮಾಧಾನ

**ಬೆಂಗಳೂರು:** ರಾಜ್ಯದ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ 1 ಲಕ್ಷಕ್ಕೂ ಹೆಚ್ಚು ಸರ್ಕಾರಿ ಶಾಲಾ ಶಿಕ್ಷಕರನ್ನು ಜನಗಣತಿ ಕಾರ್ಯಕ್ಕೆ ನೇಮಕ ಮಾಡಲಾಗಿದೆ. ಸರ್ಕಾರದ ವಿರುದ್ಧ ಶಿಕ್ಷಕರು ಮತ್ತು ಶಿಕ್ಷಕರ ಸಂಘಟನೆಗಳು ಆಕ್ರೋಶ ವ್ಯಕ್ತಪಡಿಸಿವೆ. ಅಲ್ಲದೆ, ಜನಗಣತಿ ಕಾರ್ಯದಿಂದ ಬಿಡುಗಡೆ ಮಾಡುವಂತೆ ಆಗ್ರಹಿಸಿದ್ದಾರೆ.

ರಾಜ್ಯದಲ್ಲಿ ಜನಗಣತಿ ಕಾರ್ಯ ಏಪ್ರಿಲ್ 16ರಿಂದ ಆರಂಭವಾಗಲಿದೆ. ಸ್ವಮೌಲ್ಯಮಾಪನ ಕ್ರಿಯೆ ಏಪ್ರಿಲ್ 1 ರಿಂದ 15ರವರೆಗೆ ನಡೆಯಲಿದೆ. ಜನಗಣತಿ ಪುಟ 2ಕ್ಕೆ




### ಅತ್ಯಂತ ಮಹತ್ವದ ಕೆಲಸ: ಸಚಿವ ಮಧು ಬಂಗಾರಪ್ಪ

ಜನಗಣತಿ ಕಾರ್ಯ ಅತ್ಯಂತ ಮಹತ್ವದ ಕೆಲಸ. ಮಾಹಿತಿ ಸಂಗ್ರಹಕ್ಕಾಗಿ ನಾವು ಶಿಕ್ಷಕರನ್ನು ಮಾತ್ರ ನಿಯೋಜಿಸಬೇಕಾಗಿದೆ. ಹೊರಗಿನ ಏಜೆನ್ಸಿಗಳನ್ನು ಬಳಸಲು ಸಾಧ್ಯವಿಲ್ಲ. ನಮಗೂ ಸಮಸ್ಯೆ ಅರ್ಥವಾಗುತ್ತದೆ. ಆದರೆ ಮುಖ್ಯ ಕೆಲಸಕ್ಕಾಗಿ ಪುಟ 2ಕ್ಕೆ

### ಆರೋಗ್ಯ ಸಮಸ್ಯೆ: ವಿನಾಯಿತಿಗೆ ಮನವಿ

**ಬೆಂಗಳೂರು:** ತೀವ್ರ ಆರೋಗ್ಯ ಸಮಸ್ಯೆ ಇರುವ ಮತ್ತು 50 ವರ್ಷಕ್ಕಿಂತ ಮೇಲ್ಪಟ್ಟ ಶಿಕ್ಷಕರಿಗೆ ಜನಗಣತಿ ಕರ್ತವ್ಯದಿಂದ ವಿನಾಯಿತಿ ನೀಡುವಂತೆ ಕಂದಾಯ ಇಲಾಖೆಗೆ ಪತ್ರ ಬರೆಯಲಾಗಿದೆ ಎಂದು ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ (ಕೆಪಿಎಸ್‌ಟಿಎ) ಅಧ್ಯಕ್ಷ ಚಂದ್ರಶೇಖರ್ ಪುಟ 2ಕ್ಕೆ

# ಬಕೆಟ್ ನೀರಿನಲ್ಲಿ ಮುಳುಗಿ ಮಗು ಸಾವು: ಶಾಕ್‌ಗೆ ತಾಯಿ ಆತ್ಮಹತ್ಯೆ

**ಬೆಂಗಳೂರು:** ಒಣಹಾಕಿದ್ದ ಬಟ್ಟೆ ತರಲು ಹೋಗಿದ್ದ ವೇಳೆ ನೀರಿನ ಬಕೆಟ್‌ನಲ್ಲಿ ಮುಳುಗಿ ಮಗು ಸಾವನ್ನಪ್ಪಿದ್ದನ್ನು ನೋಡಿ ಶಾಕ್‌ಗೆ ಒಳಗಾದ ತಾಯಿ ಆತ್ಮಹತ್ಯೆ ಮಾಡಿಕೊಂಡ ದುರಂತ ಘಟನೆ ನಗರದ ಭೈರವೇಶ್ವರ ನಗರದಲ್ಲಿ ನಡೆದಿದೆ.

ಮಗು ಅಗಸ್ತ್ಯ ನೀರಿನಲ್ಲಿ ಮುಳುಗಿ ಸಾವನ್ನಪ್ಪಿದೆ. ತಾಯಿ ಪ್ರತಿಭಾ (29) ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮನೆಯಲ್ಲಿ ತಾಯಿ, ಮಗು ಇಬ್ಬರೇ ಇದ್ದಾಗ ಘಟನೆ ನಡೆದಿದೆ. ಪ್ರತಿಭಾ ಮತ್ತು ಮಹಂತೇಶ್ ಇಬ್ಬರೂ ಸಾಫ್ಟ್‌ವೇರ್ ಉದ್ಯೋಗಿಗಳಾಗಿದ್ದರು. ಪ್ರತಿಭಾ ವರ್ಕ್ ಫ್ರಂ ಹೋಂ ಮಾಡುತ್ತಿದ್ದರು. ಗಂಡ ಮಹಂತೇಶ್ ಕೆಲಸದ ನಿಮಿತ್ತ ಹೊರಗೆ ಹೋಗಿದ್ದರು. ರಾತ್ರಿ ಪತಿ ಮಹಂತೇಶ್ ವಾಪಸ್ ಬಂದು ನೋಡಿದಾಗ ಘಟನೆ ಬೆಳಕಿಗೆ ಬಂದಿದೆ.

ಪತ್ನಿ ಬಾಗಿಲು ಓಪನ್ ಮಾಡದಿದ್ದಾಗ ಮಹಂತೇಶ್ ತನ್ನ ಬಳಿ ಇದ್ದ ಕೀಲಿಯಿಂದ ಬಾಗಿಲು ಓಪನ್ ಮಾಡಿದ್ದಾರೆ. ಒಳಗೆ ಬಂದು ನೋಡಿದಾಗ ಪ್ರತಿಭಾ ನೇಣಿಗೆ ಶರಣಾಗಿದ್ದರೆ ಮಗು ಹಾಸಿಗೆ ಮೇಲೆ ಮಲಗಿದ ಸ್ಥಿತಿಯಲ್ಲಿತ್ತು.




ಮಗುವನ್ನು ನೋಡಿದಾಗ ಮಗು ಕೂಡ ಮೃತ ಪಟ್ಟಿರುವುದು ದೃಢಪಟ್ಟಿದೆ. ಪಕ್ಕದಲ್ಲಿ ಪತ್ನಿ ಬರೆದಿಟ್ಟ ಡೆತ್ ನೋಟ್ ಕೂಡ ಪತ್ತೆಯಾಗಿದೆ. ಡೆತ್ ನೋಟ್ ಪಕ್ಕದಲ್ಲಿ ಖಾಲಿಯಾಗಿದ್ದ 15 ಮಾತ್ರೆಗಳ ಶೀಟ್ ಪತ್ತೆಯಾಗಿದೆ. ಡೆತ್‌ನೋಟ್‌ನಲ್ಲಿ ಪತ್ನಿ ಬಿಚ್ಚಿಟ್ಟ ಸತ್ಯ ನೋಡಿ ಪತಿ ಶಾಕ್ ಆಗಿದ್ದಾರೆ.

ಡೆತ್‌ನೋಟ್‌ನಲ್ಲಿ ಏನಿದೆ: ನಾನು ಒಣಹಾಕಿದ್ದ ಬಟ್ಟೆ ತರಲು ಟೆರೆಸ್‌ಗೆ ಹೋಗಿದ್ದೆ. ಈ ವೇಳೆ ಮಗು

## ಅಪಪ್ರಚಾರಕ್ಕೆ ನೊಂದು ವಿದ್ಯಾರ್ಥಿನಿ ಆತ್ಮಹತ್ಯೆ

**ಚಿತ್ರದುರ್ಗ:** ಅಧ್ಯಾಪಕನ ಜೊತೆ ಸಂಬಂಧ ಕಲ್ಪಿಸಿ ಗೆಳತಿಯರು ಅಪಪ್ರಚಾರ ನಡೆಸಿದ್ದ ಹಿನ್ನೆಲೆಯಲ್ಲಿ ಮನನೊಂದು ಬಿಎಎಂಎಸ್ ವಿದ್ಯಾರ್ಥಿನಿ ನೇಣಿಗೆ ಶರಣಾಗಿರುವ ಘಟನೆ



ಚಿತ್ರದುರ್ಗ ಜಿಲ್ಲೆ ಹೊಳಲ್ಕೆರೆ ನಗರದ ಬಸವ ಲೇಔಟ್‌ನಲ್ಲಿ ನಡೆದಿದೆ. ನಿಖಿತಾ (23) ನೇಣಿಗೆ ಶರಣಾದ ವಿದ್ಯಾರ್ಥಿನಿ. ಡೆತ್ ನೋಟ್ ಬರೆದಿಟ್ಟು ನಿಖಿತಾ ನೇಣಿಗೆ ಶರಣಾಗಿದ್ದಾಳೆ. ಅಧ್ಯಾಪಕರೊಬ್ಬರ ಜೊತೆ ಸಂಬಂಧ ಕಲ್ಪಿಸಿ ಅಪಪ್ರಚಾರ ಮಾಡುತ್ತಿದ್ದ ಹಿನ್ನೆಲೆ ಡೆತ್‌ನೋಟ್‌ನಲ್ಲಿ ಅಧ್ಯಾಪಕ ರಾಜು, ಪತ್ನಿ ನಿಶಾ ಹಾಗೂ ಕೆಲವು ವಿದ್ಯಾರ್ಥಿನಿಯರ ಹೆಸರು ಬರೆದಿಟ್ಟು ನಿಖಿತಾ ಆತ್ಮಹತ್ಯೆಗೆ ಶರಣಾಗಿದ್ದಾಳೆ. ಅವರ ವಿರುದ್ಧ ಹೊಳಲ್ಕೆರೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ನಾನು ಸಿಎಂ ಆದರೆ ಮುಸ್ಲಿಮರಿಗೆ ಅಲ್ಪಸಂಖ್ಯಾತರ ಪಟ್ಟಿಯಿಂದ ಕೊಕ್

**ವಿಜಯಪುರ:** ನಾನು ಸಿಎಂ ಆಗಿ ಮೊದಲ ಕ್ಯಾಬಿನೆಟ್‌ನಲ್ಲೇ ಮುಸ್ಲಿಂಮರನ್ನು ಅಲ್ಪಸಂಖ್ಯಾತ ಪಟ್ಟಿಯಿಂದ ಹೊರಾಹಾಕುತ್ತೇನೆ. ರಾಜ್ಯದಲ್ಲಿ ಯೋಗಿ ಆದಿತ್ಯನಾಥ ಆಡಳಿತ ನಡೆಸುತ್ತೇನೆ ಎಂದು



ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದರು.

ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಆಂಜನೇಯನ ಸನ್ನಿಧಾನದಲ್ಲಿ ನಿಂತು ಹೇಳುತ್ತೇನೆ. ನಾನು ಯಾವುದೇ ಕಾರಣಕ್ಕೂ ಬಿಜೆಪಿಗೆ ಸೇರಿಸಿಕೊಳ್ಳಿ ಅಂತ ಕೇಳಲ್ಲ. ಅವರಾಗಿಯೇ ಅಪ್ಪ, ಮಗನ ಕೈ ಬಿಟ್ಟು ನನ್ನನ್ನು ಬಿಜೆಪಿಗೆ ಬನ್ನಿ ಅಂತಾ ಕರೆಯುತ್ತಾರೆ. ಬಳಿಕ ಸಿಎಂ ಆಗಿ ರಾಜ್ಯದಲ್ಲಿ ಯೋಗಿ ಆದಿತ್ಯನಾಥ ತರಹ ರಾಜ್ಯಭಾರ ಮಾಡುತ್ತೇನೆ. ಸಿಎಂ ಆದ ಮೊದಲ ಕ್ಯಾಬಿನೆಟ್ ಪುಟ 2ಕ್ಕೆ

## ವಾಣಿಜ್ಯ–ಕೈಗಾರಿಕಾ ವಲಯಕ್ಕೆ 2 ವರ್ಷ ರಿಯಾಯಿತಿ ವಿದ್ಯುತ್ ಯೋಜನೆ ವಿಸ್ತರಣೆ

**ಬೆಂಗಳೂರು:** ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ ವಾಣಿಜ್ಯ–ಕೈಗಾರಿಕಾ ವಲಯಕ್ಕೆ ಬಂಪರ್ ಕೊಡುಗೆ ನೀಡಿದೆ. ರಿಯಾಯಿತಿ ವಿದ್ಯುತ್ ದರ ಯೋಜನೆಯನ್ನು ಮುಂದಿನ ಎರಡು ವರ್ಷಗಳ ಅವಧಿಗೆ 2027–28ನೇ ಹಣಕಾಸು ವರ್ಷದ ವರೆಗೆ ವಿಸ್ತರಿಸಿದೆ.



ಈ ಯೋಜನೆಯಿಂದ ಹೊರಗಿದ್ದ 'ಓಪನ್ ಆಕ್ಸೆಸ್' (ಮುಕ್ತ ಪ್ರವೇಶ) ಗ್ರಾಹಕರಿಗೂ ಈಗ ಈ ಯೋಜನೆ ಲಾಭ ಪಡೆಯಲು ಅವಕಾಶ ನೀಡಲಾಗಿದೆ. ಈ ಹಿಂದೆ ಕೇವಲ ಎಚ್.ಟಿ ಗ್ರಾಹಕರಿಗೆ ಮಾತ್ರ ಸೀಮಿತವಾಗಿದ್ದ ಈ ಯೋಜನೆಯನ್ನು ಈಗ ಎಲ್‌ಟಿ–3 (ವಾಣಿಜ್ಯ) ಮತ್ತು ಎಲ್‌ಟಿ–5 (ವಾಣಿಜ್ಯ, ಕೈಗಾರಿಕಾ ಮತ್ತು ಕೃಷಿ ಗ್ರಾಹಕರು) ಸ್ಥಾವರಗಳಿಗೂ ವಿಸ್ತರಿಸಿದೆ.

ಮೂಲ ಬಳಕೆಗಿಂತ ಹೆಚ್ಚಿನ ವಿದ್ಯುತ್ ಬಳಸುವ ಗ್ರಾಹಕರಿಗೆ ರಿಯಾಯಿತಿ ದರದಲ್ಲಿ ವಿದ್ಯುತ್ ಲಭ್ಯವಾಗಲಿದೆ. ಪ್ರಸ್ತುತ ಈ ರಿಯಾಯಿತಿ ದರ ಪ್ರತಿ ಯೂನಿಟ್‌ಗೆ ಸುಮಾರು ರೂ.5 ರಷ್ಟಿದೆ. ಓಪನ್ ಆಕ್ಸೆಸ್ ಗ್ರಾಹಕರು ಈ ಯೋಜನೆಗೆ ಸೇರಲು ಹಳೆಯ ವ್ಯವಸ್ಥೆಗಳನ್ನು ತ್ಯಜಿಸಬೇಕಾದ ಅನಿವಾರ್ಯತೆಯನ್ನು ಕೆ.ಇ.ಆರ್.ಸಿ ತೆಗೆದುಹಾಕಿದೆ. ಈ ಕ್ರಮವು ರಾಜ್ಯದಲ್ಲಿ ಕೈಗಾರಿಕಾ ಚಟುವಟಿಕೆಗಳನ್ನು ಉತ್ತೇಜಿಸಲು ಮತ್ತು ಹೆಚ್ಚುವರಿ ಪುಟ 2ಕ್ಕೆ

## ಮುಂಗಾರು ಹಂಗಾಮಿಗೆ ಸಮರ್ಪಕ ಗೊಬ್ಬರ ದಾಸ್ತಾನು

**ಬೆಂಗಳೂರು:** ಮಧ್ಯಪ್ರಾಚ್ಯ ಬಿಕ್ಕಟ್ಟಿನ ಹಿನ್ನಲೆಯಲ್ಲಿ ಮುಂಗಾರು ಹಂಗಾಮಿಗೆ ರಸಗೊಬ್ಬರ ಸಮಸ್ಯೆ ಆಗದಂತೆ ಪರಿಣಾಮಕಾರಿ ನಿರ್ವಹಣೆಗೆ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಆದೇಶದಂತೆ ಕೃಷಿ ಇಲಾಖೆ ಕಟ್ಟುನಿಟ್ಟಿನ ಕ್ರಮಕೈಗೊಂಡಿದೆ.

ಮಧ್ಯಪ್ರಾಚ್ಯ ಅಸ್ಥಿರತೆ ಹಿನ್ನಲೆ ಗೊಬ್ಬರ ಉತ್ಪಾದನೆಗೆ ಅಗತ್ಯವಿರುವ ಕಚ್ಚಾ ವಸ್ತುಗಳ ಆಮದು ವ್ಯತ್ಯಯವಾಗುವ ಸಾಧ್ಯತೆ ಇರುವುದರಿಂದ ರಾಜ್ಯದಲ್ಲಿ ಗೊಬ್ಬರ ಪೂರೈಕೆಗೆ ಅಡ್ಡಿಯಾಗುವ ಆತಂಕ ವ್ಯಕ್ತವಾಗಿದೆ. ಹೀಗಾಗಿ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳಿ ಮತ್ತು ರಾಜ್ಯ ಬೀಜ ನಿಗಮದಿಂದ ಕಾಪು ದಾಸ್ತಾನು ವ್ಯವಸ್ಥೆ ಬಲಪಡಿಸಿದೆ. ಪ್ರಸ್ತುತ 28224 ಮೆಟ್ರಿಕ್ ಟನ್ ಗೊಬ್ಬರ ಕಾಪು ದಾಸ್ತಾನಿನಲ್ಲಿ ಲಭ್ಯವಿದ್ದು, ಯೂರಿಯಾ ಮತ್ತು ಡಿ.ಎ.ಪಿ ಗೊಬ್ಬರವನ್ನು ಶೇ.25ರಷ್ಟು ಕಡ್ಡಾಯವಾಗಿ ಸಂಗ್ರಹಿಸಲು ಸೂಚಿಸಲಾಗಿದೆ.

ಅಲ್ಲದೆ, ಕೇಂದ್ರ ಸರ್ಕಾರ ರಾಜ್ಯಕ್ಕೆ ಒಟ್ಟು 30.05 ಲಕ್ಷ ಪುಟ 2ಕ್ಕೆ

# ಆರೋಗ್ಯಕ್ಕಾಗಿ 2209ಕಿ.ಮೀ. ಸೈಕಲ್ ಯಾತ್ರೆ

**ಮೈಸೂರು:** ಆತ ಹೂವಿನ ವ್ಯಾಪಾರಿ ಅಷ್ಟಕ್ಕೆ ಸುಮ್ಮನಾಗದೇ ಸಮಾಜದಲ್ಲಿ ಆರೋಗ್ಯ ಜಾಗೃತಿ ಮೂಡಿಸಲೇಬೇಕೆಂದು ಹಠಕ್ಕೆ ಬಿದ್ದು ಬರೋಬ್ಬರಿ ರಾಜಕೋಟ್ ನಿಂದ ರಾಮೇಶ್ವರಂವರೆಗೂ 2209ಕಿ.ಮೀ. ಸೈಕಲ್ ಯಾತ್ರೆ ಕೈಗೊಂಡು ಈಗ ಗಮನ ಸೆಳೆದಿದ್ದಾನೆ.

ಹೌದು ಪ್ರಧಾನಿ ನರೇಂದ್ರಮೋದಿಯವರ ತವರು ರಾಜ್ಯ ಗುಜರಾತ್ ನ ರಾಜಕೋಟ್ ನಿವಾಸಿಯಾದ 68ರ ಹರೆಯದ ನಟವರ್ ಸಿಂಗ್ ಜೆ.ಸೋಲೇಕಿ ಎಂಬುವವರೇ ಇಂತಹದೊಂದು ಸೈಕಲ್ ಯಾತ್ರೆಯ ಪ್ರಯಾಣ ಬೆಳೆಸಿ ಮಾರ್ಗ ಮಧ್ಯೆ ಸಿಕ್ಕಿ ಮೈಸೂರು ತಲುಪಿದವರಾಗಿದ್ದಾರೆ.

ಜಿಮ್‌ಗೆ ಹೋಗುವ ಬದಲು ಪ್ರತಿದಿನ ಸೈಕಲ್ ಓಡಿಸುವ ಅಭ್ಯಾಸ ಬೆಳೆಸಿಕೊಳ್ಳಬೇಕು ಎಂಬ ಸಂದೇಶವನ್ನು ಸಮಾಜಕ್ಕೆ ಸಾರುವ ಉದ್ದೇಶ. ದೈಹಿಕ ಆರೋಗ್ಯ ಹಾಗೂ ಪರಿಸರ ಸಂರಕ್ಷಣೆ ಎರಡಕ್ಕೂ ಸೈಕಲ್ ಉತ್ತಮ ಸಾಧನವಾಗಿದ್ದು, ಯುವಕರು ಹಾಗೂ ಸಾರ್ವಜನಿಕರು ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು ಎಂಬ ಆಶಯದೊಂದಿಗೆ 1750 ಕಿಲೋಮೀಟರ್ ಸೈಕಲ್ ಸವಾರಿ ನಡೆಸಿ ಮೈಸೂರಿಗೆ ಬಂದಿರುವುದಾಗಿ




ತಿಳಿಸಿದ್ದಾರೆ.

ಹೂವಿನ ವ್ಯಾಪಾರ ನಡೆಸುವುದರ ಜೊತೆಗೆ ಅಗರಬತ್ತಿ ತಯಾರಿಕಾ ಉದ್ಯಮದಲ್ಲಿಯೂ ತೊಡಗಿಸಿಕೊಂಡಿದ್ದು, ಈ ಸೈಕಲ್ ಸವಾರಿಗೆ ವಯಸ್ಸು ಅಡ್ಡಿಯಾಗುವುದಿಲ್ಲ ಎನ್ನುವ ಅವರು ದಾರಿಯಲ್ಲಿ ಸಿಕ್ಕವರಿಗೆ ಆರೋಗ್ಯ ಜಾಗೃತಿ ಮೂಡಿಸುತ್ತಾ ಸಿಕ್ಕ ಪ್ರೇಕ್ಷಣಿ ಸ್ಥಳಗಳನ್ನು ನೋಡುತ್ತಾ ಮುಂದೆ ಸಾಗುತ್ತಿದ್ದಾರೆ. ಸಾಧ್ಯವಾದಷ್ಟು ಬೆಳ್ಳಿಗ್ಗೆ ಸಂಜೆ ಸೈಕಲ್ ಸವಾರಿ ನಡೆಸಿ ಮಧ್ಯಾಹ್ನದ ವೇಳೆ ಕೊಂಚ ನಗರಗಳಲ್ಲಿ ಸಿಕ್ಕ ಮಂದಿಗೆ ಆರೋಗ್ಯ ಪಾಠ, ತಾವು ಕೈಗೊಂಡ ಯಾತ್ರೆಯ ಬಗ್ಗೆ ತಮ್ಮದೇ ಭಾಷೆಯಲ್ಲಿ ತಿಳಿಸುವ ಪ್ರಯತ್ನ ನಡೆಸಿ ಗಮನ ಸೆಳೆದಿದ್ದಾರೆ.

> ನನಗೆ ಇಬ್ಬರೂ ಹೆಣ್ಣು ಮಕ್ಕಳು ಇಬ್ಬರಿಗೂ ಮದುವೆ ಮಾಡಿ ನೆಮ್ಮದಿಯಾಗಿದ್ದೇನೆ. ಇಂದಿನ ಜೀವನದಲ್ಲಿ ಆರೋಗ್ಯವೇ ಬಹುಮುಖ್ಯ. ಜನರು ಹಣದ ಹಿಂದೆ ಓಡುವುದನ್ನು ಬಿಟ್ಟು ಆರೋಗ್ಯದ ಕಡೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಸರ್ಕಾರವೂ ಆರೋಗ್ಯ ಕ್ಷೇತ್ರವನ್ನೇ ಮೊದಲ ಆದ್ಯತೆಯಾಗಿ ಪರಿಗಣಿಸಬೇಕೆಂಬುದೇ ನನ್ನಾಸೆ.
>
> **ನಟವರ್ ಜೆ.ಸೋಲೇಕಿ**
> ಸೈಕಲ್ ಯಾಂತ್ರಿಕ

# ಸಿದ್ದರಾಮಯ್ಯ ದಾಖಲೆ ಸಾಲ ವೀರ!

## ತಮ್ಮ ವೈಫಲ್ಯ ಮುಚ್ಚಿಕೊಳ್ಳಲು ಕೇಂದ್ರದ ವಿರುದ್ಧ ಟೀಕೆ: ಬೊಮ್ಮಾಯಿ ವಾಗ್ದಾಳಿ

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ವೈಫಲ್ಯ ಮುಚ್ಚಿಕೊಳ್ಳಲು ಕೇಂದ್ರ ಸರ್ಕಾರದ ವಿರುದ್ಧ ಮಾತನಾಡುತ್ತಿದ್ದಾರೆ. ಅವರು ದಾಖಲೆ ಸಾಲ ವೀರ ಎಂದು ಸಂಸದ ಬಸವರಾಜ ಬೊಮ್ಮಾಯಿ ವಾಗ್ದಾಳಿ ನಡೆಸಿದರು.

ಕೇಂದ್ರ ಸರ್ಕಾರದ ವಿರುದ್ಧ ಸಿದ್ದರಾಮಯ್ಯ ವಾಗ್ದಾಳಿ ನಡೆಸುತ್ತಿರುವ ಹಿನ್ನೆಲೆಯಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಲ ಮಾಡುವುದರಲ್ಲಿ ನಿಸ್ಸೀಮ. ಯಾರ ಅವಧಿಯಲ್ಲಿ ಎಷ್ಟು ಸಾಲ ಮಾಡಲಾಗಿದೆ ಎನ್ನುವ ಎಲ್ಲ ದಾಖಲೆಗಳನ್ನು ಬಹಿರಂಗ ಪಡಿಸಲಿ ಎಂದು ಆಗ್ರಹಿಸಿದರು.

ರಾಜಕೀಯ ಲಾಭಕ್ಕಾಗಿ ಗ್ಯಾರೆಂಟಿ ಯೋಜನೆಗಳನ್ನು ಜಾರಿಗೆ ತಂದರು. ಆದರೆ, ಮೊದಲ ಬಜೆಟ್‌ನಿಂದಲೇ ಲ್ಯಾಂಡ್ ಸ್ಟಾಂಪ್ ಡ್ಯೂಟಿ,



ಅಬಕಾರಿ ತೆರಿಗೆ, ಮೋಟಾರ್ ವಾಹನ ತೆರಿಗೆ, ಹಾಲಿನ ದರ, ವಿದ್ಯುತ್ ದರ ಹೆಚ್ಚಿಸಿ ಗ್ಯಾರಂಟಿ ಭಾರವನ್ನು ಜನರ ಮೇಲೆ ಹಾಕಿದರು. ಎಂದು ಕಿಡಿಕಾರಿದರು.

ನಮ್ಮ ಕಾಲದಲ್ಲಿ 50 ಸಾವಿರ ಕೋಟಿ ಸಾಲ ಮಾಡಿದ್ದರೆ ಅವರ ಅವಧಿಯಲ್ಲಿ 1 ಲಕ್ಷ 40 ಸಾವಿರ ಕೋಟಿ ಸಾಲ ಮಾಡಲಾಗಿದೆ. ಇದನ್ನು ಅವರೇ ಪುಟ 2ಕ್ಕೆ

# ಮೈಸೂರು ಆಟೋ ಚಾಲಕರಿಗೆ ಗ್ಯಾಸ್ ಟ್ರಬಲ್



ಮೈಸೂರು: ಮಧ್ಯಪ್ರಾಚ್ಯ ರಾಷ್ಟ್ರಗಳಲ್ಲಿ ನಡೆಯುತ್ತಿರುವ ಯುದ್ದದಿಂದ ಅನಿಲ ಪೂರೈಕೆಯಲ್ಲಿ ವ್ಯತ್ಯಯವಾಗಿ ಮೈಸೂರಿನ ಆಟೋ ಚಾಲಕರಿಗೆ ಸಂಕಷ್ಟ ಉಂಟಾಗಿದೆ.

ವಾಣಿಜ್ಯ ಸಿಲಿಂಡರ್ ದರ ತಿಂಗಳಲ್ಲಿ 450ಕ್ಕಿಂತಲೂ ಅಧಿಕ ಬೆಲೆ ಏರಿಕೆಯಾಗಿದೆ. ಹೋಟಲ್ ಉದ್ಯಮ ನೆಲಕಚ್ಚಿದೆ. ಅದರ ಜೊತೆಗೆ ವಾಹನಗಳ ಸಂಚಾರಕ್ಕೆ ಅತ್ಯಗತ್ಯವಾಗಿ ಬೇಕಾಗಿರುವ ಎಲ್.ಪಿ.ಜಿ, ಸಿ.ಎನ್.ಜಿ ಗ್ಯಾಸ್ ಬೆಲೆಯೂ



ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದೆ. ಮತ್ತೆ ದುಡ್ಡು ಕೊಟ್ಟರೂ ಗ್ಯಾಸ್ ಸಿಗದಷ್ಟು ಅಭಾವ ಉಂಟಾಗಿದೆ. ಮೈಸೂರಿನಲ್ಲಿ ನೂರಾರು ಆಟೋಗಳು ಗ್ಯಾಸ್ ಸಿಗದೆ ನಿಂತಲ್ಲೆ ನಿಂತಿವೆ. ದುಡಿಮೆ ಇಲ್ಲದೆ ಆಟೋ ಚಾಲಕರ ಬದುಕು ಸಂಕಷ್ಟಕ್ಕೆ ಸಿಲುಕುವಂತಾಗಿದೆ.

ಅನಿಲಕ್ಕಾಗಿ ಪೆಟ್ರೋಲ್ ಬಂಕ್ ಗಳ ಮುಂದೆ ಕಿಲೋಮೀಟರ್ ಗಂಟ್ಟಲೇ ಸರತಿ ಸಾಲಿನಲ್ಲಿ ನಿಲ್ಲುವ ಪರಿಸ್ಥಿತಿ ನಿರ್ಮಾಣವಾಗಿದೆ. ಮೈಸೂರಿನ ಬಹುತೇಕ ಎಲ್ ಪಿಜಿ ಮತ್ತು ಸಿಎನ್ ಜಿ ಬಂಕ್ ಗಳಲ್ಲಿ ಗ್ಯಾಸ್ ಸಿಗುತ್ತಿಲ್ಲ. ಬಂಕ್ ಗಳ ಮುಂದೆ ನೋ ಸ್ಟಾಕ್ ಬೋರ್ಡ್ ಹಾಕಲಾಗಿದೆ. ಆಟೋಗಳಿಗೆ ಬಳಸುವ ಎಲ್ಪಿಜಿ ಗ್ಯಾಸ್ ಬೆಲೆ ಕಳೆದ ತಿಂಗಳು 58ರೂ. ಇತ್ತು. ಗುರುವಾರ ಮಧ್ಯಾಹ್ನದ ಹೊತ್ತಿಗೆ 90ರೂ. ಏರಿಕೆ ಕಂಡಿದೆ. ಸಿಎನ್ ಜಿ ದರವೂ ಕೂಡ ಏರಿಕೆಯಾಗಿದೆ. ಬೆಲೆ ಏರಿಕೆಯಿಂದ ಆಟೋ ಮತ್ತು ಕ್ಯಾಬ್ ಚಾಲಕರು ಹೆಚ್ಚುವರಿ ದರ ಕೇಳುತ್ತಾರೆ. ಇದರಿಂದ ಸಾರ್ವಜನಿಕರ ಜೇಬಿಗೂ ಕತ್ತರಿ ಬೀಳುತ್ತಿದೆ. ಸರಿಯಾಗಿ ಬಾಡಿಗೆ ಸಿಗುತ್ತಿಲ್ಲ ಇತ್ತ ಗ್ಯಾಸ್ ಸಿಗುತ್ತಿಲ್ಲ ನಮ್ಮ ಕುಟುಂಬ ನಿರ್ವಹಣೆ ಮಾಡೋದಾದರೂ ಹೇಗೆ ಎಂದು ತಮ್ಮ ಅಳಲು ಹೇಳಿಕೊಂಡರು.

# ತೆರವಿಗೆ ವಿಧಿಸುವಲ್ಲಿಯೂ ಸಿದ್ದು ದಾಖಲೆ

ಮೈಸೂರು: ದಾಖಲೆಗಳ ಸರದಾರ ಮುಖ್ಯಮಂತ್ರಿ ಸಿದ್ದರಾಮಯ್ಯ ತೆರಿಗೆಗಳನ್ನು ವಿದಿಸುವುದರಲ್ಲಿ ದಾಖಲೆ ನಿರ್ಮಾಣ ಮಾಡುತ್ತಿದ್ದಾರೆ ಬಿಜೆಪಿ ಜಿಲ್ಲಾ ವಕ್ತಾರ ಎಂ.ಎ.ಮೋಹನ್ ಕಿಡಿಕಾರಿದರು.



▸▸ ಬಿಜೆಪಿ ಜಿಲ್ಲಾ ವಕ್ತಾರ ಎಂ.ಎ.ಮೋಹನ್ ಕಿಡಿ

ಹೊಸ ಆರ್ಥಿಕ ವರ್ಷದಲ್ಲಿ ವಿದ್ಯುತ್ ಮತ್ತು ನೀರು ಸೇರಿ ಎಲ್ಲಾ ಬಾಪುಗಳ ಮೇಲು ತೆರಿಗೆ ದರವನ್ನು ನೀರ್ದಾಕ್ಷಿಣವಾಗಿ ಅತಿ ಸಂತಸದಿಂದ ವಿಧಿಸಿರುತ್ತಾರೆ. ಇಷ್ಟೇಲ್ಲಾ ಏರಿಸಿದರು ಬಜೆಟ್‌ನ ಖೋತಾವನ್ನು ಸರಿ ದೂಗಿಸಲು ಸಾಧ್ಯವಾಗಿಲ್ಲ. ನೆನ್ನೆಯಿಂದ ಜಾರಿಗೆ ಬರುವಂತೆ ಮೈಸೂರು ನಗರ ಪಾಲಿಕೆಯು ತನ್ನ ವ್ಯಾಪ್ತಿಯಲ್ಲಿ ಬರುವ ಸ್ವತ್ತುಗಳ ಮೇಲೆ ಮಾರ್ಗಸೂಚಿ ಮೌಲ್ಯದ ಮೇಲೆ ಶೇ5ರಷ್ಟು ಹೆಚ್ಚಳವನ್ನು ಮಾಡಿ ಆದೇಶವನ್ನು ಮಾಡಿದೆ. ದ್ವಿಚಕ್ರ ವಾಹನಕ್ಕೆ 100 ರೂ., ತ್ರಿಚಕ್ರ ವಾಹನ 200 ರೂ ಮತ್ತು ನಾಲ್ಕು ಚಕ್ರ ವಾಹನಕ್ಕೆ 500 ರೂ.ರಂತೆ ಮೋಟಾರು ವಾಹನ ಉಪ ಕರವನ್ನು ಜಾರಿಗೊಳಿಸಿದ್ದಾರೆಂದರು. ಆಸ್ತಿ ತೆರಿಗೆ ವಿದಿಸುವುದಲ್ಲಿ ಮತ್ತು ಇಂತಹ ಮೋಟಾರು ವಾಹನಗಳ ಮೇಲೆ ತೆರಿಗೆ ವಿದಿಸುವಲ್ಲಿ ವಿದೇಶಗಳ ಮಾದರಿಯನ್ನು ಅನುಸರಿಸುತ್ತಿರುವ ನಗರ ಪಾಲಿಕೆಯು ವಿದೇಶಿಗಳ ರೀತಿಯಲ್ಲಿ ಜನ ಸಾಮಾನ್ಯರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿದ್ದರೆ ಯಾವುದೇ ಆಕ್ಷೇಪಣೆ ಇರುತ್ತಿರಲಿಲ್ಲ, ಒಳಚರಂಡಿ ವ್ಯವಸ್ಥೆ ಗಬ್ಬದ್ದೆ ನಾರುತ್ತಿದೆ. ದೂರಗಳನ್ನು ದಾಖಲಿಸಿ ಮೂರು ದಿನವಾದರೂ ಸುಪಡಿಸುವ ಬಗ್ಗೆ ಗೋಜಿಗೆ ಹೋಗುವುದಿಲ್ಲ ಎಂದು ಹೇಳಿದರು. ನಗರ ಪಾಲಿಕೆ ಸಂಚಾರಕ್ಕೆ ಬಳಸಲು ಸೂಕ್ತವಾದ ವಾಹನಗಳ ಮೇಲೆ ಕರ ವಿಧಿಸಿರುವುದು ಹಾಸ್ಯಸ್ಪದ ಮತ್ತು ಪ್ರಶ್ನಾರ್ಹವಾಗಿರುತ್ತದೆ ಮತ್ತು ಸೌಕರ್ಯವನ್ನೇ ಒದಗಿಸದೆ ತೆರೆಗೆ ವಿಧಿಸುವುದು ಕಾನೂನಿನಡಿಯಲ್ಲಿ ಆಕ್ಷೇಪವಾಗಿರುತ್ತದೆ. ಮೈಸೂರಿನದ್ಯಂತ ಮತ್ತೆ ಗ್ಯಾಸ್ ಮತ್ತು ವಿದ್ಯುಚಿಕ್ತಿಗಾಗಿ ಭೂಮಿ ಒಳಗೆ ಕೇಬಲ್ ಅಳವಡಿಕೆ ಅವೈಜ್ಞಾನಿಕವಾಗಿ ಮತ್ತು ಯಾವುದೇ ಮುಂಜಾಗ್ರುತ ಕ್ರಮವನ್ನು ವಹಿಸದೆ ಅವ್ಯಹತ್ತವಾಗಿ ನಡೆಯುತ್ತಿದೆ. ರಾಮಕೃಷ್ಣನಗರ ವಾಸು ಲೇಔಟ್ ನಲ್ಲಿ ಈ ಕೇಬಲ್ ಅಳವಡಿಕೆ ಕಾರ್ಯದಿಂದಾಗಿ ಒಬ್ಬ ಆಟೋ ಡ್ರೈವರ್ ಸಾವನ್ನಪ್ಪದ್ದಾನೆ. ಮೂಲ ಸೌರ್ಕಯ್ಯಗಳನ್ನು ಒದಗಿಸುವವರೆಗೆ ಮತ್ತು ಸಂಚಾರ ಯೋಗ್ಯ ರಸ್ತೆಗಳನ್ನು ನಿರ್ವಹಣೆ ಮಾಡುವವರಿಗೆ ಈಗ ವಿಧಿಸಿರುವ ಹೊಸ ತೆರೆಗೆಗಳನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದ್ದಾರೆ.

## ಮೊದಲ ಪುಟದಿಂದ

### ಜನಗಣತಿಗೆ ನೇಮಕ: ಶಿಕ್ಷಕರ ವಿರೋಧ

ಕಾರ್ಯಕ್ಕೆ ಶಿಕ್ಷಕರ ನೇಮಕ ಕುರಿತು ಅಸಮಾಧಾನ ವ್ಯಕ್ತವಾಗಿದೆ. ಎಸ್ಸೆಸ್ಸೆಲ್ಸಿ ಪರೀಕ್ಷಾ ಜವಾಬ್ದಾರಿ, ಪಠ್ಯಕ್ರಮ ಪೂರ್ಣಗೊಳಿಸುವುದು ಮತ್ತು ಈಗ ಜನಗಣತಿ ಕಾರ್ಯ ಎಲ್ಲವನ್ನೂ ಒಟ್ಟಿಗೆ ನಡೆಸಬೇಕಾಗಿದೆ. ಬೇಸಿಗೆ ಹೆಚ್ಚಾಗಿರುವುದರಿಂಧ ಬೆಳಿಗ್ಗೆ 6.30ರಿಂದ 11.30ರವರೆಗೆ ಮತ್ತು ಸಂಜೆ 4.30ರಿಂದ 8.30ರವರೆಗೆ ಕಾರ್ಯ ನಿರ್ವಹಿಸುವುದು ತುಂಬಾ ಕಷ್ಟಕರ ಎಂದು ಕೆಲವು ಶಿಕ್ಷಕರು ಒತ್ತಡ ಮತ್ತು ಆರೋಗ್ಯ ಸಮಸ್ಯೆ ಬಗ್ಗೆ ಆತಂಕ ವ್ಯಕ್ತಪಡಿಸಿದ್ದಾರೆ,

2025ರಲ್ಲಿ ಶಿಕ್ಷಕರನ್ನು ಸಾಮಾಜಿಕ ಮತ್ತು ಶಿಕ್ಷಣ ಸರ್ವೆ ಕಾರ್ಯದಲ್ಲಿ ಬಳಕೆ ಮಾಡಲಾಗಿತ್ತು. ಆ ಸಮಯದಲ್ಲಿ ದಸರಾ ರಜೆ ವಿಸ್ತರಿಸಲಾಯಿತು. ಆದರೆ, ನಂತರ ಪಠ್ಯಕ್ರಮ ಪೂರ್ಣಗೊಳಿಸುವ ಜವಾಬ್ದಾರಿ ಸಹ ಹೊರಿಸಲಾಗಿತ್ತು.

ಎಸ್ಸೆಸ್ಸೆಲ್ಸಿ ಪರೀಕ್ಷೆ ಏ.2ಕ್ಕೆ ಮುಗಿಯಲಿದೆ. ಏಪ್ರಿಲ್ 7ರಿಂದ 12ರವರೆಗೆ ನಾವು ಎಸ್ಸೆಸ್ಸೆಲ್ಸಿ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಮಾಡಬೇಕು. ನಂತರ ಏಪ್ರಿಲ್ 16ರಿಂದ ಜನಗಣತಿ ಕಾರ್ಯದಲ್ಲಿ ತೊಡಗಬೇಕಿದೆ. ಮತ್ತೆ ನಾವು ಮೇ 2026ರ ಮೊದಲ ವಾರದಿಂದ ಎಸ್ಸೆಸ್ಸೆಲ್ಸಿ ಪರೀಕ್ಷೆ –2ರ ಪರೀಕ್ಷಾ ಕರ್ತವ್ಯ ಮಾಡಬೇಕು. ಹೀಗೆ ವರ್ಷವಿಡೀ ನಿರ್ವಹಿಸುವುದು ಕಷ್ಟ ಎಂದು ಶಿಕ್ಷಕರು ತಿಳಿಸಿದ್ದಾರೆ.

### ದಾಖಲೆ ಸಾಲ ವೀರ!

ಬಜೆಟ್‌ನಲ್ಲಿ ಮಂಡಿಸಿದ್ದಾರೆ. ಈಗ ಚುನಾವಣೆ ಸಂದರ್ಭದಲ್ಲಿ ಸುಳ್ಳು ಹೇಳಿ ವಾಸ್ತವಾಂಶ ಮರೆಮಾಚುವ ಬದಲು, ದಾಖಲೆಗಳ ಆಧಾರದಲ್ಲಿ ನಿಜವನ್ನು ಮಾತನಾಡಬೇಕು ಎಂದು ಆಗ್ರಹಿಸಿದರು.

14ನೇ ಹಣಕಾಸು ಆಯೋಗದ ಷರತ್ತುಗಳನ್ನು ನಿರ್ಧರಿಸುವಾಗ ನಿಮ್ಮದೇ ಸರ್ಕಾರ ಇತ್ತು. ಅದನ್ನು ಅಂತಿಮಗೊಳಿಸುವಾಗ ನಿಮ್ಮ ನೇತೃತ್ವದ ಸಮ್ಮಿಶ್ರ ಸರ್ಕಾರದಲ್ಲಿ ಐದು ಮಂದಿ ಕಾಂಗ್ರೆಸ್ ಸಚಿವರು ಇದ್ದರು. ಆಗ ಮೌನವಾಗಿದ್ದವರು, ಈಗ ಅನ್ಯಾಯವಾಗಿದೆ ಎಂದು ಹೇಳುವುದು ಬೂಟಾಟಿಕೆ ಅಲ್ಲವೇ? ಎಂದು ಪ್ರಶ್ನಿಸಿದರು.

ಜಿಎಸ್‌ಟಿ ಜಾರಿಗೆ ತಂದಿದ್ದು ಯುಪಿಎ ಸರ್ಕಾರ. ಕಾನೂನುಗಳು ಅವರ ಅವಧಿಯಲ್ಲೇ ಜಾರಿಗೆ ಬಂದವು. ಜಿಎಸ್‌ಟಿ ಕುರಿತ ಎಲ್ಲಾ ನಿರ್ಧಾರಗಳು ಜಿಎಸ್‌ಟಿ ಕೌನ್ಸಿಲ್‌ನಲ್ಲಿ ಆಗುತ್ತವೆ. ಜಿಎಸ್ ಟಿ ಕೌನ್ಸಿಲ್ ನಲ್ಲಿ ಶಾಸ್ವತ ಸದಸ್ಯರಾಗಿ ರಾಜ್ಯ ಸರ್ಕಾರ ಇರುತ್ತದೆ. ಆದರೆ ಮುಖ್ಯಮಂತ್ರಿ ಒಂದು ಬಾರಿಯೂ ಜಿಎಸ್ ಟಿ ಕೌನ್ಸಿಲ್ ಸಭೆಗೆ ಹೋಗಿಲ್ಲ. ಅಲ್ಲಿ ಕಳಿಸಿರುವ ನಮ್ಮ ರಾಜ್ಯದ ಪ್ರತಿನಿಧಿಗಳು ರಾಜ್ಯದ ಹಿತ ಕಾಪಾಡಲು ಏನು ಕ್ರಮ ತೆಗೆದುಕೊಂಡಿದ್ದಾರೆ. ಅಲ್ಲಿ ಏನೂ ಮಾತನಾಡದೇ ಹೊರಗಡೆ ರಾಜಕಾರಣಕ್ಕಾಗಿ ಈ ಮಾತುಗಳನ್ನಾಡುವುದು ಸರಿಯಲ್ಲ ಎಂದು ಟೀಕಿಸಿದರು.

### ಮಗು ಸಾವು: ತಾಯಿ ಆತ್ಮಹತ್ಯೆ

ಆಟ ಆಡಿಕೊಂಡು ಬಚ್ಚಲು ಮನೆಗೆ ಹೋಗಿದೆ. ಆ ವೇಳೆ ಬಕೆಟ್‌ನಲ್ಲಿ ಮುಳುಗಿ ಸತ್ತಿದೆ. ನನ್ನ ಮಗುವನ್ನ ಉಳಿಸಿಕೊಳ್ಳಲು ಆಗಲಿಲ್ಲ. ನನ್ನ ಮಗುವಿನ ಸಾವಿಗೆ ನಾನೇ ಕಾರಣ. ಹೀಗಾಗಿ ನಾನು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದೇನೆ ಎಂದು ಪ್ರತಿಭಾ ಡೆತ್ ನೋಟ್‌ನಲ್ಲಿ ಬರೆದಿದ್ದಾರೆ. ಮೊದಲಿಗೆ ಪ್ರತಿಭಾ ಮಾತ್ರೆ ನುಂಗಿ ಕೈ ಕುಯ್ದುಕೊಂಡು ಆತ್ಮಹತ್ಯೆಗೆ ಯತ್ನಿಸಿದ್ದಾರೆ. ಆದರೆ ರಕ್ತ ಬಾರದ ಹಿನ್ನೆಲೆ ನೇಣಿಗೆ ಶರಣಾಗಿದ್ದಾರೆ. ಘಟನೆ ಸಂಬಂಧ ಚಂದ್ರಾಲೇಔಟ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ವಿನಾಯಿತಿಗೆ ಮನವಿ

ನುಗ್ಗಲಿ ತಿಳಿಸಿದ್ದಾರೆ. ಇತರ ರಾಜ್ಯಗಳಲ್ಲಿ ಎಸ್‌ಐಆರ್ ಪ್ರಕ್ರಿಯೆಯ ಸಮಯದಲ್ಲಿ ಶಾಲಾ ಶಿಕ್ಷಕರು ಸಾವನ್ನಪ್ಪಿದ ನಂತರ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಆದರೆ, ಕಂದಾಯ ಇಲಾಖೆ ನಮ್ಮ ವಿನಂತಿಯನ್ನು ತಿರಸ್ಕರಿಸಿದೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಕರ್ತವ್ಯದಲ್ಲಿರುವ ಶಿಕ್ಷಕರನ್ನು ಜನಗಣತಿ ಕೆಲಸದಿಂದ ವಿನಾಯಿತಿ ನೀಡುವಂತೆ ನಾವು ಶಾಲಾ ಶಿಕ್ಷಣ ಇಲಾಖೆಯನ್ನು ಕೋರಿದ್ದೆವು. ಅದನ್ನು ಸಹ ತಿರಸ್ಕರಿಸಲಾಗಿದೆ. ಈ ಬಗ್ಗೆ ಸಚಿವರೊಂದಿಗೆ ಮಾತನಾಡಲು ಪ್ರಯತ್ನಿಸಿದ್ದೇವೆ ಎಂದು ಅವರು ತಿಳಿಸಿದರು.

### ಅತ್ಯಂತ ಮಹತ್ವದ ಕೆಲಸ

ನಿಯೋಜನೆ ತಪ್ಪಿಸಲಾಗುವುದಿಲ್ಲ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ಶಿಕ್ಷಣ ಕ್ಷೇತ್ರದ ಕೆಲಸ ಹೊರತುಪಡಿಸಿ ಬೇರೆ ಯಾವುದೇ ಕೆಲಸಗಳಲ್ಲಿ ಶಿಕ್ಷಕರನ್ನು ಒಳಗೊಳ್ಳದಂತೆ ಹೊಸ ಕಾಯ್ದೆ ತರುವ ಬಗ್ಗೆ ಚರ್ಚೆ ಯಾವುದೇ ಚರ್ಚೆ ನಡೆದಿಲ್ಲ. ಸರ್ಕಾರದ ದೃಷ್ಟಿಕೋನದ ಪ್ರಕಾರ, ಜನಗಣತಿ ಕಾರ್ಯ ಅತ್ಯಂತ ಮುಖ್ಯವೆಂದು ಪರಿಗಣಿಸಿ ಶಿಕ್ಷಕರನ್ನು ನಿಯೋಜಿಸುವುದು ಅನಿವಾರ್ಯ ಎಂದು ಸಚಿವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

### ಎತ್ತಿನ ಹೊಳೆಗೆ 'ಗ್ರೀನ್ ಸಿಗ್ನಲ್'

ಪ್ರಮಾಣಕ್ಕೆ ಸಮನಾಗಿ ಅರಣ್ಯೇತರ ಭೂಮಿಯಲ್ಲಿ ಅರಣ್ಯ ಬೆಳೆಸಬೇಕು. ಪರಿಹಾರ ಅರಣ್ಯೀ ಕರಣಕ್ಕಾಗಿ ಗುರುತಿಸಲಾದ

ಅರಣ್ಯೇ ತರ ಭೂಮಿಯನ್ನು ರಾಜ್ಯ ಅರಣ್ಯ ಇಲಾಖೆ ಹೆಸರಿಗೆ ವರ್ಗಾವಣೆ ಮತ್ತು ಮ್ಯುಟೇಷನ್ ಮಾಡಬೇಕು ಮತ್ತು ಅದರ ವಿವರಗಳನ್ನು ಸಲ್ಲಿಸಬೇಕು. ನಂತರ, ರಾಜ್ಯ ಸರ್ಕಾರ ಅದನ್ನು ಭಾರತೀಯ ಅರಣ್ಯ ಕಾಯಿದೆ 1927ರ

ಸೆಕ್ಷನ್ 29 ಅಡಿಯಲ್ಲಿ ಅಥವಾ ಸ್ಥಳೀಯ ಅರಣ್ಯ ಕಾಯಿದೆ ಅಡಿಯಲ್ಲಿ ಸಂರಕ್ಷಿತ ಅರಣ್ಯ ಎಂದು ಅಧಿಸೂಚಿಸಬೇಕು. ನಂತರವೇ ಅರಣ್ಯ ಭೂಮಿಯನ್ನು ಬಳಕೆದಾರ ಏಜೆನ್ಸಿಗೆ ಹಸ್ತಾಂತರಿಸಬೇಕು ಎಂದು ಷರತ್ತು ವಿಧಿಸಿದೆ.

ಬಳಕೆದಾರ ಏಜೆನ್ಸಿ ಪರಿಹಾರ ಅರಣ್ಯೀಕರಣವನ್ನು ಬೆಳೆಸುವ ಮತ್ತು ನಿರ್ವಹಿಸುವ ವೆಚ್ಚವನ್ನು ಅರಣ್ಯೇತರ ಭೂಮಿಯ ಸಮಾನ ಪ್ರಮಾಣಕ್ಕೆ ಪ್ರಸ್ತುತ ದಿನಗೂಲಿ ದರದಲ್ಲಿ ಖಾತೆಗೆ ಆನ್‌ಲೈನ್‌ನಲ್ಲಿ ಜಮಾ ಮಾಡಬೇಕು. ಮರಗಳನ್ನು ಕಡಿಯುವ ವೆಚ್ಚವನ್ನು ಬಳಕೆದಾರ ಏಜೆನ್ಸಿಯು ರಾಜ್ಯ ಅರಣ್ಯ ಇಲಾಖೆಗೆ ಜಮಾ ಮಾಡಬೇಕು. ಅರಣ್ಯ ಭೂಮಿಯಲ್ಲಿ ಯಾವುದೇ ಕಾರ್ಮಿಕ ಶಿಬಿರ ಸ್ಥಾಪಿಸುವಂತಿಲ್ಲ. ಯೋಜನೆಯ ಕಾಮಗಾರಿಗಾಗಿ ಅರಣ್ಯ ಪ್ರದೇಶದ ಒಳಗೆ ಹೊಸ ರಸ್ತೆ ಅಥವಾ ಹಾದಿಗಳನ್ನು ನಿರ್ಮಿಸುವಂತಿಲ್ಲ. ಅರಣ್ಯ ಭೂಮಿಯನ್ನು ಯೋಜನೆಯಲ್ಲಿ ತಿಳಿಸಲಾದ ಉದ್ದೇಶಕ್ಕೆ ಮಾತ್ರ ಬಳಸಬೇಕು. ಬೇರೆ ಯಾವುದೇ ಉದ್ದೇಶಕ್ಕೆ ಬಳಸುವಂತಿಲ್ಲ ಎಂದು ಸೂಚಿಸಿದೆ.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ನಿವೇಶನ ವಿಂಗಡಿಸಲು ಒತ್ತಾಯ

## ಆಶ್ರಯ ಯೋಜನೆ: ಅರ್ಜುನಹಳ್ಳಿ ತಾಂಡ್ಯ ಗ್ರಾಮಸ್ಥರ ಪ್ರತಿಭಟನೆ

ರಾಮನಗರ: ಆಶ್ರಯ ವಸತಿ ಯೋಜನೆ ಅಡಿಯಲ್ಲಿ ಮಂಜೂರಾಗಿರುವ ಭೂಮಿಯಲ್ಲಿ ನಿವೇಶನಗಳನ್ನು ವಿಂಗಡಿಸಿ ಹಕ್ಕು ಪತ್ರಗಳನ್ನು ಕೊಡುವ ವಿಚಾರದಲ್ಲಿ ಪ್ರತಿಭಟನೆಗಳು ನಡೆದಿವೆ. ಆದರೂ ನಿವೇಶನಗಳು ವಿಂಗಡಣೆಯಾಗಿಲ್ಲ. ಜಿಲ್ಲಾಡಳಿತ ತಕ್ಷಣ ಸ್ಪಂದಿಸದಿದ್ದರೆ ಪ್ರತಿಭಟನೆಯನ್ನು ಮತ್ತಷ್ಟು ತೀವ್ರಗೊಳಿಸುವುದಾಗಿ ಕನಕಪುರ ತಾಲ್ಲೂಕು ಅರ್ಜುನಹಳ್ಳಿ ತಾಂಡ್ಯದ ಗ್ರಾಮಸ್ಥರು ಜಿಲ್ಲಾ ಕೇಂದ್ರ ರಾಮನಗರದಲ್ಲಿ ಪ್ರತಿಭಟನೆ ನಡೆಸಿದರು.



ಜಿಲ್ಲಾ ಸರ್ಕಾರಿ ಕಚೇರಿಗಳ ಸಂಕೀರ್ಣದ ಆವರಣದಲ್ಲಿ ಪ್ರತಿಭಟನೆ ನಡೆಸಿದ ಗ್ರಾಮಸ್ಥರು, ತಾವು ಲಂಬಾಣಿ (ಎಸ್ಸಿ) ಜನಾಂಗದವರಾಗಿದ್ದು, ಸರ್ಕಾರ ವಸತಿ ಯೋಜನೆ ಅಡಿಲ್ಲಿ ಸರ್ವೆ ನಂಬರ್ 135 ಮತ್ತು 137ರಲ್ಲಿ ನಿವೇಶನ ನೀಡಿ ಹಕ್ಕು ಪತ್ರ ಮತ್ತು ಇ ಖಾತೆ ನೀಡಿದೆ. ಆದರೆ, ಸೋಮಿಬಾಯಿ ಮತ್ತು ಅವರ ಮಕ್ಕಳು ಈ ಭಾಗ ಒತ್ತುವರಿಯಾಗಿದೆ ಎಂದು ಉಚ್ಚ ನ್ಯಾಯಾಲಯದಲ್ಲಿ ಸುಳ್ಳು ದಾವೆ ಹೂಡಿದ್ದಾರೆ. ಭೂ ಮಾಪನ ಇಲಾಖೆ ಅಧಿಕಾರಿಗಳು ಹಲವು ಬಾರಿ ಸರ್ವೆ ಮಾಡಿ ಕಲ್ಲು ಬಾಂದುಗಳನ್ನು ಹಾಕಿದ್ದು, ಅದನ್ನು ಕೆಡವಿದ್ದಾರೆ. ಸೋಮಿಬಾಯಿಗೆ ಸರ್ವೆ ನಂ.127–2ರಲ್ಲಿ 3 ಎಕರೆ, ನಾಗೇಶ ನಾಯ್ಕರಿಗೆ 127–1, 127–3ರಲ್ಲಿ 3 ಎಕರೆ 3 ಗುಂಟೆ ಜಮೀನು ಇದೆ. ಆಶ್ರಯ ಯೋಜನೆ ಅಡಿಯಲ್ಲಿ ಮಂಜೂರಾಗಿರುವ ಜಮೀನನ್ನು ಲಪಟಾಯಿಸಲು ಹುನ್ನಾರ ನಡೆಸುತ್ತಿದ್ದಾರೆ ಎಂದು ದೂರಿದರು.

ಇನ್ನೊಂದೆಡೆ ಸೋಮಿಬಾಯಿ ಕುಟುಂಬದವರು ಪೊಲೀಸ್ ಠಾಣೆಯಲ್ಲಿ ಸುಳ್ಳು ದೂರುಗಳನ್ನು ದಾಖಲಿಸಿ ತಮ್ಮ ಮೇಲೆ ಅಧಿಕಾರಿಗಳು ಮತ್ತು ಗ್ರಾಮಸ್ಥರು ದೌರ್ಜನ್ಯ ನಡೆಸುತ್ತಿದ್ದಾರೆ ಎಂದು ಆರೋಪಿಸಿದ್ದಾರೆ. ಈಗಾಗಲೇ ಗ್ರಾಪಂ ಉಪಾಧ್ಯಕ್ಷ ಮುತ್ತುರಾಜ್ ನಾಯ್ಕ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಿದ್ದಾರೆ. ಇವರ ಕಿರುಕುಳ ತಾಳಲಾರದೆ ಎಷ್ಟೋ ಜನರು ಗ್ರಾಮ ತೊರೆದಿದ್ದಾರೆ ಎಂದರು.

### ಜಿಲ್ಲಾಧಿಕಾರಿ ಮತ್ತು ಉಪವಿಭಾಗಾಧಿಕಾರಿ ಭೇಟಿ

**ಜಿಲ್ಲಾಧಿಕಾರಿ ಮತ್ತು ಉಪವಿಭಾಗಾಧಿಕಾರಿಗಳು ಖುದ್ದಾಗಿ ಗ್ರಾಮಕ್ಕೆ ಭೇಟಿ ನೀಡಿ ವಸ್ತು ಸ್ಥಿತಿ ಅರಿಯಬೇಕು. ನ್ಯಾಯಾಲಯದಲ್ಲಿರುವ ದಾವೆಯನ್ನು ವಜಾ ಮಾಡಿ ಆಶ್ರಯ ಯೋಜನೆ ಅಡಿ ಮಂಜೂರಾಗಿರುವ ಜಮೀನಿನಲ್ಲಿ ಮನೆ ಮತ್ತು ನಿವೇಶನ ನಿರ್ಮಿಸಿಕೊಳ್ಳಲು ಅವಕಾಶ ನೀಡಬೇಕು. ಇಲ್ಲದಿದ್ದರೆ ಪ್ರತಿಭಟನೆ ಹಾದಿ ಹಿಡಿಯುವುದು ಅನಿವಾರ್ಯವಾಗಲಿದೆ ಎಂದು ಗ್ರಾಮಸ್ಥರು ಎಚ್ಚರಿಸಿದರು. ಜಿಲ್ಲಾಧಿಕಾರಿಗಳ ಸ್ಥಾನಿಕ ಸಹಾಯಕ ಅಧಿಕಾರಿ ಪ್ರತಿಭಾ ಅವರು ಪ್ರತಿಭಟನಾಕಾರರ ಮನವಿ ಸ್ವೀಕರಿಸಿದರು.**

ಸದರಿ ವಿಚಾರದಲ್ಲಿ ನ್ಯಾಯಾಲಯದ ಮೊರೆ ಹೋಗಲು ವಕೀಲರನ್ನು ನೇಮಿಸಿಕೊಳ್ಳುವ ಶಕ್ತಿಯೂ ನಮಗಿಲ್ಲ ಎಂದು ಗ್ರಾಮಸ್ಥರು ಅಳಲು ತೋಡಿಕೊಂಡರು.

ಪ್ರತಿಭಟನೆಯಲ್ಲಿ ಗ್ರಾಮಸ್ಥರಾದ ಮುತ್ತುರಾಜು ನಾಯ್ಕ, ನಾಗೇಶ್ ನಾಯ್ಕ, ವೆಂಕಟೇಶ್ ನಾಯ್ಕ ಮಾರಪ್ಪ ನಾಯ್ಕ, ರಾಜು ನಾಯ್ಕ, ಸಂಪತ್ ನಾಯ್ಕ, ರೂಪಾ ನಾಯ್ಕ, ಅಕ್ಷಯ್ ನಾಯ್ಕ, ಮಹದೇವಿ ಬಾಯಿ, ಜಯಬಾಯಿ, ಲಕ್ಷ್ಮಿ ಬಾಯಿ, ನೀಲಮ್ಮ ಬಾಯಿ, ಪುಟ್ಟಬಾಯಿ, ರತ್ನ ಬಾಯಿ, ಪಟ್ಟಿಬಾಯಿ ಮತ್ತಿತರರು ಭಾಗವಹಿಸಿದ್ದರು.

# ಸಿದ್ದಗಂಗಾಶ್ರೀಗಳ 119ನೇ ಜಯಂತಿ

ಚಾಮರಾಜನಗರ: ನಡೆದಾಡುವ ದೇವರು, ಅಭಿನವ ಬಸವಣ್ಣ ಎಂದೇ ಬಿಂಬಿತವಾಗಿದ್ದ ಡಾ. ಶಿವಕುಮಾರಸ್ವಾಮಿಗಳ 119ನೇ ಜಯಂತಿ ಪ್ರಯುಕ್ತ ನಗರದ ಜಿಲ್ಲಾಸ್ಪತ್ರೆಯ ಮುಂಭಾಗದ ನಂದಿನಿ ಪಾರ್ಲರ್‌ನಲ್ಲಿ ಮಜ್ಜಿಗೆ ಪಾನಕ ರೈಸ್‌ಬಾತ್ ವಿತರಣೆ ಮಾಡಲಾಯಿತು.

ನಗರದ ಜಿಲ್ಲಾಸ್ಪತ್ರೆಯ ಮುಂಭಾಗದಲ್ಲಿ ಶ್ರೀಗಳ ಭಾವಚಿತ್ರವಿಟ್ಟು ವಿಶೇಷ ಹೂವಿನ ಅಲಂಕಾರ ಮಾಡಿ, ರಾಮಸಮುದ್ರ ಭಿಕ್ಷದ ಮಠದ ಮಹದೇವಸ್ವಾಮಿಜೀ. ಪೂಜೆ ಸಲ್ಲಿಸಿದರು. ನಂತರ ಸಾರ್ವಜನಿಕರಿಗೆ ಮಜ್ಜಿಗೆ ಪಾನಕ, ಹಾಗೂ ರೈಸ್‌ಬಾತ್ ಅನ್ನು ವಿತರಣೆ ಮಾಡಿದರು.

ಬಳಿಕ ಮಾತನಾಡಿದ ಮುಖಂಡರು ಸಿದ್ದಗಂಗಾ ಶ್ರೀಗಳು ಕಾಯಕದ ಮೂಲಕ ವಿಶ್ವಕ್ಕೆ ಮಾದರಿಯಾಗಿದೆ. ದಿನನಿತ್ಯ ಸಾವಿರಾರು ಮಕ್ಕಳಿಗೆ ಅನ್ನ, ಶಿಕ್ಷಣ ದಾಸೋಹ ನೀಡಿ, ಶ್ರೀ ಮಠವನ್ನು ಮುನ್ನಡೆಸಿದ ಕಾಯಕ ತಪಸ್ವಿಗಳು. 111 ವರ್ಷಗಳ ಕಾಲ ನಮ್ಮೆಲ್ಲರ ಮಧ್ಯೆ ಇದ್ದು, ಸಾಧನೆ ಮಾಡುವ ಜೊತೆಗೆ 21ನೇ ಶತಮಾನದ ಬಸವಣ್ಣ ಎಂಬ, ನಡೆದಾಡುವ ದೇವರು ಎಂಬ ಕೀರ್ತಿ ಗೆ ಪಾತ್ರರಾಗಿದ್ದು. ಅವರ ಹೆಸರು ಹೇಳಿದರೆ ಸಾಕು ಒಂದು ರೀತಿಯ ಪ್ರೇರಣೆ ಮತ್ತು ಶಕ್ತಿ ಬರುತ್ತದೆ ಎಂದರು.

ಈ ಸಂದರ್ಭದಲ್ಲಿ ರಾಮಸಮುದ್ರ ಮಠದ ಶ್ರೀ ಮಹದೇವಸ್ವಾಮೀಜಿ, ಜೆಡಿಎಸ್ ಮುಖಂಡ ಅಲೂರು ಮಲ್ಲು, ನಂದಿನಿ ಪಾರ್ಲರ್‍ನ ಕೆ.ವಿ. ಪ್ರಸಾಸ್, ಕೆ.ವಿ. ಪ್ರಮೋದ್, ಚಂದನ್, ಮಂಜುನಾಥ್, ಪುನೀತ್, ನವೀನ್, ಅಭಿ, ಸಚಿನ್, ಶಿವಕುಮಾರಸ್ವಾಮಿ ಸ್ವ ಸಹಾಯ ಸಂಘದ ಸದಸ್ಯರು ಮೊದಲಾದವರು ಇದ್ದರು.



### ವಿದ್ಯುತ್ ಯೋಜನೆ ವಿಸ್ತರಣೆ

ವಿದ್ಯುತ್ ಬಳಕೆಯನ್ನು ಪ್ರೋತ್ಸಾಹಿಸಲು ಸಹಕಾರಿಯಾಗಲಿದೆ. ರಾಜ್ಯದ ವಿದ್ಯುತ್ ಸರಬರಾಜು ಕಂಪನಿಗಳು ಕೈಗಾರಿಕೆಗಳು ಮತ್ತು ವಾಣಿಜ್ಯ ಸಂಸ್ಥೆಗಳ ಬೆಳವಣಿಗೆಯನ್ನು ಉತ್ತೇಜಿಸಲು ರಿಯಾಯಿತಿ ವಿದ್ಯುತ್ ದರ ಯೋಜನೆ ಜಾರಿಗೆ ತಂದಿವೆ.

### ಸಮರ್ಪಕ ಗೊಬ್ಬರ ದಾಸ್ತಾನು

ಮೆಟ್ರಿಕ್ ಟನ್ ವಿವಿಧ ಗೊಬ್ಬರಗಳನ್ನು ಹಂಚಿಕೆ ಮಾಡಿದ್ದು, ಏಪ್ರಿಲ್ 1ರ ವೇಳೆಗೆ 11.42 ಲಕ್ಷ ಮೆಟ್ರಿಕ್ ಟನ್ ಸಂಗ್ರಹ ಲಭ್ಯವಿದೆ ಎಂದು ಕೃಷಿ ಇಲಾಖೆ ತಿಳಿಸಿದೆ.

### ಪಟ್ಟಿಯಿಂದ ಕೊಕ್

ಸಭೆಯಲ್ಲೇ ಅಲ್ಪಸಂಖ್ಯಾತರ ಪಟ್ಟಿಯಿಂದ ಮುಸ್ಲಿಮರನ್ನು ಹೊರಹಾಕುತ್ತೇನೆ. ಇವರ ಹೊರತಾಗಿ ಮರಾಠರು, ಬ್ರಾಹ್ಮಣರು, ಕ್ಷತ್ರಿಯರು ಸೇರಿದಂತೆ ಅನೇಕರು ಅಲ್ಪಸಂಖ್ಯಾತರು ಇದ್ದಾರೆ. ಅವರಿಗೆಲ್ಲ ಅಲ್ಪಸಂಖ್ಯಾತ ಸ್ಥಾನಮಾನ ಕೊಡುತ್ತೇನೆ ಎಂದು ತಿಳಿಸಿದರು.

### ವಿಶೇಷ ಅಧಿವೇಶನ

ಶಕ್ತಿ ವಂದನಾ ಕಾಯ್ದೆಗೆ (ಮಹಿಳಾ ಮೀಸಲಾತಿ ಕಾಯ್ದೆ) ತಿದ್ದುಪಡಿ ತರಲು ಒಂದು ಮಸೂದೆ ಮತ್ತು ಕ್ಷೇತ್ರ ಮರುವಿಂಗಡಣೆ ಕಾಯ್ದೆಯ ತಿದ್ದುಪಡಿಗೆ ಮತ್ತೊಂದು ಮಸೂದೆ ತರಲು ಕೇಂದ್ರ ಸರ್ಕಾರ ಮುಂದಾಗಿದೆ.

# ಏ.10ರಂದು ತಾಲೂಕು ಕಚೇರಿ ಮುತ್ತಿಗೆ

ಚಾಮರಾಜನಗರ ಮಾ. 28– ರೈತರು ಎದುರಿಸುತ್ತಿರುವ ಜ್ವಲಂತ ಸಮಸ್ಯೆಗಳನ್ನು ಬಗೆಹರಿಸುವಂತೆ ಒತ್ತಾಯಿಸಿ, ಕಾಡು ಪ್ರಾಣ ಗಳ ಹಾವಳಿಯನ್ನು ತಪ್ಪಿಸಿ, ಸಫಾರಿ ಬಂದ್ ಮಾಡುವಂತೆ ಆಗ್ರಹಿಸಿ ತಾಲೂಕು ವ್ಯಾಪ್ತಿಯಲ್ಲಿರುವ ಸಮಸ್ಯೆಗಳ ಬಗ್ಗೆ ರಾಜ್ಯ ಸರ್ಕಾರದ ಗಮನ ಸೆಳೆಯಲು ಏ. 10 ರಂದು ತಾಲೂಕು ಕೇಂದ್ರದಲ್ಲಿ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಾಮೂಹಿಕ ನಾಯಕತ್ವದ ರೈತ ಸಂಘದ ಮಹದೇವಪ್ರಸಾದ್ ತಿಳಿಸಿದರು.



ನಗರದ ಪ್ರವಾಸಿ ಮಂದಿರದಲ್ಲಿ ಇಂದು ನಡೆದ ತಾಲೂಕಿನ ಸಾಮೂಹಿಕ ನಾಯಕತ್ವದ ರೈತ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ಚಾಮರಾಜನಗರ ತಾಲೂಕಿನಾದ್ಯಂತ ವನ್ಯ ಪ್ರಾಣ ಗಳ ಹಾವಳಿ ಹೆಚ್ಚಾಗಿದೆ. ಸಫಾರಿ ಹಾಗು ರೆಸಾರ್ಟ್‌ಗಳನ್ನು ಅರಣ್ಯದೊಳಗೆ ಮಾಡಿದ ಪರಿಣಾಮ ಕಾಡುಪ್ರಾಣ ಗಳು ರೈತರ ಜಮೀನಗಳತ್ತಾ ಬರುತ್ತಿವೆ. ಇದರಿಂದ ರೈತರು ವ್ಯವಸಾಯ ಮಾಡುವುದು ಕಷ್ಟವಾಗಿದೆ. ಹೀಗಾಗಿ ಸಫಾರಿಯನ್ನು ಬಂದ್ ಮಾಡಬೇಕು. ಹೀಗಾಗಿ ಕೂಡಲೇ ಸಫಾರಿ ಬಂದ್ ಮಾಡಬೇಕು ಎಂದು ಅವರು ಒತ್ತಾಯಿಸಿದರು.

ಇತ್ತೀಚಿಗೆ ಬಿದ್ದ ಆಲಿಕಲ್ಲು ಸಹಿತ ಬಿರುಗಾಳಿ ಮಳೆಯಿಂದಾಗಿ ಜಮೀನಿನಲ್ಲಿ ಬೆಳೆದಿದ್ದ ಫಸಲು ಸಂಪೂರ್ಣ ನಷ್ಟವಾಗಿದೆ. ಬಾಳೆ, ಟಮೋಟೊ, ಹೂಕೋಸು, ಸೇರಿದಂತೆ ಅನೇಕ ಫಸಲುಗಳು ನೆಲೆಕಚ್ಚಿವೆ. ವೈಜ್ಞಾನಿಕ ಪರಿಹಾರವನ್ನು ಸರ್ಕಾರ ಘೋಷಣೆ ಮಾಡಬೇಕು. ಕಾಡು ಪ್ರಾಣ ಗಳಿಂದ ನಮ್ಮ ಬೆಳೆಗಳ ರಕ್ಷಣೆಯಾಗಬೇಕು. ತಾಲೂಕಿನ ಎಲ್ಲಾ ಕೆರೆಗಳನ್ನು ತುಂಬಿಸುವ ಯೋಜನೆಯನ್ನು ತ್ವರಿತವಾಗಿ ಕಾರ್ಯಗತಗೊಳಿಸಬೇಕು ಎಂಬಿತ್ಯಾದಿ ಹಕ್ಕೋತ್ತಾಯಗಳೊಂದಿಗೆ ಏ. 10 ರಂದು ಪ್ರತಿಭಟನೆ ಮಾಡಲಾಗುತ್ತದೆ ಈ ಪ್ರತಿಭಟನೆಗೆ ರೈತ ಸಂಘಟನೆಗಳು ಹಾಗೂ ರೈತ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಯಶಸ್ವಿಗೊಳಿಸಿಕೊಡಬೇಕೆಂದು ಮಹದೇವಪ್ರಸಾದ್ ಮನವಿ ಮಾಡಿದರು. ಸಭೆಯಲ್ಲಿ ರೈತ ಮುಖಂಡರಾದ ಕೊತ್ತಲವಾಡಿ ಮಂಜು, ಮಂಜುನಾಥ್,ಮಲ್ಲೇಶ್, ಪಾಪು, ಸಂತೋಷ, ನಟರಾಜು, ಮುಕ್ಕಡಹಳ್ಳಿ ಮಹೇಶ್ ರೈತ ಮುಖಂಡರು ಭಾಗವಹಿಸಿದ್ದರು.

## ಕರ್ನಾಟಕ ಸೇನಾಪಡೆ ಕಾರ್ಯಕರ್ತರ ಪ್ರತಿಭಟನೆ

# ವಿದ್ಯುತ್, ಆಸ್ತಿ, ನೀರಿನ ದರ ಏರಿಕೆಗೆ ಖಂಡನೆ

ಮೈಸೂರು: ವಿದ್ಯುತ್, ಆಸ್ತಿ, ನೀರಿನ ದರವನ್ನು ಏರಿಸಿರುವ ರಾಜ್ಯ ಸರ್ಕಾರದ ಕ್ರಮವನ್ನು ಖಂಡಿಸಿ ಕರ್ನಾಟಕ ಸೇನಾಪಡೆ ಕಾರ್ಯಕರ್ತರು ಮೈಸೂರಿನ ಹಳೆ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಿದರು.



ಪ್ರತಿಭಟನೆ ನೇತೃತ್ವವಹಿಸಿದ ಕರ್ನಾಟಕ ಸೇನಾಪಡೆ ಜಿಲ್ಲಾಧ್ಯಕ್ಷ ತೇಜೇಶ್ ಲೋಕೇಶ್ ಗೌಡ ಮಾತನಾಡಿ, ಅಡುಗೆ ಅನಿಲ ಸಂಕಷ್ಟವನ್ನು ಎದುರಿಸುತ್ತಿರುವ ಜನತೆಗೆ ರಾಜ್ಯ ಸರ್ಕಾರ ಹೊಸ ಆರ್ಥಿಕ ವರ್ಷದಿಂದ ರಾಜ್ಯದಲ್ಲಿ ವಿದ್ಯುತ್ ಗೆ 40 ರಿಂದ 50 ಪೈಸೆ ಹೆಚ್ಚಳ, ನೀರಿನ ದರದ ಏರಿಕೆ, ಆಸ್ತಿ ತೆರಿಗೆಯನ್ನು ಹೆಚ್ಚಿಸಲು ನಿರ್ಧರಿಸುವುದು ಅತ್ಯಂತ ನೋವಿನ ಸಂಗತಿಯಾಗಿದೆ. ರಾಜ್ಯದ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ಉಚಿತ ಭಾಗ್ಯಗಳಿಗಾಗಿ ರಾಜ್ಯದ ಬೊಕ್ಕಸವನ್ನು ಖಾಲಿ ಮಾಡಿ ದಿನೇ ದಿನೇ ಅತಿ ಅಗತ್ಯ ವಸ್ತುಗಳ ಬೆಲೆ ಸೇರಿ ಎಲ್ಲಾ ಬೆಲೆಗಳನ್ನು ಏರಿಸುತ್ತಿರುವುದು ಅತ್ಯಂತ ನಾಚಿಕೆಗೇಡಿನ ಸಂಗತಿಯಾಗಿದೆ ಎಂದರು.


ಪಾಲಿಕೆಯ ವ್ಯಾಪ್ತಿಯಲ್ಲಿರುವ ಪ್ರತಿಯೊಂದು ಮನೆಗಳಿಗೆ (ಪಿಐಡಿ) ಆಸ್ತಿ ಗುರುತಿನ ಸಂಖ್ಯೆ ಆಧಾರದ ಮೇಲೆ ದ್ವಿಚಕ್ರ ವಾಹನಕ್ಕೆ 100 ರೂ. ತ್ರಿಚಕ್ರ ವಾಹನಗಳಿಗೆ 200 ರೂ. ಹಾಗೂ ನಾಲ್ಕು ಚಕ್ರದ ವಾಹನಗಳಿಗೆ 500 ರೂ. ಮೋಟಾರ್ ವಾಹನ ಉಪಕರ ವಿಧಿಸಲು ಹೊರಟಿರುವುದು ಅವೈಜ್ಞಾನಿಕ ಹಾಗೂ ಅತ್ಯಂತ ಖಂಡನೀಯ. ಈ ಕೂಡಲೇ ಏರಿಸಿರುವ ದರವನ್ನು ಹಿಂಪಡೆಯಬೇಕು ಎಂದು ಎಚ್ಚರಿಕೆ ನೀಡುತ್ತಿರುವುದಾಗಿ ತಿಳಿಸಿದರು.

ಪ್ರತಿಭಟನೆಯಲ್ಲಿ ಸೇನಾಪಡೆಯ ಕೃಷ್ಣಪ್ಪ, ಪ್ರಭುಶಂಕರ್, ಸಿಂದುವಳ್ಳಿ ಶಿವಕುಮಾರ್, ಬೋಗಾದಿ ಸಿದ್ದೇಗೌಡ, ಶಿವಲಿಂಗಯ್ಯ, ಶ್ರೀನಿವಾಸ್, ನೇಹಾ, ಮಂಜುಳಾ, ಸೌಮ್ಯ, ಸುಜಾತ, ನರಸಿಂಹೇಗೌಡ, ತಾಯೂರು ಗಣೇಶ್, ವಿಜಯೇಂದ್ರ, ಪ್ರಭಾಕರ್, ರಾಧಾಕೃಷ್ಣ, ನಾರಾಯಣಗೌಡ, ದರ್ಶನ್ ಗೌಡ, ಪ್ರದೀಪ್, ಕುಮಾರ್, ಕುಮಾರ್ ಗೌಡ, ಬಸವರಾಜು, ಪರಿಸರ ಚಂದ್ರು, ಅಶೋಕ್, ತ್ಯಾಗರಾಜ್, ನಾಗರಾಜು, ಗಣೇಶ ಪ್ರಸಾದ್, ಶಿವರಾಮಗೌಡ, ಚಂದ್ರಶೇಖರ್, ರವಿನಾಯಕ್, ರವೀಶ್ ಸೇರಿ ಇನ್ನಿತರರು ಉಪಸ್ಥಿತರಿದ್ದರು.

# ಇಬ್ಬರು ಪ್ರೇಮಿಗಳ ಆತ್ಮಹತ್ಯೆ

ಹನೂರು: ತಾಲೂಕಿನ ಪೊನ್ನಾಚಿ ಗ್ರಾಮದಲ್ಲಿ ಇಬ್ಬರು ಪ್ರೇಮಿಗಳು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬುಧವಾರ ಬೆಳಗ್ಗೆ ಬೆಳಕಿಗೆ ಬಂದಿದೆ.

ಹನೂರು ತಾಲೂಕಿನ ಮಿಣ್ಯಂ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಕ್ಕುಂದಿ ಗ್ರಾಮದ ನಾಗೇಂದ್ರ (21) ಪಾಲಾರ್ ಗ್ರಾಮದ ನದಿಯಾ (19) ಆತ್ಮಹತ್ಯೆ ಮಾಡಿಕೊಂಡ ಪ್ರೇಮಿಗಳಾಗಿದ್ದಾರೆ.





**ಘಟನೆಯ ವಿವರ:** ಪಾಲಾರ್ ಗ್ರಾಮದ ಮಾದೇವರ ಪುತ್ರಿ ನದಿಯಾ ಯಳಂದೂರು ತಾಲೂಕಿನ ಬಿಳಿಗಿರಿರಂಗನ ಬೆಟ್ಟದ ಐ.ಪಿ.ಹೆಚ್ ಸಂಸ್ಥೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದರು. ಆದರೆ ಇದ್ದಕ್ಕಿದ್ದಂತೆ ನಾಪತ್ತೆಯಾಗಿದ್ದರು ಈ ವಿಚಾರವನ್ನು ಐಪಿಹೆಚ್ ಸಂಸ್ಥೆಯವರು ಪೋಷಕರಿಗೆ ಮಾಹಿತಿ ನೀಡಲು ಪ್ರಯತ್ನಿಸಿದ್ದಾರೆ. ಆದರೆ ಪಾಲಾರ್ ಗ್ರಾಮದಲ್ಲಿ ನೆಟ್ವರ್ಕ್ ಸಮಸ್ಯೆಯಿಂದ ಮಾಹಿತಿ ತಿಳಿಯುವುದು ತಡವಾಗಿದೆ.

ಪೊನ್ನಾಚಿ ಗ್ರಾಮದಲ್ಲಿ ಕಳೆದ ಮೂರು ದಿನಗಳಿಂದ ನಡೆಯುತ್ತಿರುವ ಕುಳ್ಳು ಮಾರಮ್ಮ ಜಾತ್ರಾ ಮಹೋತ್ಸವಕ್ಕೆ ನಕ್ಕುಂದಿ ಗ್ರಾಮದ ನಾಗೇಂದ್ರ ಅವರ ತಾತ ಶಿವ ಮಾದಯ್ಯ ರವರ ಮನೆಗೆ ಕರೆದುಕೊಂಡು ಬಂದಿದ್ದಾರೆ. ಮಂಗಳವಾರ ತಡರಾತ್ರಿ ಏಕಾಏಕಿ ಇಬ್ಬರು ಕೊಠಡಿಯೊಳಗೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಈ ವಿಚಾರ ತಿಳಿಯುತ್ತಿದ್ದಂತೆ ಮಲೆ ಮಹದೇಶ್ವರ ಬೆಟ್ಟ ಪೊಲೀಸ್ ಠಾಣೆಯ ಇನ್ಸ್ಪೆಕ್ಟರ್ ಜಗದೀಶ್ ಹಾಗೂ ಸಿಬ್ಬಂದಿಗಳು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.ಘಟನೆಯ ಸಂಬಂಧ ಮೃತ ನದಿಯಾ ತಂದೆ ಮಾದೇವ ಮಲೆ ಮಹದೇಶ್ವರ ಬೆಟ್ಟ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಶವವನ್ನು ವಶಕ್ಕೆ ಪಡೆದುಕೊಂಡು ಚಾಮರಾಜನಗರದ ಸಿಮ್ಸ್ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸಿ ಪ್ರಮುಖ ಅಂಗಾಗಳನ್ನು ಪ್ರಯೋಗಾಲಯ ಕಳುಹಿಸಿದ್ದಾರೆ ಎಂದು ತಿಳಿದು ಬಂದಿದೆ. ತನಿಖೆ ಕೈಗೊಂಡಿರುವ ಪೊಲೀಸರು ಆತ್ಮಹತ್ಯೆಗೆ ನಿಖರ ಕಾರಣ ತಿಳಿದು ಬಂದಿಲ್ಲ ವಿಚಾರಣೆ ನಡೆಸಿದ ನಂತರ ಸೂಕ್ತ ಕಾರಣ ತಿಳಿದು ಬರಲಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

# ನಿರಂತರ ಅಭ್ಯಾಸದ ತಯಾರಿ ಸ್ಪರ್ಧಾತ್ಮಕ ಪರೀಕ್ಷೆಗೆ ಅಗತ್ಯ

ಮೈಸೂರು :ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿಗೆ ಸಮರ್ಪಣೆಯೊಂದಿಗೆ ನಿರಂತರ ಅಭ್ಯಾಸ ಅತ್ಯಗತ್ಯ ಎಂದು ಮೈಸೂರು ಮಹಾನಗರ ಪಾಲಿಕೆಯ ಹೆಚ್ಚುವರಿ ಆಯುಕ್ತ ಬಿ.ಎಂ.ವೀಣಾ ಹೇಳಿದರು.



ಕಾವೇರಿ ಸಭಾಂಗಣದಲ್ಲಿಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ (ಕರಾಮುವಿ) ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ಐಎಎಸ್ ಮತ್ತು ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳಿಗಾಗಿ ನಡೆಸಿದ ತರಬೇತಿ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮುಕ್ತಭಂಡಾರ ಅಧ್ಯಯನ ಪುಸ್ತಕ ಬಿಡುಗಡೆಗೊಳಿಸಿ ಅವರು ಮಾತನಾಡಿದರು. ಯುಪಿಎಸ್ಸಿ ಮತ್ತು ಕೆಪಿಎಸ್ಸಿ ಅಂತಹ ಪರೀಕ್ಷೆಗಳಿಗೆ ಹೇಗೆ ತಯಾರಿ ಮಾಡಿಕೊಳ್ಳಬೇಕು ಎಂದು ಈಗಾಗಲೇ ನಿಮಗೆ ತಿಳಿದಿದೆ. ಕರಾಮುವಿ ತರಬೇತಿ ಕೇಂದ್ರವು ಅಭ್ಯರ್ಥಿಗಳಿಗೆ ಉತ್ತಮ ಮಾರ್ಗದರ್ಶನ ನೀಡುತ್ತಿದೆಎಂದು ಅವರು ಓದುವಾಗ ಯಾವಾಗಲೂ ಒಬ್ಬ ವ್ಯಕ್ತಿಯನ್ನು ಮಾದರಿಯನ್ನಾಗಿ ಇಟ್ಟುಕೊಳ್ಳಬೇಕು. ಆವಾಗ ನಿಮಗೆ ಓದಲು ಆಸಕ್ತಿ ಹೆಚ್ಚಾಗುತ್ತದೆ. ನಾವೆಲ್ಲಾ ಓದುವಾಗ ಐಪಿಎಸ್ ಅಧಿಕಾರಿ ಕಿರಣ್ ಬೇಡಿ ಅವರನ್ನು ಹೆಚ್ಚಾಗಿ ಅನುಸರಿಸುತ್ತಿದ್ದೊ. ಅವರಂತೆ ನಾವಾಗಬೇಕು ಎಂದುಕೊಳ್ಳುತ್ತಿದ್ದೊ, ಇದೀಗ ಅವರಂತೆ ಸಾರ್ವಜನಿಕ ಸೇವೆ ಸಲ್ಲಿಸುವ ಅವಕಾಶ ಸಿಕ್ಕಿದೆ. ಕರಾಮುವಿಯ ಈ ತರಬೇತಿ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಿ ನಿಮಗೂ ಸಾರ್ವಜನಿಕ ಸೇವೆ ಸಲ್ಲಿಸುವ ಅವಕಾಶ ಸಿಗಲಿದೆ ಎಂದು ಹೇಳಿದರು.

ಸ್ಪರ್ಧಾತ್ಮಕ ಜಗತ್ತು ಸಾಗರದಂತೆ. ಇವತ್ತಿನ ಸ್ಪರ್ಧಾತ್ಮಕ ಪರೀಕ್ಷೆ ಸಹ ಮೊದಲಿನಂತಿಲ್ಲ. ಪ್ರಶ್ನೆ ಪತ್ರಿಕೆ ಮಾದರಿ ಬದಲಾಗಿದೆ. ಇದೆಲ್ಲದಕ್ಕೂ ನೀವು ಸಿದ್ಧರಾಗಿರಬೇಕು. ನಿರಂತರ ಅಭ್ಯಾಸ ಇಟ್ಟುಕೊಂಡು, ಸತತವಾಗಿ ಕಠಿಣ ಪರಿಶ್ರಮ ಪಡಿ, ಪರಿಶ್ರಮ ಇಲ್ಲದಿದ್ದರೆ ಯಾವ ಪರೀಕ್ಷೆಯನ್ನು ಗೆಲ್ಲಲು ಸಾಧ್ಯವಿಲ್ಲ ಎಂದರು. ಓದುವಾಗ ಯಾವುದನ್ನೂ ಓದಬೇಕು, ಯಾವುದನ್ನು ಓದಬಾರದು ಎನ್ನುವುದನ್ನು ತಿಳಿದುಕೊಂಡರೆ ಉತ್ತಮ. ಪ್ರತಿದಿನ ಪತ್ರಿಕೆ ಓದಿ. ನಾಲ್ಕೈದು ವರ್ಷಗಳ ಸಮಾನ್ಯ ಜ್ಞಾನ ನಿಮಗೆ ತಿಳಿದಿರಲಿ ಎಂದು ಹೇಳಿದರು.

ಕುಲಪತಿ ಪ್ರೊ.ಶರಣಪ್ಪ ಹಲಸೆ ಮಾತನಾಡಿ, ಈಗಾಗಲೆ ತಮಗೆಲ್ಲಾ ಓದುವ ತಯಾರಿ ಗೊತ್ತಾಗಿದೆ. ಧೈರ್ಯ ಇಟ್ಟುಕೊಳ್ಳಿ. ಧೈರ್ಯ ಇದ್ದರೆ ಏನನ್ನಾದರೂ ಸಾಧಿಸಬಹುದು ಎಂದು ಹೇಳಿದರು. ಸಮಾಜದಲ್ಲಿ ನ್ಯಾಯಯುತ ಬದುಕು ಕಟ್ಟಿಕೊಳ್ಳಬೇಕು. ಇದಕ್ಕೆ ಗುರಿ ಇಟ್ಟುಕೊಳ್ಳಿ, ನಂತರ ತಯಾರಿ ನಡೆಸಿ. ಏನನ್ನಾದರೂ ಸಾಧಿಸಲು ಸತತ ಪ್ರಯತ್ನ ಮಾಡಬೇಕು ಎಂದರು.. ವಾಣಿಜ್ಯ ತೆರಿಗೆ ಇಲಾಖೆಯ ಮೈಸೂರು ವಿಭಾಗದ ಜಂಟಿ ಆಯುಕ್ತ ಎಂ.ಬಾಲಸುಬ್ರಹ್ಮಣ್ಯ ಮಾತನಾಡಿದರು. ಸಮಾರಂಭದಲ್ಲಿ ವಿವಿ ಕುಲಸಚಿವ ಪ್ರೊ.ಎಸ್.ಕೆ.ನವೀನ್ ಕುಮಾರ್, ಶೈಕ್ಷಣಿಕ ಡೀನ್ ರಾಮನಾಥಂ ನಾಯ್ಡು, ಸಂಯೋಜನಾಧಿಕಾರಿ ಜೈನಹಳ್ಳಿ ಸತ್ಯನಾರಾಯಣ ಗೌಡ, ಸಿದ್ದೇಶ್ ಹೊನ್ನೂರು, ಗಣೇಶ್ ಕೆ.ಜಿ.ಕೊಪ್ಪಲ್ ಇನ್ನಿತರರು ಇದ್ದರು.

# ಡ್ರಗ್ಸ್ ನಿಯಂತ್ರಣಕ್ಕೆ ಆಗ್ರಹಿಸಿ ಎಬಿವಿಪಿಯಿಂದ ಪ್ರತಿಭಟನೆ

ಮೈಸೂರು: ಜಿಲ್ಲೆಯಲ್ಲಿ ಹುಣಸೂರಿನಲ್ಲಿ ಡ್ರಗ್ಸ್ ವಸ್ತುಗಳು ಸಿಕ್ಕಿರುವ ಘಟನೆಯನ್ನು ಖಂಡಿಸಿ ಎಬಿವಿಪಿ ಕಾರ್ಯಕರ್ತರು ಏಕಾಏಕಿ ಮೈಸೂರಿನ ಅಗ್ರಹಾರ ಸರ್ಕಲ್ ನಲ್ಲಿ ಪ್ರತಿಭಟನೆಗೆ ಮುಂದಾದ ಹಿನ್ನೆಲೆಯಲ್ಲಿ ಪೊಲೀಸರೊಂದಿಗೆ ವಾಗ್ವಾದ ನಡೆಯಿತು.

ಯಾವುದೇ ಅನುಮತಿ ಪಡೆಯದೇ ಪ್ರತಿಭಟನೆಗೆ ಮುಂದಾದ ಹಿನ್ನೆಲೆಯಲ್ಲಿ ಪೊಲೀಸರು ಪ್ರತಿಭಟನೆ ನಡೆಸಲು ನಿರಾಕರಿಸಿದರು. ಈ ವೇಳೆ ಹೋರಾಟವನ್ನು ಉದ್ದೇಶಿಸಿ ಮಾತನಾಡಿದ ಎಬಿವಿಪಿ ರಾಜ್ಯ ಕಾರ್ಯಕಾರಣಿ ಸದಸ್ಯರಾದ ಮೇಘನಾ ಕೋಡಬಾಳ, ಡ್ರಗ್ಸ್ ಮಾಫಿಯಾ, ಮಾದಕ ವಸ್ತು ಸೇವನೆ ಹಾಗೂ ಮಾರಾಟ ನಿಯಂತ್ರಣ ಕುರಿತಂತೆ ಕಠಿಣ ಕಾನೂನು ಕ್ರಮಗಳನ್ನು ತೆಗೆದುಕೊಳ್ಳಬೇಕೆಂದು ಮನವಿ ಮಾಡಿದರು ,ಹುಣಸೂರು ತಾಲ್ಲೂಕಿನ ದಾಸನಹಳ್ಳಿ ಗ್ರಾಮದಲ್ಲಿ ನಡೆದ ಇತ್ತೀಚಿನ ಘಟನೆಯು ಡ್ರಗ್ಸ್ ಸಮಸ್ಯೆಯ ಗಂಭೀರತೆಯನ್ನು ಸ್ಪಷ್ಟವಾಗಿ ತೋರಿಸುತ್ತದೆ ಎಂದರು.

ಇತ್ತೀಚೆಗೆ, ದಾಸನಹಳ್ಳಿ ಗ್ರಾಮದಲ್ಲಿ ಪೊಲೀಸರು ನಡೆಸಿದ ದಾಳಿಯಲ್ಲಿ ಮಹತ್ವದ ಪ್ರಮಾಣದ ಅಕ್ರಮ ಡ್ರಗ್ಸ್‌ಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಈ ಘಟನೆ ಗ್ರಾಮೀಣ ಪ್ರದೇಶಗಳಲ್ಲಿಯೂ ಮಾದಕವಸ್ತುಗಳ ಜಾಲ ವ್ಯಾಪಕವಾಗುತ್ತಿರುವುದನ್ನು ಸೂಚಿಸುತ್ತದೆ. ಯುವಕರನ್ನು ಗುರಿಯಾಗಿಸಿಕೊಂಡು ಈ ರೀತಿಯ ಅಕ್ರಮ ಚಟುವಟಿಕೆಗಳು ನಡೆಯುತ್ತಿರುವುದು ಸಮಾಜದ ಭವಿಷ್ಯಕ್ಕೆ ದೊಡ್ಡ ಅಪಾಯವಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಈ ಹಿನ್ನೆಲೆಯಲ್ಲಿ, ಮಾದಕ ವಸ್ತುಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುವುದು ಅತ್ಯಂತ ಅಗತ್ಯವಾಗಿದೆ. ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಯುವಕರನ್ನು ಸರಿಯಾದ ದಾರಿಯಲ್ಲಿ ನಡೆಸುವುದು ಮತ್ತು ಇಂತಹ ಅಕ್ರಮ ಚಟುವಟಿಕೆಗಳನ್ನು ತಡೆಗಟ್ಟಲು ಪೊಲೀಸ್ ಇಲಾಖೆ ಇನ್ನಷ್ಟು ಕಠಿಣ ಕ್ರಮಗಳನ್ನು ಕೈಗೊಳ್ಳಬೇಕು. ಅದರೊಂದಿಗೆ, ಸ್ಥಳೀಯ ಆಡಳಿತ ಮತ್ತು ಸಾರ್ವಜನಿಕರು ಸಹಕಾರ ನೀಡುವುದರಿಂದ ಮಾತ್ರ ಈ ಸಮಸ್ಯೆಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಸಾಧ್ಯವಾಗುತ್ತದೆ. ಸಮಾಜದ ಪ್ರತಿಯೊಬ್ಬರೂ ಜವಾಬ್ದಾರಿಯನ್ನು ಅರಿತು ಮಾದಕ ವಸ್ತುಗಳ ವಿರುದ್ಧ ಒಗ್ಗಟ್ಟಿನಿಂದ ಹೋರಾಡಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಮಂದಾರ ಬಾಳುಗೋಡು , ಸಂಜಿತ್,ಗೌರವ್ , ತುಷಾರ್, ಸೂರ್ಯ ನಾರಾಯಣ,ನಮ್ರತಾ, ಶ್ರೀದತ್ತ,ಪ್ರಜ್ವಲ್ ಬಿ.ಎಸ್, ಶಿವಾನಂದ್ , ಪಟೇಲ್ ನಾರಾಯಣ್ ರೆಡ್ಡಿ ಇನ್ನಿತರರು ಉಪಸ್ಥಿತರಿದ್ದರು.




# ಗಣಪತಿ ಆಶ್ರಮದಲ್ಲಿ ಹನುಮ ಜಯಂತಿ

## ಚೈತ್ರ ಶುದ್ಧ ಹುಣ್ಣಿಮೆ ಅಂಗವಾಗಿ ಸಡಗರ



ಮೈಸೂರು: ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದ ಕಾರ್ಯಸಿದ್ಧಿ ಆಂಜನೇಯ ಸ್ವಾಮಿ ಸನ್ನಿಧಿಯಲ್ಲಿ ಚೈತ್ರ ಶುದ್ಧ ಹುಣ್ಣಿಮೆ ಅಂಗವಾಗಿ ಹನುಮ ಜಯಂತಿಯನ್ನು ಸಡಗರ ಸಂಭ್ರಮದಿಂದ ಆಚರಿಸಲಾಯಿತು.

ಆಶ್ರಮದ ಕಿರಿಯ ಪೀಠಾಧಿಪತಿ ಶ್ರೀ ದತ್ತ ವಿಜಯಾನಂದ ತೀರ್ಥ ಸ್ವಾಮೀಜಿ ಭಕ್ತಾದಿಗಳಿಗೆ ವಿಶೇಷ ಸಂದೇಶ ನೀಡಿದರು. ಹನುಮಜ್ಜಯಂತಿ ಪ್ರಯುಕ್ತ ಕಾರ್ಯಸಿದ್ಧಿ ಹನುಮಂತನಿಗೆ ವಿಶೇಷ 'ವಜ್ರಾಲಂಕಾರ' ಮಾಡಲಾಗಿತ್ತು. ಬಜರಂಗಿ ಎಂದರೆ ವಜ್ರಾಂಗಿ ಎಂದರ್ಥ. ಸ್ವಾಮಿಯು ಭಕ್ತರಿಗೆ ವಜ್ರದಂತಹ ದೈಹಿಕ ಸಾಮರ್ಥ್ಯವನ್ನು ಮತ್ತು ಹೂವಿನಂತಹ ಮೃದುವಾದ ಮನಸ್ಸನ್ನು ಕರುಣಿಸಲಿ" ಎಂದು ಸ್ವಾಮೀಜಿ ಹಾರೈಸಿದರು.

ಈ ಸಂದರ್ಭದಲ್ಲಿ ಹನುಮಂತನಿಗೆ ಪಂಚಾಮೃತ ಅಭಿಷೇಕ ಹಾಗೂ ವಿಶೇಷ ಪೂಜಾ ಕೈಂಕರ್ಯಗಳು ನೆರವೇರಿದವು. ಭಕ್ತಾದಿಗಳಿಗೆ ವೀಳ್ಯದೆಲೆ ಅರ್ಚನೆಯ ವಿಶೇಷತೆಯನ್ನು ವಿವರಿಸಿದ ಸ್ವಾಮೀಜಿ, "ವೀಳ್ಯದೆಲೆಯು ನಮ್ಮ ಹೃದಯದ ಸಂಕೇತ. ನಮ್ಮ ಮನಸ್ಸು ಮತ್ತು ಹೃದಯವನ್ನು ಸ್ವಾಮಿಗೆ ಅರ್ಪಿಸುವುದೇ ಈ ಅರ್ಚನೆಯ ಮೂಲ ಉದ್ದೇಶ ಎಂದು ತಿಳಿಸಿಕೊಟ್ಟರು.

ಸೇವಾರ್ಥಿಗಳಿಗೆ 13 ಗಂಟುಗಳಿರುವ ವಿಶೇಷ 'ಕಾರ್ಯಸಿದ್ಧಿ ರಕ್ಷೆ'ಯನ್ನು ವಿತರಿಸಲಾಯಿತು. ಈ ಬಗ್ಗೆ ಮಾತನಾಡಿದ ಶ್ರೀಗಳು, "13 ಎಂಬ ಸಂಖ್ಯೆಯು 'ಶ್ರೀರಾಮ ಜಯರಾಮ ಜಯ ಜಯ ರಾಮ' ಎಂಬ ಮಂತ್ರದ ಸಂಕೇತ. ಸೀತಾಮಾತೆಯು ಸುಂದರಕಾಂಡದಲ್ಲಿ ಹೇಳಿರುವ ಮಂತ್ರವನ್ನೇ ಜಪಿಸುತ್ತಾ, ಈ ರಕ್ಷೆಯನ್ನು ಧರಿಸಿ 16 ದಿನಗಳ ಕಾಲ ಸ್ವಾಮಿಗೆ ಪ್ರದಕ್ಷಿಣೆ ಹಾಕುವುದರಿಂದ ಸಕಲ ಕಷ್ಟಗಳು ನಿವಾರಣೆಯಾಗಿ ಕಾರ್ಯಸಿದ್ಧಿಯಾಗುವುದು ಖಂಡಿತ ಎಂದು ಹೇಳಿ ಭಕ್ತರಿಗೆ ಆಶೀರ್ವಚನ ನೀಡಿದರು. ಆಶ್ರಮದ ಹಿರಿಯ ಪೀಠಾಧಿಪತಿ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿ ಮಾರ್ಗದರ್ಶನದಲ್ಲಿ ವರ್ಷದಲ್ಲಿ ಆರು ಹನುಮಜ್ಜಯಂತಿಗಳನ್ನು ಆಚರಿಸ ಲಾಗುತ್ತದೆ. ಈ ಬಾರಿಯ ಚೈತ್ರ ಪೂರ್ಣಿಮೆಯಂದು ನಡೆದ ಹನುಮಜಯಂತಿ ಆಚರಣೆಯಲ್ಲಿ ಭಕ್ತರು ಪಾಲ್ಗೊಂಡು ಸ್ವಾಮಿಯ ದರ್ಶನ ಪಡೆದು ಪುನೀತರಾದರು.

# ಇಂದು ರಾಮನಗರದಲ್ಲಿ ಸಂಸ್ಕೃತಿ ಉತ್ಸವ

## ಸಂಸ್ಕೃತಿ ಸೌರಭ ಟ್ರಸ್ಟ್‌ವತಿಯಿಂದ ಆಯೋಜನೆ

ರಾಮನಗರ: ಕಲೆ, ಸಾಹಿತ್ಯ, ಸಾಂಸ್ಕೃತಿಕ ಕ್ಷೇತ್ರದಲ್ಲಿ ಕಳೆದ ಹತ್ತೊಂಬತ್ತು ವರ್ಷಗಳಿಂದ ನಿರಂತರವಾಗಿ ವೈವಿಧ್ಯಮಯ ಕಾರ್ಯಕ್ರಮಗಳನ್ನು ಆಯೋಜಿಸುತ್ತಾ ಬರುತ್ತಿರುವ ರಾಮನಗರದ ಸಂಸ್ಕೃತಿ ಸೌರಭ ಟ್ರಸ್ಟ್, ಇದೇ ಏಪ್ರಿಲ್ 3 ನೇ ತಾರೀಖು ಶುಕ್ರವಾರ ಸಂಜೆ 4 ಗಂಟೆಗೆ ಹತ್ತೊಂಬತ್ತನೆಯ ವರ್ಷದ "ಸಂಸ್ಕೃತಿ ಉತ್ಸವ " ಭಕ್ತಿ– ಭಾವ– ಮಧುರ ಗೀತೆಗಳ ಗಾಯನ ಹಾಗೂ "ಸಂಸ್ಕೃತಿ ಪುರಸ್ಕಾರ" ಸಮಾರಂಭವನ್ನು ಆಯೋಜಿಸಿದೆ.

ರಾಮನಗರದ ಎಂ.ಜಿ.ರಸ್ತೆಯಲ್ಲಿರುವ ಶ್ರೀ ಕನ್ನಿಕಾ ಮಹಲ್‌ನಲ್ಲಿ ನಡೆಯುವ ಈ ಕಾರ್ಯಕ್ರಮದಲ್ಲಿ ಗೌಡಗೆರೆ ಶ್ರೀ ಚಾಮುಂಡೇಶ್ವರಿ ಪುಣ್ಯ ಕ್ಷೇತ್ರದ ಧರ್ಮದರ್ಶಿ ಡಾ.ಮಲ್ಲೇಶ್ ಗುರೂಜಿ ಸಾನಿಧ್ಯ ವಹಿಸಲಿದ್ದು, ಜಿಲ್ಲಾ ಸರ್ಕಾರಿ ನೌಕರರ ಸಂಘದ ಮಾಜಿ ಅಧ್ಯಕ್ಷರಾದ ಆರ್.ಕೆ.ಬೈರಲಿಂಗಯ್ಯ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಬೆಂ.ದಕ್ಷಿಣ ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಡಾ.ಕೆ.ಸತೀಶ್ ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದಾರೆ. ಪ್ರತಿ ವರ್ಷದಂತೆ ವಿವಿಧ ಕ್ಷೇತ್ರದ ಮಹನೀಯರಿಗೆ ಸಂಸ್ಕೃತಿ ಪುರಸ್ಕಾರ ನೀಡಿ ಗೌರವಿಸಿಕೊಂಡು ಬಂದಿದ್ದು, ಈ ಬಾರಿ ಕೀರ್ತನಕಾರರು, ಕಲಾವಿದರಾದ ಮಂಡ್ಯದ ಶಿವಾರ ಉಮೇಶ್ , ಆದ್ಯಾತ್ಮಿಕ ಚಿಂತಕರು, ಪ್ರವಚನಕಾರರಾದ ಎಂ. ರಾಮಚಂದ್ರಪ್ಪ , ಹಾಗೂ ಕರ್ನಾಟಕ ಶಿಲ್ಪಕಲಾ ಅಕಾಡೆಮಿ ಶಿಲ್ಪಶ್ರೀ ಪ್ರಶಸ್ತಿ ಪುರಸ್ಕೃತ ಶಿಲ್ಪಿ ಎಂ.ಶರಣ್ ರವರಿಗೆ 2026 ರ ಸಂಸ್ಕೃತಿ ಪುರಸ್ಕಾರ ನೀಡಿ ಗೌರವಿಸಲಾಗುತ್ತಿದೆ ಸಮಾರಂಭದಲ್ಲಿ ಬಿಡದಿ ಸ್ಮಾರ್ಟ್ ಸಿಟಿ ಪ್ರಾಧಿಕಾರದ ಮಾಜಿ ಅಧ್ಯಕ್ಷರಾದ ವರದರಾಜ್ ಗೌಡ , ವಕೀಲರಾದ ಹೆಚ್.ಜಯರಾಂ , ಜಿಲ್ಲಾ ಪತ್ರಬರಹಗಾರ ಸಂಘದ ಪ್ರದಾನ ಕಾರ್ಯದರ್ಶಿ ಹೆಚ್.ಎನ್.ರಮೇಶ್ , ಜೀವ ವಿಮಾ ನಿಗಮದ ನಿವೃತ್ತ ಆಡಳಿತಾಧಿಕಾರಿ ಮೋಹನಕಾಂತ ರಂಗದಳ, ಕ್ಯಾಸಾಪುರ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾದ ಕೆ. ಎನ್.ಶ್ರೀಧರ್, ಮಾಜಿ ನಗರ ಸಭಾ ಸದಸ್ಯರಾದ ಶಿವಶಂಕರ್, ವಕೀಲರಾದ ಎಸ್.ನಾಗರಾಜು, ಡಿ.ದೇವರಾಜ ಅರಸು ಕ್ರೆಡಿಟ್ ಕೊಆಪರೇಟಿವ್ ಸೊಸೈಟಿ ಉಪಾಧ್ಯಕ್ಷರಾದ ಹೆಚ್.ಸುರೇಶ್, ಗ್ರಾಮ ಪಂಚಾಯಿತಿ ಮಾಜಿ ಸದಸ್ಯರಾದ ಕೆ.ಎಸ್.ರುದ್ರೇಶ್ ಕೂನಮುದ್ದನಹಳ್ಳಿ, ನಮ್ಮ ಕನ್ನಡ ರಕ್ಷಣಾ ವೇದಿಕೆ ಅಧ್ಯಕ್ಷರಾದ ಡಿ.ಎಂ.ಮಾದೇಗೌಡ, ವಾಸವಿ ವಿದ್ಯಾನಿಕೇತನ ಟ್ರಸ್ಟ್ ಕಾರ್ಯದರ್ಶಿ ಕೆ.ಆರ್.ನಾಗೇಶ್, ಭಾರತ್ ವಿಕಾಸ್ ಪರಿಷತ್ತಿನ ಮಾಜಿ ಅಧ್ಯಕ್ಷರಾದ ರಾ.ಸಿ.ಬಸವರಾಜು, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಕಾರ್ಯದರ್ಶಿ ಕಾ.ಪ್ರಕಾಶ್ , ರಂಗಭೂಮಿ ಕಲಾವಿದರಾದ ಶ್ಯಾನುಬೋಗನಹಳ್ಳಿ ಎಸ್.ರುದ್ರೇಶ್ ಅತಿಥಿಗಳಾಗಿ ಉಪಸ್ಥಿತರಿರುವರು, ಖ್ಯಾತ ಕಲಾವಿದರಿಂದ ಭಕ್ತಿ ಭಾವ ಮಧುರಗೀತೆಗಳ ಗಾಯನವಿರುತ್ತದೆ ಎಂದು ಸಂಸ್ಕೃತಿ ಸೌರಭ ಅಧ್ಯಕ್ಷರಾದ ಗಾಯಕ ಡಾ.ರಾ.ಬಿ.ನಾಗರಾಜ್ ತಿಳಿಸಿದ್ದಾರೆ.


# ಎಂ.ನಾರಾಯಣ್ ಗೆ ಬಾಬೂಜಿ ಪ್ರಶಸ್ತಿ

ಮೈಸೂರು: ಮಾಜಿ ಮೇಯರ್ ಹಾಗೂ ಕರ್ನಾಟಕ ರಾಜ್ಯ ಮಹಾನಗರಪಾಲಿಕೆ, ಪುರಸಭೆ, ನಗರಸಭೆಯ ಪೌರಕಾರ್ಮಿಕರ ಸಂಘದ ಗೌರವ ಅಧ್ಯಕ್ಷರಾಗಿರುವ ಎಂ.ನಾರಾಯಣ್ ಅವರಿಗೆ ಪ್ರಸಕ್ತ ಸಾಲಿನ ಡಾ.ಬಾಬು ಜಗಜೀವನ್ ರಾಂ ರಾಜ್ಯ ಪ್ರಶಸ್ತಿ ಲಭಿಸಿದೆ. ರಾಜ್ಯದಲ್ಲಿ ಐದು ಮಂದಿ ಈ ಪ್ರಶಸ್ತಿಗೆ ಆಯ್ಕೆಯಾಗಿದ್ದು, ಈ ಪೈಕಿ ಎಂ.ನಾರಾಯಣ ಅವರ ಸಾಮಾಜಿಕ ಹಾಗೂ ಆಡಳಿತ ಸೇವೆಗೆ ಈ ಪ್ರಶಸ್ತಿ ಲಭಿಸಿದೆ. ಅಲ್ಲದೆ, ಕಳೆದ 30 ವರ್ಷಗಳಿಂದ ಪೌರ ಕಾರ್ಮಿಕರ ಕಾಯಂ, ಕನಿಷ್ಠ ವೇತನ, ಆರೋಗ್ಯ ಹಕ್ಕಿಗಾಗಿ ನಡೆಸಿದ ಹೋರಾಟದಲ್ಲಿ ತೊಡಗಿಸಿಕೊಂಡಿದ್ದರು.



ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಮೈಸೂರು: ಪೊಲೀಸ್ ಧ್ವಜ ದಿನಾಚರಣೆ



ಮೈಸೂರು: ಮೈಸೂರು ನಗರ ಸಶಸ್ತ್ರ ಮೀಸಲು ಪಡೆಯ ಮೈದಾನದಲ್ಲಿ ಪೊಲೀಸ್ ಧ್ವಜ ದಿನಾಚರಣೆ ಅಯೋಜಿಸಲಾಗಿತ್ತು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಕೆಎಸ್‌ಪಿಎಸ್ ನಿವೃತ್ತ ಪೊಲೀಸ್ ಉಪ ಅಧೀಕ್ಷಕ ಶಾಂತಮಲ್ಲಪ್ಪ ಗೌರವ ವಂದನೆಯನ್ನು ಸ್ವೀಕರಿಸಿದರು. ನಂತರ ನಿವೃತ್ತ ಪೊಲೀಸ್ ಅಧಿಕಾರಿಗಳನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ದಕ್ಷಿಣ ವಲಯ ಐಜಿಪಿ ಡಾ.ಎಂ.ಬಿ.ಬೋರಲಿಂಗಯ್ಯ, ಮೈಸೂರು ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್, ಜಿಲ್ಲಾ ಪೊಲೀಸ್ ಅಧೀಕ್ಷಕ ಮಲ್ಲಿಕಾರ್ಜುನ ಬಾಲದಂಡಿ ಇತರರು ಉಪಸ್ಥಿತರಿದ್ದರು.

# 12ಕ್ಕೆ ಅದ್ವೈತ ಜಾಗೃತಿ ಜ್ಯೋತಿ ಯಾತ್ರೆ



ಮೈಸೂರು: ಪಾರಮಾರ್ಥಿಕ ಅದ್ವೈತ ಆಧ್ಯಾತ್ಮ ಸಿದ್ಧಿ ಮಹಾವಿದ್ಯಾಲಯದವತಿಯಿಂದ ಏ.12 ರಂದು ನಗರದಲ್ಲಿ ಅದ್ವೈತ ಜಾಗೃತಿ ಜ್ಯೋತಿ ರಥಯಾತ್ರೆ ಹಾಗೂ ಜಗನ್ಮೋಹನ ಅರಮನೆಯಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭ ಆಯೋಜಿಸಲಾಗಿದೆ ಎಂದು ಸಂಸ್ಥಾಪಕ ಅಧ್ಯಕ್ಷ ಕಿರಣ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಅಂದು ಬೆಳಗ್ಗೆ ಚಾಮುಂಡಿಬೆಟ್ಟದಲ್ಲಿ ಅದ್ವೈತ ಜಾಗೃತಿ ಜ್ಯೋತಿ ರಥಕ್ಕೆ ಚಾಲನೆ ನೀಡಲಾಗುವುದು. ಅದು ನಗರದ ವಿವಿಧ ರಸ್ತೆಗಳಲ್ಲಿ ಸಂಚರಿಸಿ ಜಗನ್ಮೋಹನ ಅರಮನೆ ಸಭಾಂಗಣ ತಲುಪಲಿದ್ದು, ನಂತರ ಸಂಜೆ 6.30ಕ್ಕೆ ಅಲ್ಲಿ ಕಾರ್ಯಕ್ರಮ ನಡೆಯಲಿದೆ. ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ, ಷಡಕ್ಷರಿ ದೇಶಿಕೇಂದ್ರ ಸ್ವಾಮೀಜಿ, ತ್ರಿನೇತ್ರ ಮಹಾಂತ ಶಿವಯೋಗಿ ಸ್ವಾಮೀಜಿ, ರಿಷಿಕುಮಾರ ಸ್ವಾಮೀಜಿ, ಡಾ. ವಿಜಯಾನಂದ ಗುರೂಜಿ ಇನ್ನಿತರರು ವೇದಿಕೆಯಲ್ಲಿರುವರು. ಜ್ಯೋತಿಯ ಮುಂದಾಳತ್ವ ಮಹಾಕಾಳ ಸಚ್ಚಿದಾನಂದ ಸ್ವಾಮೀಜಿ ವಹಿಸಲಿದ್ದು, ಅದಕ್ಕೆ ಶಶಿಶೇಖರ ದೀಕ್ಷಿತ್ ಚಾಲನೆ ನೀಡಲಿದ್ದಾರೆ. ಬಳಿಕ ವೇದಿಕೆ ಕಾರ್ಯಕ್ರಮದಲ್ಲಿ ಅನೇಕ ಗಣ್ಯರಿಗೆ ಜೀವಮಾನ ಸಾಧನೆ ಪ್ರಶಸ್ತಿ ಪ್ರದಾನ ಮಾಡಲಾಗುವುದೆಂದು ಮಾಹಿತಿ ನೀಡಿದರು.

ಕೆ.ಆರ್. ರಾಜೀವ್ ಲೋಚನ್, ಸಚ್ಚಿದಾನಂದ ತ್ರಿಪಾಠಿ, ಶಿವಕುಮಾರ್, ಗಂಗಾಧರಯ್ಯ, ಚಿತ್ರಾ ಸುಬ್ಬಯ್ಯ, ವಿಶ್ವನಾಥ್ ಇದ್ದರು.

# ಯುವಸಮೂಹ ರಾಜಕೀಯ ಪ್ರಾತಿನಿಧ್ಯಕ್ಕೆ ಒತ್ತಾಯಿಸಲಿ

ಮೈಸೂರು: ದೇಶದ ಅರ್ಧದಷ್ಟಿರುವ ಯುವಕರು ಮುಂಬರುವ ಚುನಾವಣೆಗಳಲ್ಲಿ ರಾಜಕೀಯ ಪ್ರಾತಿನಿಧ್ಯ ನೀಡುವಂತೆ ರಾಜಕೀಯ ಪಕ್ಷಗಳನ್ನು ಒತ್ತಾಯಿಸಬೇಕು ಎಂದು ಲೇಖಕಿ, ಹೋರಾಟಗಾರ್ತಿ ಡಾ.ಎಚ್.ಎಸ್. ಅನುಪಮಾ ಕರೆ ನೀಡಿದರು.

ಮಹಾರಾಜ ಕಾಲೇಜಿನ ಜೂನಿಯರ್ ಬಿಎ ಹಾಲ್‌ನಲ್ಲಿ ಮೈಸೂರು ವಿವಿ ಸಂಶೋಧಕರ ಸಂಘ, ಅರಿವಿನ ಚಾವಡಿ, ದಲಿತ ವಿದ್ಯಾರ್ಥಿ ಒಕ್ಕೂಟ, ಉಳುಮೆ ಪ್ರತಿಷ್ಠಾನದ ಸಹಯೋಗದಲ್ಲಿ ಗುರುವಾರ ಆಯೋಜಿಸಿದ್ದ ಯುವ ಜನತೆ ನಮ್ಮ ನಾಳೆಯ ಭರವಸೆ ಉಪನ್ಯಾಸದಲ್ಲಿ ಅವರು ಮಾತನಾಡಿದರು. ದೇಶದ 145 ಕೋಟಿ ಜನಸಂಖ್ಯೆಯಲ್ಲಿ 75 ಕೋಟಿ ಯುವಕರಿದ್ದಾರೆ. ಜಗತ್ತಿನ ಯಂಗ್ ದೇಶ ಭಾರತ. ಆದರೆ, 543 ಸಂಸದರಲ್ಲಿ 30 ವರ್ಷದೊಳಗಿನ ಸಂಸದರು ಕೇವಲ 7. ಕರ್ನಾಟಕದ ಸಾಗರ್ ಖಂಡ್ರೆ, ಪ್ರಿಯಾಂಕ ಜಾರಕಿಹೊಳಿ ಸೇರಿ ಏಳು ಸಂಸದರೂ ರಾಜಕೀಯ ಕುಟುಂಬದಿಂದ ಬಂದವರಾಗಿದ್ದಾರೆ ಎಂದರು. 18 ವರ್ಷಕ್ಕೆ ಮತದಾನದ ಹಕ್ಕು ಇರುವುದಾದರೆ ನಿರ್ಧಾರ ತೆಗೆದುಕೊಳ್ಳುವ ಸ್ಥಾನಗಳಲ್ಲಿ ಯಾಕಿಲ್ಲ? 30 ವರ್ಷದೊಳಗಿನವರಿಗೆ ವಿಧಾನಸಭೆ, ಲೋಕಸಭೆಯಲ್ಲಿ ಸ್ಥಾನಗಳನ್ನು ಮೀಸಲಿರಿಸಬೇಕು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಯುವಕರು ಪಾಲ್ಗೊಳ್ಳುವ ಅವಕಾಶ ಇಲ್ಲದಿದ್ದರೆ ಗಂಭೀರ ಲೋಪ ಎಂದರು.




ಯುವಕರು ದೇಶಕ್ಕೆ ದಾರಿ ತೋರಿಸಬಲ್ಲರು. ಬೆಳಕಾಗಬಲ್ಲರು. ಅವರ ಲೋಕದೃಷ್ಟಿ ದೀರ್ಘಕಾಲದ್ದು. ಅಡೆತಡೆಗಳನ್ನು ದಾಟಬಲ್ಲರು. ಬಾಬಾ ಸಾಹೇಬರು ಹೇಳಿದಂತೆ ಪ್ರತಿ ತಲೆಮಾರು ಹೊಸ ದೇಶ. ಲೋಕಹಿತದ ಆಲೋಚನೆ ಮಾಡುವ ಶಕ್ತಿ ವಯಸ್ಸಾದವರಿಗಲ್ಲ, ಯುವಕರಿಗಿದೆ ಎಂದು ಹೇಳಿದರು. ಪ್ರಾಧ್ಯಾಪಕ ಡಾ.ಲ್ಯಾನ್ಸಿ ಡಿಸೋಜಾ ಅಧ್ಯಕ್ಷತೆ ವಹಿಸಿದ್ದರು. ಲೇಖಕ ಅವಿನಾಶ್ ಟಿ.ಜಿ.ಎಸ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಮಾಜಶಾಸ್ತ್ರ ವಿಭಾಗದ ಅಧ್ಯಕ್ಷೆ ಡಾ. ಎಂ.ಮಂಜುಳಾ, ಜಾನಪದ ವಿಭಾಗದ ಪ್ರಾಧ್ಯಾಪಕಿ ಪ್ರೊ.ವಿಜಯಲಕ್ಷ್ಮಿ ಮನಾಪುರ, ಮಹಾರಾಜ ಕಾಲೇಜು ಮಹಿಳಾ ಸಂಘಟನೆ ಸಂಚಾಲಕಿ ಕೆ.ಎಂ.ಲಕ್ಷ್ಮಮ್ಮ, ಸಂಶೋಧಕರ ಸಂಘದ ಅಧ್ಯಕ್ಷ ವರಹಳ್ಳಿ ಆನಂದ್, ದಲಿತ ವಿದ್ಯಾರ್ಥಿ ಒಕ್ಕೂಟದ ಅಧ್ಯಕ್ಷ ಗಜೇಂದ್ರ ಚಿನ್ನಸ್ವಾಮಿ, ಮಲ್ಲೇಶ್ ಬಾಚಳ್ಳಿ, ಕಲ್ಲಹಳ್ಳಿ ಕುಮಾರ್ ಮುಂತಾದವರಿದ್ದರು. ಶೇಷಣ್ಣ ಮತ್ತು ತಂಡದವರು ಪ್ರಾರ್ಥಿಸಿದರು.

## ಎಸ್.ಟಿ.ಆರ್.ಆರ್ ಯೋಜನೆಗೆ ಭೂಸ್ವಾಧೀನ

# ಪರಿಹಾರ ಬಿಡುಗಡೆಗೆ ಅಮಿತ್ ಶಾಗೆ ಮನವಿ

ರಾಮನಗರ: ಎಸ್.ಟಿ.ಆರ್.ಆರ್ ಯೋಜನೆಗಾಗಿ ಸ್ವಾಧೀನವಾಗಿರುವ ಭೂಮಿಗೆ ಪರಿಹಾರವನ್ನು ಬಿಡುಗಡೆ ಮಾಡುವ ವಿಚಾರದಲ್ಲಿ ತುರ್ತು ಕ್ರಮ ಕೈಗೊಳ್ಳುವಂತೆ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದ ಡಾ.ಸಿ.ಎನ್. ಮಂಜುನಾಥ್ ತೀರಾ ಇತ್ತೀಚೆಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ಮನವಿ ಸಲ್ಲಿಸಿದ್ದಾರೆ.

ಈ ಕುರಿತು ಸಂಸದರು ಪತ್ರಿಕಾ ಪ್ರಕಟಣೆ ಹೊರಡಿಸಿದ್ದಾರೆ. ಬೆಂಗಳೂರು ಸ್ಯಾಟಿಲೈಟ್ ಟೌನ್ ರಿಂಗ್ ರೋಡ್ ನಿರ್ಮಾಣಕ್ಕಾಗಿ ಮಾಗಡಿ, ರಾಮನಗರ, ಕನಕಪುರ, ಹಾರೋಹಳ್ಳಿ ಮತ್ತು ಆನೇಕಲ್ ತಾಲ್ಲೂಕುಗಳಲ್ಲಿ ಭೂ ಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡಿದೆ. ಆದರೆ ಇದುವರೆವಿಗೂ ರೈತರು ಮತ್ತು ಭೂಮಾಲೀಕರಿಗೆ ಸಂಪೂರ್ಣ ಪರಿಹಾರದ ಮೊತ್ತ ಬಿಡುಗಡೆಯಾಗಿಲ್ಲ. ಈ ವಿಳಂಬದಿಂದಾಗಿ ರೈತರು ಮತ್ತು ಭೂಮಾಲೀಕರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಈ ವಿಚಾರದಲ್ಲಿ ಸಾರ್ವಜನಿಕರ ಅಸಮಧಾನ ಹೆಚ್ಚಾಗುತ್ತಿದೆ ಎಂದು ಗೃಹ ಸಚಿವರಿಗೆ ಮನವರಿಕೆ ಮಾಡಿಕೊಡಲಾಗಿದೆ ಎಂದು ಸಂಸದರು ತಿಳಸಿದ್ದಾರೆ.



ಇದೇ ವಿಚಾರದಲ್ಲಿ ಪ್ರಧಾನಿ ನರೇಂದ್ರ ಮೋದಿ, ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರ ಗಮನವನ್ನು ಸೆಳೆಯಲಾಗಿದೆ. ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ಸಹ ಪ್ರಧಾನಿಗಳು ಹಾಗೂ ಹೆದ್ದಾರಿ ಸಚಿವರೊಂದಿಗೆ ಸಮಾಲೋಚನೆ ನಡೆಸಿದ್ದಾರೆ ಎಂದು ವಿವರಿಸಿದ್ದಾರೆ.

ಎಸ್.ಟಿ.ಆರ್.ಆರ್ ಯೋಜನೆಗೆ ಸಂಬಂಧಿಸಿದ ಎಲ್ಲಾ ಅಗತ್ಯ ಅನುಮೋದನೆಗಳು ಈಗಾಗಲೆ ದೊರೆತಿದೆ. ಕೇಂದ್ರ ಸಚಿವ ಸಂಪುಟದ ಅಂತಿಮ ಅನುಮೋದನೆ ಬಾಕಿ ಇದೆ ಎಂದು ತಿಳಿಸಿರುವ ಅವರು ಭೂಸ್ವಾಧೀನವಾಗಿರುವ ಭೂಮಿಗೆ ಪರಿಹಾರ ಬಿಡುಗಡೆಗೆ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿರುವುದಾಗಿ ತಿಳಿಸಿದ್ದಾರೆ.

ತಮ್ಮ ಮನವಿಗೆ ಗೃಹ ಸಚಿವ ಅಮಿತ್ ಶಾ ಸ್ಪಂದಿಸಿದ್ದಾರೆ. ವಿಷಯವನ್ನು ಸಂಬಂಧಿಸಿದ ಇಲಾಖೆಗಳೊಂದಿಗೆ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವ ಭರವಸೆ ನೀಡಿದ್ದಾರೆ. ಎಸ್.ಟಿ.ಆರ್. ಅರ್ ಯೋಜನೆ ಮಹತ್ವದ ಯೋಜನೆಯಾಗಿದೆ. ಪರಿಹಾರ ಬಿಡುಗಡೆ ಆಗುವುದರಿಂದ ರೈತರು ಮತ್ತು ಭೂಮಾಲೀಕರಲ್ಲಿ ವಿಶ್ವಾಸ ಮೂಡಲಿದೆ ಎಂದು ಸಂಸದ ಡಾ.ಸಿ.ಎನ್.ಮಂಜುನಾಥ್ ತಮ್ಮ ಹೇಳಿಕೆಯಲ್ಲಿ ತಿಳಿಸಿದ್ದಾರೆ.

# ಸೇವಾಕಾರ್ಯ ಮೂಲಕ ಹೇಮಾವತಿ ಹುಟ್ಟುಹಬ್ಬ ಆಚರಣೆ



ರಾಮನಗರ: ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಮಾಶಾಸನವನ್ನು ಪಡೆಯುತ್ತಿರುವ ತಾಲ್ಲೂಕಿನ 90 ಮಂದಿ ಅಶಕ್ತರು, ವೃದ್ದರಿಗೆ ಹಣ್ಣು ಹಂಪಲುಗಳನ್ನು ವಿತರಣೆ ಮಾಡುವುದರ ಮೂಲಕ ಮಹಿಳಾ ಜ್ಞಾನವಿಕಾಸ ಕಾರ್ಯಕ್ರಮದ ಅಧ್ಯಕ್ಷರೂ ಆಗಿರುವ ಧರ್ಮಸ್ಥಳ ಧರ್ಮಾಧಿಕಾರಿ ಡಾ.ಡಿ.ವಿರೇಂದ್ರ ಹೆಗಡೆಯವರ ಧರ್ಮಪತ್ನಿ ಡಾ.ಡಿ.ಹೇಮಾವತಿ ಅವರ ಹುಟ್ಟುಹಬ್ಬವನ್ನು ಯೋಜನೆಯ ಅಧಿಕಾರಿಗಳು ಆಚರಿಸಿದರು.

ಆಚರಣೆಯ ಅಂಗವಾಗಿ ಮಾತನಾಡಿದ ಜಿಲ್ಲಾ ಜನಜಾಗೃತಿ ವೇದಿಕೆಯ ಸ್ಥಾಪಕ ಅಧ್ಯಕ್ಷ ಚಿಕ್ಕಣ್ಣಯ್ಯ, ತಮ್ಮದೇ ಕುಟುಂಬಸ್ಥರಿಂದ ನಿರ್ಲಕ್ಷಕ್ಕೆ ಒಳಗಾದ ಆಶಕ್ತರು, ವೃದ್ದರನ್ನು ಗುರುತಿಸಿ ಅವರ ಜೀವನ ನಿರ್ವಹಣೆ ಹಾಗೂ ಔ?ಧಿ ಖರ್ಚಿಗಾಗಿ ಶ್ರೀ ಕ್ಷೇತ್ರದಿಂದ ಪ್ರತಿ ತಿಂಗಳು ಮಾಸಾಸನವನ್ನು ನೀಡಲಾಗುತ್ತಿದೆ. ಈ ಸದಸ್ಯರಿಗೆ ಮೂಲಭೂತ ಸೌಕರ್ಯದ ಕೊರತೆ ಇದ್ದಲ್ಲಿ ಹಾಗೂ ಆರೋಗ್ಯಕರ ಜೀವನ ನಿರ್ವಹಣೆ ಮಾಡಲು ವಾತ್ಸಲ್ಯ ಕಿಟ್ಟನ್ನು ನೀಡಲಾಗುತ್ತಿದೆ. ತಾಲೂಕಿನಲ್ಲಿ ಒಟ್ಟು 92 ಮಂದಿ ಅಬಲೆಯರಿಗೆ ಪ್ರತಿ ತಿಂಗಳು ಮಾಸಾಶನವನ್ನು ನೀಡಲಾಗುತ್ತಿದೆ. ಮನೆ ಇಲ್ಲದವರಿಗೆ ಮನೆ ನಿರ್ಮಾಣವನ್ನು ವಾತ್ಸಲ್ಯ ಎನ್ನುವ ಕಾರ್ಯಕ್ರಮದ ಮುಖಾಂತರ ನಿರ್ಮಾಣ ಮಾಡಿಕೊಡ ಲಾಗುತ್ತಿದೆ ಎಂದು ಗ್ರಾಮಾಭಿವೃದ್ಧಿ ಯೋಜನೆಯ ಕಾರ್ಯಕ್ರಮಗಳನ್ನು ಶ್ಲಾಘಿಸಿದರು. ಧರ್ಮಾಧಿಕಾರಿಗಳ ಧರ್ಮಪತ್ನಿಯವರಾದ ಮಾತೃಶ್ರೀ ಡಾ.ಡಿ.ಹೇಮಾವತಿ ಅವರ ಹುಟ್ಟು ಹಬ್ಬದ ಅಂಗವಾಗಿ ಮಾಶಾಸನ ಪಡೆಯುತ್ತಿರುವ ಫಲಾನುಭವಿ ಗಳಿಗೆ ಹಣ್ಣುಗಳನ್ನು ವಿತರಿಸಲಾಗಿದೆ ಎಂದರು ಈ ವೇಳೆ ರೋಟರಿ ಸೆಂಟ್ರಲ್ ಬಿಡದಿ ಅಧ್ಯಕ್ಷರು ಹಾಗೂ ಪುರಸಭಾ ಸದಸ್ಯರಾದ ರಮೇಶ್, ಜಿಲ್ಲಾ ಜನ ಜಾಗೃತಿ ವೇದಿಕೆಯ ಸದಸ್ಯರುಗಳಾದ ಮಂಜುನಾಥ್ ಬಿಡದಿ, ಮಂಜುನಾಥ್ ಶಾನುಭೋಗನ ಹಳ್ಳಿ, ಗ್ರಾಮದ ಗಣ್ಯರಾದ ಕೇಶವ ಗೌಡ ತಡಿಕವಾಗಿಲು, ತಾಲೂಕು ಯೋಜನಾಧಿಕಾರಿ ಮುರಳಿದರ,ಒಕ್ಕೂಟದ ಅಧ್ಯಕ್ಷರುಗಳು ಸ್ವಸಹಾಯ ಸಂಘ ಸದಸ್ಯರು, ತಾಲೂಕಿನ ಮೇಲ್ವಿಚಾರಕರು ಸೇವ ಪ್ರತಿನಿಧಿಯರು ಉಪಸ್ಥಿತರಿದ್ದರು.

# ಬೇಡಿಕೆಗಳನ್ನು ಈಡೇರಿಸುವಂತೆ ಮನವಿ



ಕೊಳ್ಳೇಗಾಲ: ನಗರದಲ್ಲಿ ಹೆಚ್ಚುತ್ತಿರುವ ವಾಹನ ದಟ್ಟಣೆ ಹಾಗೂ ಅಪಘಾತಗಳನ್ನು ತಡೆಗಟ್ಟುವ ಉದ್ದೇಶದಿಂದ ಕರ್ನಾಟಕ ರಕ್ಷಣಾ ವೇದಿಕೆ (ನಾರಾಯಣ ಗೌಡ ಬಣ) ವತಿಯಿಂದ ಇಂದು ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ನಗರಸಭೆ ಕಾರ್ಯಾಲಯದಲ್ಲಿ ಮ್ಯಾನೇಜರ್ ಲಿಂಗರಾಜು ಹಾಗೂ ಡಿವೈಎಸ್ಪಿ ಧರ್ಮೇಂದ್ರ ಅವರಿಗೆ ಮನವಿ ನೀಡಲಾಯಿತು. ತಾಲ್ಲೂಕು ಕರವೇ ಅಧ್ಯಕ್ಷ ಅಯಾಜ್ ಕನ್ನಡಿಗ ಮಾತನಾಡಿ, ಕೊಳ್ಳೇಗಾಲ ನಗರದಲ್ಲಿ ದಿನೇದಿನೇ ವಾಹನಗಳ ಸಂಚಾರ ಹೆಚ್ಚುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿದೆ ಎಂದು ಹೇಳಿದರು. ವಿಶೇಷವಾಗಿ ಸರ್ಕಾರಿ ಆಸ್ಪತ್ರೆ ವೃತ್ತ, ಕೋರ್ಟ್ ವೃತ್ತ ಹಾಗೂ ಗುರುಕಾರ್ ವೃತ್ತಗಳಲ್ಲಿ ವಾಹನ ದಟ್ಟಣೆ ಹೆಚ್ಚಿರುವುದರಿಂದ ಅಪಘಾತಗಳ ಸಂಭವ ಹೆಚ್ಚುತ್ತಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದರು.

ಈ ಹಿನ್ನೆಲೆಯಲ್ಲಿ, ಪ್ರಮುಖ ವೃತ್ತಗಳಲ್ಲಿ ಬಿಳಿ ಜಿಬ್ರಾ ಕ್ರಾಸಿಂಗ್ಅಳವಡಿಸಿ ಪಾದಚಾರಿಗಳಿಗೆ ಸುರಕ್ಷಿತವಾಗಿ ರಸ್ತೆ ದಾಟಲು ಅವಕಾಶ ಕಲ್ಪಿಸಬೇಕು ಎಂದು ಅವರು ಆಗ್ರಹಿಸಿದರು. ಇದರಿಂದ ವಾಹನ ಸಂಚಾರ ಸುಗಮವಾಗುವುದರ ಜೊತೆಗೆ ಅಪಘಾತಗಳನ್ನು ಕೂಡ ಕಡಿಮೆ ಮಾಡಬಹುದು ಎಂದರು. ಸರ್ಕಾರ ಸಾರ್ವಜನಿಕರ ಸುರಕ್ಷತೆಯನ್ನು ಗಮನದ ಲ್ಲಿಟ್ಟುಕೊಂಡು ತಕ್ಷಣವೇ ಈ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಕರವೇ ಒತ್ತಾಯಿಸಿದೆ. ಗೌರವಾಧ್ಯಕ್ಷ ಇದ್ರೀಸ್ ಪಾಷ, ಮಹದೇವ ಪ್ರಸಾದ್, ನಿಶಾರ್ ಅಹಮ್ಮದ್, ಕಾರ್ಯದರ್ಶಿ ಸುಂದರ ಶಾಸ್ತ್ರಿ, ಯುವ ಮುಖಂಡ ನವೀನ್, ಮುಬಾರಕ್, ಮುಡಿ ಗುಂಡ ಸೋಮಣ್ಣ, ಮಧುನಾಯಕ, ರೈತ ಮುಖಂಡ ರಾಮಕೃಷ್ಣ ಇತರರು ಉಪಸ್ಥಿತರಿದ್ದರು.

# ನಾಳೆ ಜೆಎಸ್‌ಎಸ್ ವೈದ್ಯಕೀಯ ಕಾಲೇಜು ಪದವಿ ದಿನಾಚರಣೆ



ಮೈಸೂರು: ನಗರದ ಜೆಎಸ್‌ಎಸ್ ವೈದ್ಯಕೀಯ ಮಹಾವಿದ್ಯಾಲಯದ ಪದವೀಧರರ ದಿನಾಚರಣೆಯನ್ನು ಏ.4 ರಂದು ಸಂಜೆ 4 ಕ್ಕೆ ಜೆಎಸ್‌ಎಸ್ ವೈದ್ಯಕೀಯ ಸಂಸ್ಥೆಗಳ ಆವರಣದಲ್ಲಿ ಆಯೋಜಿಸಲಾಗಿದೆ ಎಂದು ಪ್ರಾಂಶುಪಾಲ ಡಾ.ಡಿ.ನಾರಾಯಣಪ್ಪ ತಿಳಿಸಿದರು.

195 ವಿದ್ಯಾರ್ಥಿಗಳಿಗೆ ಪದವಿ ಪ್ರಮಾಣಪತ್ರಗಳನ್ನು ಮತ್ತು 6 ಪ್ರತಿಭಾವಂತ ವಿದ್ಯಾರ್ಥಿಗಳಿಗೆ 11 ಚಿನ್ನದ ಪದಕಗಳು ಹಾಗೂ 12 ನಗದು ಬಹುಮಾನಗಳನ್ನು ಪ್ರಧಾನ ಮಾಡ ಲಾಗುವುದು. ಪದವೀಧರರು ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಲಿದ್ದಾರೆ ಎಂದರು. ಈ ಕಾರ್ಯಕ್ರಮದಲ್ಲಿ ಅಧ್ಯಾಪಕರ ಸಾಧನೆಯನ್ನು ಗುರುತಿಸಿ ಉತ್ತಮ ಬೋಧಕ ಪ್ರಶಸ್ತಿ, ಅತ್ಯುನ್ನತ ಸಂಶೋಧನಾ ಪ್ರಶಸ್ತಿ, ವೈ.ಟಿ.ತಾತಾಚಾರಿ ದತ್ತಿ ಪ್ರಶಸ್ತಿಯನ್ನು ನೀಡಲಾಗುತ್ತದೆ ಎಂದರು. ಈ ಕಾರ್ಯಕ್ರಮದಲ್ಲಿ ಸುತ್ತೂರು ಮಠದ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದಾರೆ. ಜೆಎಸ್‌ಎಸ್ ಮಹಾವಿದ್ಯಾ ಪೀಠದ ಕಾರ್ಯ ನಿರ್ವಾಹಕ ಕಾರ್ಯದರ್ಶಿ ಡಾ.ಸಿ.ಜಿ.ಬೆಟ್‌ಸೂರ್‌ಮತ್ ಅಧ್ಯಕ್ಷತೆ ವಹಿಸಲಿದ್ದಾರೆ. ಜೆಎಸ್‌ಎಸ್–ಎಎಚ್‌ಇಆರ್ ಸಮ ಕುಲಾಧಿಪತಿ ಡಾ.ಬಿ. ಸುರೇಶ್, ಕುಲಪತಿ ಡಾ.ಎಚ್. ಬಸವನಗೌಡಪ್ಪ ಗೌರವ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದರು. ನವದೆಹಲಿಯ ರಾಷ್ಟ್ರೀಯ ವೈದ್ಯಕೀಯ ಆಯೋಗದ ಮೆಡಿಕಲ್ ಅಸೆಸ್ಮೆಂಟ್ ಮತ್ತು ರೇಟಿಂಗ್ ಬೋರ್ಡ್ ಅಧ್ಯಕ್ಷ ಡಾ.ಎಂ.ಕೆ.ರಮೇಶ್ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪದಕಗಳು, ಬಹುಮಾನಗಳನ್ನು ಪ್ರಧಾನ ಮಾಡಲಿದ್ದಾರೆ ಎಂದರು.

ಜೆಎಸ್‌ಎಸ್ ವೈದ್ಯಕೀಯ ಕಾಲೇಜು ನಿರಂತರ 9 ವರ್ಷಗಳಿಂದ ಎನ್‌ಐಆರ್‌ಎಫ್ ಶ್ರೇಯಾಂಕದಲ್ಲಿ ದೇಶದ ಟಾಪ್ 40 ವೈದ್ಯಕೀಯ ಕಾಲೇಜುಗಳಲ್ಲಿ ಸ್ಥಾನ ಪಡೆದಿದೆ. 2025 ರ ಕ್ಯೂಎಸ್ ಗೇಜ್ ಮೌಲ್ಯ ಮಾಪನದಲ್ಲಿ ಪ್ಲಾಟಿನಂ ಪ್ಲಸ್ ರೇಟಿಂಗ್ ಪಡೆದಿದ್ದು, ಕೆರಿಯರ್ 360 ರ್ಯಾಂಕಿಂಗ್ 2025 ರಲ್ಲಿ ಖಾಸಗಿ ವೈದ್ಯಕೀಯ ಕಾಲೇಜುಗಳಲ್ಲಿ 4ನೇ ಸ್ಥಾನದಲ್ಲಿದೆ. 2025 ನೇ ಶೈಕ್ಷಣಿಕ ವರ್ಷದಲ್ಲಿ ಸಂಸ್ಥೆ 721 ಕ್ಕೂ ಹೆಚ್ಚು ಸಂಶೋಧನಾ ಲೇಖನಗಳನ್ನು ಅಂತರರಾಷ್ಟ್ರೀಯ ಮಟ್ಟದ ಜರ್ನಲ್‌ಗಳಲ್ಲಿ ಪ್ರಕಟಿಸಿದೆ ಎಂದು ತಿಳಿಸಿದರು. ಈ ಸಂಸ್ಥೆಯಿಂದ ಒಟ್ಟು 6010 ಎಂಬಿಬಿಎಸ್, 2629 ಪಿಜಿ ವಿದ್ಯಾರ್ಥಿಗಳು ವೈದ್ಯಕೀಯ ವೃತ್ತಿಪರರಾಗಿ ಹೊರಬಂದಿದ್ದು, ಕ್ಲಿನಿಕಲ್ ಪರಿಣಿತಿ, ನೈತಿಕ ಮೌಲ್ಯಗಳು ಹಾಗೂ ರೋಗಿ ಸೇವೆಯ ಬದ್ಧತೆಯೊಂದಿಗೆ ದೇಶದ ವಿವಿಧ ಭಾಗಗಳಲ್ಲಿ ಹಾಗೂ ವಿದೇಶಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ ಎಂದರು. ಪರೀಕ್ಷ ನಿಯಂತ್ರಕ ಸುಧೀಂದ್ರ ಭಟ್,ಉಪ ಪ್ರಾಂಶುಪಾಲರಾದ ಡಾ.ಸುಮಾ, ಡಾ.ಮಾಂತಪ್ಪ, ಜೆಎಸ್‌ಎಸ್ ಆಸ್ಪತ್ರೆ ನಿರ್ದೇಶಕ ಡಾ.ಸಿ.ಪಿ. ಮಧು, ಆಡಳಿತಾಧಿಕಾರಿ ಎಸ್.ಆರ್.ಸತೀಶ್ಚಂದ್ರ ಇದ್ದರು.

# ಗೆಲುವಿಗೆ ಚಲಾಯಿತ ಮತಗಳಲ್ಲಿ ಶೇ.50 ರಷ್ಟು ನಿಗದಿಪಡಿಸಲಿ

## ಮುಖ್ಯಮಂತ್ರಿ ಚಂದ್ರು ಹೇಳಿಕೆ । ಮುಕ್ತ ಸಂವಾದ



ಮೈಸೂರು: ಮತದಾರರಿಗೆ ಚುನಾಯಿತ ಪ್ರತಿನಿಧಿಗಳನ್ನು ವಾಪಸ್ ಕರೆಸಿಕೊಳ್ಳುವ ಅಧಿಕಾರ ಇರಬೇಕಿತ್ತು. ಅಂತೆಯೇ ಗೆಲುವಿಗೆ ಚಲಾಯಿತ ಮತಗಳಲ್ಲಿ ಶೇ.50ರಷ್ಟು ನಿಗದಿಪಡಿಸಲಿ ಎಂದು ಖ್ಯಾತ ಚಲನಚಿತ್ರ ನಟ ಡಾ.ಮುಖ್ಯಮಂತ್ರಿ ಚಂದ್ರು ಅಭಿಪ್ರಾಯಪಟ್ಟರು.

ನಗರದ ವಾಲ್ಮೀಕಿ ರಸ್ತೆಯ ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನಲ್ಲಿ ದಾರಿ ಫೌಂಡೇಷನ್ ಗುರುವಾರ ಏರ್ಪಡಿಸಿದ್ದ 'ಭವಿಷ್ಯದಲ್ಲಿ ಪ್ರಜಾಪ್ರಭುತ್ವದ ರಕ್ಷಣೆಯ ಜವಾಬ್ದಾರಿ ಯುವಶಕ್ತಿಯ ಕೈಯಲ್ಲಿ' ಕುರಿತ ಮುಕ್ತ ಸಂವಾದವನ್ನು ಉದ್ಘಾಟಿಸಿ ಮಾತನಾಡಿದ ಅವರು, ಅದೇ ರೀತಿ ಗೆಲುವಿಗೆ ಚಲಾಯಿತ ಮತಗಳ ಪೈಕಿ ಶೇ.50 ರಷ್ಟನ್ನು ನಿಗದಿಪಡಿಸಬೇಕು ಎಂದು ಆಗ್ರಹಿಸಿದರು.

ಈಗ ಆಯ್ಕೆಯಾದ ನಂತರ ಐದು ವರ್ಷ ಚುನಾಯಿತಪ್ರತಿನಿಧಿಗಳು ಏನು ಮಾಡಿದರೂ ಕೇಳುವಂತಿಲ್ಲ ಎಂಬಂತಿದೆ. ಇದು ಹೋಗಬೇಕು. ಅವರು ಮತದಾರರಿಗೆ ಉತ್ತರದಾಯಿಗಳಾಗಿರಬೇಕು. ವಾಪಸ್ ಕರೆಸಿಕೊಳ್ಳುವ ಅಧಿಕಾರ ಇದ್ದಲ್ಲಿ ಭಯದಿಂದ ಜನರ ಕೆಲಸ ಮಾಡುತ್ತಾರೆ. ಚುನಾಯಿತ ಪ್ರತಿನಿಧಿಗಳು ಪ್ರಜೆಗಳ ಗುಲಾಮರಾಗಿರಬೇಕೆ ಹೊರತು ಪ್ರಜೆಗಳನ್ನೇ ತಮ್ಮ ಗುಲಾಮರನ್ನಾಗಿ ಮಾಡಿಕೊಳ್ಳಬಾರದು ಎಂದು ಅವರು ಮಾರ್ಮಿಕವಾಗಿ ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಪ್ರೊ.ಸಿ. ನಟರಾಜ್ ಮಾತನಾಡಿ, ಪ್ರತಿಯೊಬ್ಬರೂ ಬದ್ಧತೆ, ಪ್ರಾಮಾಣಿಕತೆ ಬೆಳೆಸಿಕೊಳ್ಳಬೇಕು. ಯಾವುದೇ ಹುದ್ದೆಗೆ ಹೋದರೂ ಭ್ರಷ್ಟಾಚಾರಮುಕ್ತವಾಗಿ ಕೆಲಸ ಮಾಡುವ ಸಂಕಲ್ಪ ಮಾಡಬೇಕು ಎಂದು ಕರೆ ನೀಡಿದರು.

ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ದಾರಿ ಫೌಂಡೇಷನ್ ಅಧ್ಯಕ್ಷ ಎಲ್. ರಂಗಯ್ಯ ಮುಖ್ಯ ಅತಿಥಿಗಳಾಗಿದ್ದರು. ಕಾರ್ಯದರ್ಶಿ ತಗಡೂರು ವೀರೇಶ್‌ಕುಮಾರ್ ಮಹಾಮನೆ ಪ್ರಾಸ್ತಾವಿಕ ಭಾಷಣ ಮಾಡಿದರು. ಸಂಚಾಲಕ ಪ್ರಭಾಕರ್, ಐಕ್ಯೂಎಸಿ ಸಂಚಾಲಕ ಡಾ.ಎಸ್. ಮುತ್ತುರಾಜ, ಖಜಾಂಚಿ ರಾಘವೇಂದ್ರ, ಮಲ್ಲಣ್ಣ, ತೋಂಟೇಶ್ ಮೊದಲಾದವರು ಇದ್ದರು. ಐಕ್ಯತಾ ಪ್ರಾರ್ಥಿಸಿದರು. ಮೈಸೂರು ಎಂ. ಮಹಾಲಿಂಗ ಅವರು ನಾಡಗೀತೆ ಹಾಗೂ ಸಂವಿಧಾನಗೀತೆ ಹಾಡಿದರು. ವಿದ್ಯಾರ್ಥಿನಿ ಅಧ್ಯಕ್ಷೆ ಎಸ್.ಜೆ. ಸಿಂಚನಾ ಸ್ವಾಗತಿಸಿದರು. ಕಾರ್ಯದರ್ಶಿ ಸೈಯದಾ ನೂರೈನ್ ವಂದಿಸಿದರು. ತನುಶ್ರೀ ವಂದಿಸಿದರು. ಪಲ್ಲವಿ ಅತಿಥಿಗಳನ್ನು ಪರಿಚಯಿಸಿದರು.

### ಇದ್ಯಾವ ರೀತಿಯ ಪ್ರಜಾಪ್ರಭುತ್ವ?

**ಈಗ ಶೇ.50 ರಷ್ಟು ಮತದಾನ ಆಗದಿದ್ದರೂ , ಚಲಾಯಿತ ಮತಗಳಲ್ಲಿ ಶೇ.50 ಮತಗಳನ್ನು ಪಡೆಯದಿದ್ದರೂ ಹೆಚ್ಚು ಮತ ಪಡೆದವರನ್ನು ಚುನಾಯಿತ ಎಂದು ಘೋಷಿಸಲಾಗುತ್ತಿದೆ. ಇದ್ಯಾವ ರೀತಿಯ ಪ್ರಜಾಪ್ರಭುತ್ವ?. ಇದು ತಪ್ಪಬೇಕು. ಗೆಲುವಿಗೆ ಚಲಾಯಿತ ಮತಗಳಲ್ಲಿ ಶೇ.50 ರಷ್ಟು ನಿಗದಿಪಡಿಸಬೇಕು ಎಂದು ಮುಖ್ಯಮಂತ್ರಿ ಚಂದ್ರು ಅವರು ಹೇಳಿದರು.**

### ಗ್ಯಾರಂಟಿ ಬದಲು ಶಿಕ್ಷಣ, ಆರೋಗ್ಯ ಸೌಲಭ್ಯ ಕಲ್ಪಿಸಿ


**ಸರ್ಕಾರಗಳು ಉಚಿತ ಗ್ಯಾರಂಟಿಗಳನ್ನು ನೀಡುವ ಬದಲು ಎಲ್ಲರಿಗೂ ಉಚಿತ ಶಿಕ್ಷಣ ಹಾಗೂ ಆರೋಗ್ಯ ಸೌಲಭ್ಯ ಕಲ್ಪಿಸಬೇಕು. ಸರ್ಕಾರಿ ಶಾಲೆಗಳು, ಕಾಲೇಜುಗಳು ಹಾಗೂ ಆಸ್ಪತ್ರೆಗಳನ್ನು ಬಲಪಡಿಸಬೇಕು. ರೈತರಿಗೆ ಬೆಂಬಲ ಬೆಲೆ ಬದಲು ಸಮರ್ಪಕವಾಗಿ ನೀರು ಹಾಗೂ ವಿದ್ಯುತ್ ಪೂರೈಸಬೇಕು ಎಂದು ಮುಖ್ಯಮಂತ್ರಿ ಚಂದ್ರು ಅವರು ಸಲಹೆ ಮಾಡಿದರು.**

# ಕಾಡ್ಗಿಚ್ಚಿಗೆ ಕಡಿವಾಣ ಹಾಕಿ

ಹನೂರು : ನೆಲ್ಲಿಕತ್ರಿ ಗ್ರಾಮದಲ್ಲಿ ಇತ್ತೀಚಿಗೆ ಕಾಡ್ಗಿಚ್ಚು ಸಂಭವಿಸುತ್ತಿದ್ದು ಅಂತಹ ಘಟನೆಗಳಿಗೆ ಕಡಿವಾಣ ಹಾಕಲು ಗ್ರಾಮಸ್ಥರು ಸಹಕಾರ ನೀಡಬೇಕು ಎಂದು ವಲಯ ಅರಣ್ಯ ಅಧಿಕಾರಿ ಪ್ರಮೋದ್ ತಿಳಿಸಿದರು.

ತಾಲೂಕಿನ ನೆಲ್ಲಿಕತ್ರಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಜಾಗೃತಿ ಸಭೆಯಲ್ಲಿ ಭಾಗವಹಿಸಿ ನಂತರ ಅವರು ಮಾತನಾಡಿದರು. ನೆಲ್ಲಿಕತ್ರಿ ಗ್ರಾಮದ ಆಸುಪಾಸಿನಲ್ಲಿ ಕಳೆದೆರಡು ದಿನಗಳಿಂದ ಬೆಂಕಿಗೆ ಕಾಡು ಆಹುತಿಯಾಗುತ್ತಿದ್ದು ಯಾರೋ ಕಿಡಿಗೇಡಿಗಳು ಮಾಡುತ್ತಿರುವ ಕೆಲಸದಿಂದಾಗಿ ಇಡೀ ಗ್ರಾಮಕ್ಕೆ ಕೆಟ್ಟ ಹೆಸರು ಬರುತ್ತಿದೆ. ಜೊತೆಗೆ ಕಾಡನ್ನು ಬೆಂಕಿಗೆ ಆಹುತಿ ಮಾಡುತ್ತಿರುವಂತಹ ಘಟನೆಗಳು ಕಂಡುಬಂದಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ನೀಡಿ ಕಾಡನ್ನು ಉಳಿಸಲು ಸಹಕಾರ ನೀಡಬೇಕು. ಅರಣ್ಯ ಸಂರಕ್ಷಣೆ ಮಾಡುವುದು ನಮ್ಮಿಬ್ಬರ ಜವಾಬ್ದಾರಿಯಲ್ಲ ಗ್ರಾಮಸ್ಥರ ಜವಾಬ್ದಾರಿ ಕೂಡ ಆಗಿದೆ. ಆ ನಿಟ್ಟಿನಲ್ಲಿ ಅರಣ್ಯ ಉಳಿಸಲು ತಾವೆಲ್ಲರೂ ಕೂಡ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಸೋಲಿನ ಜನಾಂಗದ ಮುಖ್ಯಸ್ಥರಾದ ಡಾ. ಸಿ ಮಾದೇಗೌಡ ಮಾತನಾಡಿ ಅರಣ್ಯ ಸಂರಕ್ಷಣೆಗೆ ಗ್ರಾಮಸ್ಥರೆಲ್ಲರೂ ಕೂಡ ಯಾವುದೇ ಮುಲಾಜಿಲ್ಲದೆ ಸಹಕಾರ ನೀಡಬೇಕು ಗ್ರಾಮಸ್ಥರು ಮತ್ತು ಅರಣ್ಯ ಇಲಾಖೆಯ ಅಧಿಕಾರಿಗಳ ಸಮನ್ವಯದೊಂದಿಗೆ ಪ್ರತಿಯೊಬ್ಬರು ಭಾಗವಹಿಸುವ ಮೂಲಕ ಅರಣ್ಯ ಸಂರಕ್ಷಣೆ ಮಾಡಲು ಮುಂದಾಗ ಬೇಕಾಗಿದೆ. ಆ ನಿಟ್ಟಿನಲ್ಲಿ ಗ್ರಾಮದ ಅಕ್ಕಪಕ್ಕ ಬೆಂಕಿ ಕಾಣಿಸಿಕೊಂಡಲ್ಲಿ ತಕ್ಷಣ ನಂದಿಸಿದ ಮುಂದಾಗಬೇಕು ಜೊತೆಗೆ ಅರಣ್ಯ ಇಲಾಖೆಯ ಸಹಕಾರದೊಂದಿಗೆ ಬೆಂಕಿ ಆರಿಸುವ ಪ್ರಯತ್ನ ಮಾಡಬೇಕು. ಆ ನಿಟ್ಟಿನಲ್ಲಿ ಗ್ರಾಮಸ್ಥರೆಲ್ಲರೂ ಕೂಡ ಒಂದಾಗಿ ಜೀವನ ನಡೆಸಬೇಕು ಎಂದರು. ಇದೆ ಸಂದರ್ಭದಲ್ಲಿ ತಾಲೂಕು ಬುಡಕಟ್ಟು ಸಂಘದ ಕಾರ್ಯದರ್ಶಿ ಯು.ರಂಗೇಗೌಡ,ಜಿಲ್ಲಾ ಕಾರ್ಯದರ್ಶಿ ಮಹಾದೇವಯ್ಯ,ಚಂದ್ರು, ಮಾದೇವ ಇದ್ದರು.




# 5ಕ್ಕೆ ಲಯನ್ಸ್ ಸಮ್ಮೇಳನ



ಮೈಸೂರು: ಲಯನ್ಸ್ ಕ್ಲಬ್ ಆಫ್ ಇಂಟರ್ ನ್ಯಾಷನಲ್ ಜಿಲ್ಲಾ 317 ಜಿ ವತಿಯಿದ 3 ನೇ ಜಿಲ್ಲಾ ಮಹಾ ಸಮ್ಮೇಳನವನ್ನು ಮಂಡ್ಯ ಹೋಟೆಲ್ ಅಮರಾವತಿಯಲ್ಲಿ ಏ. 5 ರಂದುಲು ಆಯೋಜಿಸಲಾಗಿದೆ ಎಂದು ಅತಿಥ್ಯ ಸಮಿತಿ ಅಧ್ಯಕ್ಷ ಲಯನ್ ಜಯಕುಮಾರ್ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಸಮುದಾಯ ಸಬಲೀಕರಣ– ಪರಿವರ್ತನೆಯ ಶಕ್ತಿ ವಿಷಯದೊಡನೆ ಈ ಕಾರ್ಯಕ್ರಮ ನಡೆಯಲಿದೆ. ಈ ವೇಳೆ ಪ್ರೇರಣಾದಾಯಕ ಭಾಷಣ, ನಾಯಕತ್ವ ಅಭಿವೃದ್ಧಿ ಚರ್ಚೆ, ಸೇವಾ ಕಾರ್ಯಗಳ ವಿಶ್ಲೇಷಣೆ ಮತ್ತು ಪ್ರಸ್ತುತಿ, ಸಂವಾದನಾತ್ಮಕ ಕಾರ್ಯಾಗಾರ ಜರುಗಲಿವೆ. ರಾಜ್ಯ ಹೈಕೋರ್ಟ್ ನ್ಯಾಯಮೂರ್ತಿ ಇ.ಎಸ್. ಇಂದಿರೇಶ್ ಮುಖ್ಯ ಅತಿಥಿಯಾಗಿರುವರು, ಲಯನ್ ಎನ್. ಮೋಹನ್‌ಕುಮಾರ್ ಇನ್ನಿತರರು ವೇದಿಕೆಯಲ್ಲಿರುವರು. ಈ ವೇಳೆ ವಿವಿಧ ಸೇವಾ ಕಾರ್ಯ ಹಮ್ಮಿಕೊಳ್ಳಲಾಗಿದೆ. ಇದು ಇತರರಿಗೂ ಮಾದರಿಯಾಗಿ, ಅವರೂ ಸಹಾ ಸಮಾಜಕ್ಕೆ ಏನಾದರೂ ಕೊಡುಗೆ ನೀಡಬೇಕೆಂಬುದು ತಮ್ಮ ಆಶಯವಾಗಿದೆ. ಡಾ.ಎನ್. ಕೃಷ್ಣೇಗೌಡ, ಜಿ.ಎ. ರಮೇಶ್ ಮಾರ್ಗದರ್ಶನ ಮಾಡಲಿದ್ದಾರೆ ಎಂದರು. ಎನ್. ಮಹದೇವ್‌ಕುಮಾರ್, ಕೆ.ಡಿ. ಕಾರಿಯಪ್ಪ, ಎಂ.ವಿ. ನಂದೀಶ್ ಇನ್ನಿತರರು ಹಾಜರಿದ್ದರು.

# ಏ.10ಕ್ಕೆ ಉದ್ಯೋಗ ಮೇಳ

ಮೈಸೂರು: ಹೂಟಗಳ್ಳಿಯ ಮೈಕಾಸ್ ಕಾಲೇಜಿನಲ್ಲಿ ಏ.10ರಂದು ಬೆಳಗ್ಗೆ 9ರಿಂದ ರಾಜ್ಯ ಮಟ್ಟದ ಬೃಹತ್ ಉದ್ಯೋಗ ಮೇಳ ಆಯೋಜಿಸಲಾಗಿದೆ ಎಂದು ಪ್ರಾಚಾರ್ಯರಾದ ಡಾ.ತೆಕ್ಕಡೆ ರಮ್ಯ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಈ ಬಾರಿ ರಾಜ್ಯದ ವಿವಿಧೆಡೆಯಿಂದ ಸುಮಾರು 43 ಕಂಪನಿಗಳು ಪಾಲ್ಗೊಳ್ಳಲಿದ್ದು, ಸಾಕಷ್ಟು ಮಂದಿಗೆ ಉದ್ಯೋಗಾವಕಾಶ ದೊರಕಲಿದೆ. ಈಗಾಗಲೇ ಸುಮಾರು 500 ಮಂದಿ ನೋಂದಣಿ ಮಾಡಿಕೊಂಡಿದ್ದು, ನೋಂದಣಿ ಮತ್ತು ಭಾಗವಹಿಸುವಿಕೆಯ ದೃಢೀಕರಣಕ್ಕಾಗಿ ಉದಯ್, ದೂ. 98440 99514ನ್ನು ಸಂಪರ್ಕಿಸಬಹುದಾಗಿದೆ ಎಂದರು. ವಿವಿಧ ಶೈಕ್ಷಣಿಕ ಅರ್ಹತೆ, ಅನುಭವ ಹೊಂದಿರುವವರು ಪಾಲ್ಗೊಂಡು ಪ್ರಯೋಜನ ಪಡೆಯಬಹುದಾಗಿದೆ. ಭಾಗವಹಿಸುವವರಿಗೆ ತಿಂಡಿ ಮೊದಲಾದವನ್ನು ನೀಡಲೆಂದು ಮಾತ್ರವೇ ನೂರು ರೂ. ನೋಂದಣಿ ಶುಲ್ಕ ನಿಗದಿ ಪಡಿಸಲಾಗಿದೆ ಎಂದು ಮಾಹಿತಿ ನೀಡಿದರು. ಡಾ.ರಾಮಚರಣ್, ಉದಯ್, ಚಾರು ವಿಕ್ರಮ್ ಇದ್ದರು.




# ಮತ್ತಿಗೋಡು ಶಿಬಿರಕ್ಕೆ ಗಜೇಂದ್ರ ಆನೆ ಸ್ಥಳಾಂತರ



ಚಾಮರಾಜನಗರ, ಜಿಲ್ಲೆಯ ಬೂದಿಪಡಗ ಆನೆ ಶಿಬಿರದಲ್ಲಿ ಒಂಟಿಯಾಗಿದ್ದ 63 ವರ್ಷದ ಗಜೇಂದ್ರ ಆನೆಯನ್ನು ಅರಣ್ಯ ಸಚಿವ ಈಶ್ವರ್ ಖಂಡ್ರೆ ಅವರ ಆದೇಶದಂತೆ ನಾಗರಹೊಳೆ ವ್ಯಾಪ್ತಿಯ ಮತ್ತಿಗೋಡು ಶಿಬಿರಕ್ಕೆ ಸ್ಥಳಾಂತರಿಸಲಾಯಿತು.

ಹಲವು ಬಾರಿ ದಸರಾ ಮಹೋತ್ಸವದಲ್ಲಿ ಭಾಗಿಯಾಗಿ ಪ್ರಸ್ತುತ ಬೂದಿಪಡಗ ಆನೆ ಶಿಬಿರದಲ್ಲಿ ಏಕಾಂಗಿತನವನ್ನು ಅನುಭವಿಸುತ್ತಿದ್ದ ಗಜೇಂದ್ರ ಆನೆಯನ್ನು ಸ್ಥಳಾಂತರಿಸುವಂತೆ ಸಾರ್ವಜನಿಕರು ಸಚಿವರಿಗೆ ಮನವಿ ಮಾಡಿದ್ದರು. ಈ ಹಿನ್ನೆಲೆ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಸೇವ್ ಗಜೇಂದ್ರ ಎಂಬ ಅಭಿಯಾನ ನಡೆಯುತ್ತಿದ್ದುದನ್ನು ಗಮನಿಸಿ ಈಶ್ವರ್? ಖಂಡ್ರೆ ಅವರು ಕೂಡಲೇ ಆನೆಯನ್ನು ಮತ್ತೊಂದು ಶಿಬಿರಕ್ಕೆ ಸ್ಥಳಾಂತರಿಸಲು ಆದೇಶ ನೀಡಿದ್ದರು. ಅದರಂತೆ ಬೂದಿಪಡಗದಲ್ಲಿದ್ದ ಗಜೇಂದ್ರ ಆನೆಗೆ ಪೂಜೆ ಸಲ್ಲಿಸಿ ಅಲ್ಲಿಂದ ಮತ್ತಿಗೋಡು ಶಿಬಿರಕ್ಕೆ ಸ್ಥಳಾಂತರ ಮಾಡುವ ಪ್ರಕ್ರಿಯೆ ನಡೆಯಿತು.

ವಿಶ್ವ ವಿಖ್ಯಾತ ದಸರಾ ಮಹೋತ್ಸವದಲ್ಲಿ ಹಲವು ಬಾರಿ ಭಾಗಿಯಾಗಿದ್ದ ಗಜೇಂದ್ರ, ಚಾಮರಾಜನಗರದ ಬೂದಿಪಡಗ ಶಿಬಿರದಲ್ಲಿ ಇತ್ತೀಚೆಗೆ ಒಂಟಿಯಾಗಿತ್ತು. ಕಾಡಿಗೆ ಮೇಯಲು ಬಿಟ್ಟರೆ, ಕಾಡಾನೆಗಳೊಂದಿಗೆ ಕಾದಾಡುವ ಸಾಮರ್ಥ್ಯವನ್ನೂ ಕಳೆದುಕೊಂಡಿದ್ದಾನೆ. ಹೀಗಾಗಿ ಸುರಕ್ಷಿತ ಆನೆ ಶಿಬಿರಕ್ಕೆ ಗಜೇಂದ್ರನನ್ನು ಸ್ಥಳಾಂತರಿಸಬೇಕು ಎಂದು ಜಾಲತಾಣದಲ್ಲಿ ಅಭಿಯಾನವೂ ನಡೆಯುತ್ತಿತ್ತು. ಹಲವರು ಈಶ್ವರ್ ಖಂಡ್ರೆ ಅವರಿಗೆ ಮನವಿಯನ್ನೂ ಮಾಡಿದ್ದರು.

ಜನರ ಭಾವನೆಗಳಿಗೆ ಮತ್ತು ಮನವಿಗೆ ಸ್ಪಂದಿಸಿದ ಅರಣ್ಯ ಸಚಿವರು, ಕೂಡಲೇ ನಿಯಮಾನುಸಾರ ಕ್ರಮ ವಹಿಸುವಂತೆ ಕಳೆದ ಮಾ. 26ರಂದು ಲಿಖಿತ ಆದೇಶ ನೀಡಿದ್ದರು. ಮಂಗಳವಾರ ಮಧ್ಯಾಹ್ನ ಬೂದಿಪಡಗದಲ್ಲಿ ಗಜೇಂದ್ರನಿಗೆ ಪೂಜೆ ಸಲ್ಲಿಸಿ, ಇಲಾಖೆಯ ಆನೆ ರಕ್ಷಣೆ ವಾಹನದಲ್ಲಿ ಮತ್ತಿಗೋಡು ಶಿಬಿರಕ್ಕೆ ಸ್ಥಳಾಂತರಿಸಲಾಯಿತು. ಗಜೇಂದ್ರ ಆನೆಯ ಅಭಿಮಾನಿಗಳು, ಸಾರ್ವಜನಿಕರ ಭಾವನೆಗೆ ಸ್ಪಂದಿಸಿದ ಈಶ್ವರ್? ಖಂಡ್ರೆ ಅವರಿಗೆ ಸಾಮಾಜಿಕ ತಾಣಗಳಲ್ಲಿ ಕೃತಜ್ಞತೆ ಮತ್ತು ಅಭಿನಂದನೆ ಸಲ್ಲಿಸಿದ್ದಾರೆ.

# "ಹವಾಲ್ದಾರ್ ನಾಗಪ್ಪ" ಸೈನ್ಯದಿಂದ ನಿವೃತ್ತಿ



ಗುಂಡ್ಲುಪೇಟೆ :–ತಾಲೂಕಿನ ಕಾಡಂಚಿನ ಸುಂದರ ಗ್ರಾಮ ಗೋಪಾಲಪುರದಲ್ಲಿ ಹುಟ್ಟಿ ಸರ್ಕಾರಿ ಶಾಲೆಯಲ್ಲಿ ಶಿಕ್ಷಣ ಪಡೆದು, ಪಟ್ಟಣದಲ್ಲಿ ಪದವಿ ಪಡೆದು, 2001 ರಲ್ಲಿ ಭಾರತೀಯ ಸೇನೆಗೆ ಸೇರಿ ಸುದೀರ್ಘ 25. ವರ್ಷ 5 ತಿಂಗಳ ಕಾಲಾವಧಿಯಲ್ಲಿ ; ಕಾಶ್ಮೀರದಿಂದ ಸೇವೆ ಪ್ರಾರಂಭಿಸಿ,ಮಣಿಪುರ, ಅಸ್ಸಾಂ, ಬೆಂಗಳೂರು, ಛತ್ತೀಸ್ಗಢ, ಮಹಾರಾಷ್ಟ್ರ ದಲ್ಲಿ ದೇಶದ ಸಂಕಲ್ಪವಾದ " ನಕ್ಸಲ್ ಮುಕ್ತ ಭಾರತ " ಆಪರೇಷನ್ ಯಶಸ್ವಿಗೊಳಿಸಿದ ತಂಡದ " ಹವಾಲ್ದಾರ್ ನಾಗಪ್ಪ" ಸೈನ್ಯದಿಂದ ನಿವೃತ್ತಿಗೊಂಡು ಮನೆಗೆ ಮರಳಿದರು.

ಪ್ರಾರಂಭದಲ್ಲಿ ಸೈನ್ಯದ ಮೇಲೆ ಕಲ್ಲು ತೂರುತ್ತಿದ್ದ ಕಾಶ್ಮೀರ ಕಣಿವೆಯಲ್ಲಿನ ಜನರನ್ನು ಬರೀ ಲಾಠಿಯನ್ನು ಹಿಡಿದು ಎದುರಿಸಿ ವೃತ್ತಿ ಮಾಡುವಾಗ ಅಸಾಧಾರಣ ಗುಂಡಿಗೆ ಬೇಕಿತ್ತು. ವಿಧಿ 370 ನ್ನು ತೆರವುಗೊಳಿಸಿದ ನಂತರ ಇಂದು ಪರಿಸ್ಥಿತಿ ಅಲ್ಲಿ ಸೈನ್ಯದ ಪರವಾಗಿದೆ. ನಕ್ಸಲ್ ಮುಕ್ತ ಭಾರತ ಸಂಕಲ್ಪಕ್ಕೆ ಯಶಸ್ಸು ದೊರಕಿದೆ. ಪ್ರತಿಕೂಲ ಪರಿಸ್ಥಿತಿ ಅನುಕೂಲ ಆಗಲು ಇಂತಹ ಯೋಧರ ಪರಿಶ್ರಮ ಕಾರಣವಾಗಿದೆ. ಇವರ ಜೀವನ ತಾಲೂಕಿನ ಯುವಜನತೆಗೆ ಸ್ಪೂರ್ತಿ ನೀಡುತ್ತದೆ ಎಂದು ವೀರ ಯೋಧ " ಹವಾಲ್ದಾರ್ ನಾಗಪ್ಪ" ರವರನ್ನು ಅವರ ಮನೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಗೌರವ ಸಮರ್ಪಿಸಿದ ಜಿಲ್ಲಾಧ್ಯಕ್ಷ ಶೈಲಕುಮಾರ್ ಎಂ.ಅಭಿಪ್ರಾಯ ಪಟ್ಟರು. ಡಾ,ರಾಜೇಶ್ ನಾಯಕ್, ಮಹದೇವಸ್ವಾಮಿ,ದೇವರಹಳ್ಳಿ ಮಾದಪ್ಪ ಇದ್ದರು.

**ಕಾನೂನು ಪಾಲನೆಯ ಸಂಕೇತ : ಎಸ್ಪಿ ಮುತ್ತುರಾಜು**

# ಪೊಲೀಸ್ ಧ್ವಜವು ಪೊಲೀಸರ ಬದ್ಧತೆ

ಚಾಮರಾಜನಗರ, ಪೊಲೀಸ್ ಧ್ವಜವು ಪೊಲೀಸರ ಬದ್ಧತೆ ಮತ್ತು ಕಾನೂನು ಪಾಲನೆಯ ಸಂಕೇತವಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ. ಮುತ್ತುರಾಜು ಹೇಳಿದರು.

ನಗರದ ಜಿಲ್ಲಾ ಸಶಸ್ತ್ರ ಮೀಸಲು ಪಡೆ ಪೊಲೀಸ್ ಕವಾಯತು ಮೈದಾನದಲ್ಲಿ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ನಡೆದ ಪೊಲೀಸ್ ಧ್ವಜ ದಿನಾಚರಣೆ ಸಮಾರಂಭದಲ್ಲಿ ಪೊಲೀಸ್ ಧ್ವಜ ಬಿಡುಗಡೆ ಮಾಡಿ ಮಾತನಾಡಿದರು. ಈ ದಿನ ರಾಜ್ಯಾದ್ಯಂತ ಪೊಲೀಸ ಧ್ವಜ ದಿನಾಚರಣೆ ಆಚರಿಸಲಾಗುತ್ತಿದೆ. ಅದೇ ರೀತಿಯಲ್ಲಿ ಜಿಲ್ಲೆಯಲ್ಲೂ ಪೊಲೀಸ್ ಧ್ವಜ ದಿನಾಚರಣೆ ನಡೆಯಿತು. ಈ ಕಾರ್ಯಕ್ರಮದ ಪ್ರಮುಖ ಆಕರ್ಷಣೆ ನಿವೃತ್ತ ಪೊಲೀಸ ಅಧಿಕಾರಿಗಳು, ಸಿಬ್ಬಂದಿಗಳ ಕಲ್ಯಾಣ ಕಾರ್ಯಕ್ರಮದ ಒಂದು ಹಿನ್ನಲೆಯಾಗಿದೆ. ಪೊಲೀಸ ಧ್ವಜ ದಿನಾಚರಣೆ ಉದ್ದೇಶ ಇಲಾಖೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತ ಹೊಂದಿದ ಅಧಿಕಾರಿಗಳು, ಸಿಬ್ಬಂದಿಗಳ ಸೇವೆಯನ್ನು ಸ್ಮರಿಸುವ ಕಾರ್ಯಕ್ರಮ ಇದಾಗಿದೆ. ಈ ದಿನಾಚರಣೆಯನ್ನು 1965ರಿಂದಲ್ಲೂ ಆಚರಣೆ ಮಾಡಿಕೊಂಡು ಬರಲಾಗಿದೆ ಎಂದರು. ನಿವೃತ್ತ ಪೊಲೀಸ ಅಧಿಕಾರಿಗಳು, ಸಿಬ್ಬಂದಿಗಳ ನಿವೃತ್ತ ಜೀವನ ಸುಖಕರವಾಗಿರಲಿ ಎಂದು ಶುಭ ಕೋರಿದರು. ಪೋಲಿಸ ಧ್ವಜ ಮಾರಾಟ ಮಾಡಿ ಸಂಗ್ರಹಿಸಿದ ಹಣವನ್ನು ನಿವೃತ್ತ ಪೊಲೀಸ ಅಧಿಕಾರಿಗಳು ಸಿಬ್ಬಂದಿಗಳ ವ್ಯದ್ಯಕೀಯ ವೆಚ್ಚಗಳಿಗೆ ಉಪಯೋಗಿಸಲಾಗುತ್ತ ಎಂದರು. ನಿವೃತ್ತ ಆರಕ್ಷಕ ಉಪನಿರೀಕ್ಷಕ ಎಚ್.ಬಿ ಮಾದೇಗೌಡರು ಮುಖ್ಯ ಅತಿಥಿಯಾಗಿ ಭಾಗವಹಿಸಿ ದ್ದರು. ನಿವೃತ್ತ ಪೊಲೀಸರನ್ನು ಸನ್ಮಾನಿಸಲಾಯಿತು ಪೊಲೀಸ್ ತುಕಡಿಗಳಿಂದ ಆಕರ್ಷಕ ಪಥಸಂಚಲನ ನಡೆಯಿತು. ಕಾರ್ಯಕ್ರಮದಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಎನ್.ಶಶಿಧರ್, ಡಿವೈಎಸ್ ಪಿಗಳಾದ ಸ್ನೇಹರಾಜು, ಧರ್ಮೇಂದ್ರ, ಪವನ್ ಕುಮಾರ್, ಡಿಆರ್ ಸೋಮಣ್ಣ, ಹಾಗೂ ಪೊಲೀಸ್ ಅಧಿಕಾರಿಗಳು ಭಾಗವಹಿಸಿದ್ದರು.



# ಜಿಲ್ಲಾಧಿಕಾರಿ ಡಾ.ಕುಮಾರ ಎಚ್ಚರಿಕೆ

# ಅಕ್ರಮ ಇಂಧನ ದಾಸ್ತಾನು ಕಾನೂನುಬಾಹಿರ



**ಮಂಡ್ಯ:** ಜಿಲ್ಲೆಯಲ್ಲಿ ಇಂಧನ ಪೂರೈಕೆಯಲ್ಲಿ ಯಾವುದೇ ಕೊರತೆಯಿಲ್ಲ. ಸಾಕಷ್ಟು ದಾಸ್ತಾನು ಲಭ್ಯವಿದ್ದು, ಅನಧಿಕೃತವಾಗಿ ಕಾಳಸಂತೆಯಲ್ಲಿ ಮಾರಾಟ ಮಾಡುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಇಂಧನ ವಿತರಕರೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿ, ಪೆಟ್ರೋಲಿಯಂ ಉತ್ಪನ್ನಗಳಾದ ಪೆಟ್ರೋಲ್, ಡೀಸೆಲ್ ಹಾಗೂ ಎಲ್‌ಪಿಜಿ ಸಿಲಿಂಡರ್‌ಗಳನ್ನು ಅಕ್ರಮವಾಗಿ ದಾಸ್ತಾನು ಮಾಡುವುದು ಕಾನೂನುಬಾಹಿರ ಹಾಗೂ ಅಪಾಯಕಾರಿ ಎಂದು ಹೇಳಿದರು. ಅಸುರಕ್ಷಿತ ಸಂಗ್ರಹಣೆ ಭೀಕರ ಅಗ್ನಿ ಅವಘಡಗಳಿಗೆ ಕಾರಣವಾಗಬಹುದು ಎಂದು ಎಚ್ಚರಿಸಿದರು.

ಜಿಲ್ಲೆಯಲ್ಲಿ ಒಟ್ಟು 182 ಪೆಟ್ರೋಲ್ ಬಂಕ್‌ಗಳಿದ್ದು, ಪ್ರತಿದಿನ ಸುಮಾರು 2.31 ಲಕ್ಷ ಲೀಟರ್ ಇಂಧನ ಬಳಕೆಯಾಗುತ್ತಿದೆ. ಜಿಲ್ಲೆಯಲ್ಲಿ 11.81 ಲಕ್ಷ ಲೀಟರ್ ಪೆಟ್ರೋಲ್ ಹಾಗೂ 18 ಲಕ್ಷ ಲೀಟರ್ ಡೀಸೆಲ್ ಸಂಗ್ರಹಣೆ ಲಭ್ಯವಿದೆ ಎಂದು ಮಾಹಿತಿ ನೀಡಿದರು.

ಸಾರ್ವಜನಿಕರು ಆತಂಕಕ್ಕೆ ಒಳಗಾಗಿ ಅನಗತ್ಯವಾಗಿ ಕ್ಯಾನ್ ಮತ್ತು ಬಾಟಲ್‌ಗಳಲ್ಲಿ ಇಂಧನವನ್ನು ಸಂಗ್ರಹಿಸಬಾರದು. ಇಂತಹ ಕ್ರಮಗಳು ಕಾನೂನುಬಾಹಿರವಾಗಿದ್ದು, ಅಪಾಯಕಾರಿಯೂ ಆಗಿವೆ ಎಂದು ತಿಳಿಸಿದರು. ಪೆಟ್ರೋಲ್ ಮತ್ತು ಡೀಸೆಲ್ ಕೊರತೆ ಉಂಟಾಗಲಿದೆ ಎಂಬ ವದಂತಿಗಳ ಹಿನ್ನೆಲೆಯಲ್ಲಿ ಹಲವು ಪೆಟ್ರೋಲ್ ಬಂಕ್‌ಗಳಲ್ಲಿ ವಾಹನ ಸವಾರರು ದೀರ್ಘ ಸಾಲಿನಲ್ಲಿ ನಿಂತು ಇಂಧನ ತುಂಬಿಸಿಕೊಳ್ಳುತ್ತಿರುವುದು ಕಂಡುಬಂದಿದೆ. ಈ ಹಿನ್ನೆಲೆ ಅನಗತ್ಯ ಸಂಗ್ರಹಣೆ ತಪ್ಪಿಸಲು ಕ್ಯಾನ್‌ಗಳಿಗೆ ಇಂಧನ ತುಂಬಿಸುವುದನ್ನು ನಿರ್ಬಂಧಿಸಬೇಕು ಎಂದು ಸೂಚಿಸಿದರು.

ಪೆಟ್ರೋಲ್ ಬಂಕ್ ಮಾಲೀಕರು ಕಾನೂನು ನಿಯಮಗಳು ಹಾಗೂ ಸುತ್ತೋಲೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಅವರು ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ವಿ.ಜೆ.ಶೋಭಾರಾಣಿ, ಆಹಾರ ಇಲಾಖೆ ಉಪನಿರ್ದೇಶಕ ಪ್ರತೀಕ್ ಹೆಗ್ಡೆ ಸೇರಿದಂತೆ ಇಂಧನ ವಿತರಕರು ಉಪಸ್ಥಿತರಿದ್ದರು.

# ಶ್ರೀ ದೇವರ ದಾಸಿಮಯ್ಯ ಜಯಂತೋತ್ಸವ ಕಾರ್ಯಕ್ರಮ

# ದಾರ್ಶನಿಕರ ಹಾಗೂ ಮಹನೀಯರ ಆದರ್ಶ ಪಾಲಿಸಿ



**ಕೆ.ಆರ್.ನಗರ:** ದಾರ್ಶನಿಕರ ಹಾಗೂ ಮಹನೀಯರುಗಳ ಆದರ್ಶ ಗುಣಗಳನ್ನು ಸರ್ವರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹಂಪಿ ಹೇಮಕೂಟ ಗಾಯಿತ್ರಿ ಪೀಠದ ಶ್ರೀಶ್ರೀ ದಯಾನಂದಪುರಿ ಸ್ವಾಮೀಜಿ ಅವರು ಹೇಳಿದರು.

ಅವರು ತಾಲೂಕಿನ ಹರದನಹಳ್ಳಿಯಲ್ಲಿ ಶ್ರೀ ಚೌಡೇಶ್ವರಿ ದೇವಾಂಗ ಸಂಘದ ವತಿಯಿಂದ ಆಯೋಜಿಸಿದ್ದ ಶ್ರೀ ದೇವರ ದಾಸಿಮಯ್ಯ ಜಯಂತೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಜಯಂತೋತ್ಸವ ಕಾರ್ಯಕ್ರಮಗಳನ್ನು ಮಾಡುವಂತಹ ಸಂದರ್ಭದಲ್ಲಿ ಸರ್ವರು ಒಟ್ಟಾಗಿ ಸೇರಿ ಆಚರಣೆ ಮಾಡುವ ಮೂಲಕ ಮಹನೀಯರುಗಳಿಗೆ ಗೌರವವನ್ನು ಸಲ್ಲಿಸಬೇಕು. ಈ ನಿಟ್ಟಿನಲ್ಲಿ ಹರದನಹಳ್ಳಿಯ ಶ್ರೀ ಚೌಡೇಶ್ವರಿ ದೇವಾಂಗ ಸಂಘದವರು ಮಾಡಿಕೊಂಡು ಬರುತ್ತಿರುವ ದೇವತಾ ಕಾರ್ಯ ಹಾಗೂ ಸಾರ್ವಜನಿಕ ಕಾರ್ಯಕ್ರಮಗಳು ಇತರರಿಗೆ ಮಾದರಿಯಾಗಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಪ್ರತಿಯೊಬ್ಬರೂ ಪ್ರೀತಿ ವಿಶ್ವಾಸದೊಂದಿಗೆ ಸರ್ವರೊಂದಿಗೂ ಬೆರೆತು ಸಹ ಬಾಳ್ವೆಯ ಜೀವನವನ್ನು ನಡೆಸಬೇಕು ಎಂದರು.

ದೇವಾಂಗ ಸಮುದಾಯದವರು ತಮ್ಮ ಮಕ್ಕಳಿಗೆ ಕಡ್ಡಾಯವಾಗಿ ಶಿಕ್ಷಣವನ್ನು ಕೊಡಿಸಬೇಕು ಜೊತೆಗೆ ಉತ್ತಮ ಸಂಸ್ಕಾರವನ್ನು ಕಲಿಸಿ ಈ ನಾಡಿಗೆ ಸತ್ಪ್ರಜೆಗಳನ್ನ ನೀಡಬೇಕು. ಸಮುದಾಯದ ವಿದ್ಯಾರ್ಥಿಗಳು ತಮ್ಮ ವ್ಯಾಸಂಗದ ಅವಧಿಯಲ್ಲಿ ಶ್ರದ್ಧೆಯಿಂದ ಕಲಿತು ಉನ್ನತ ಸ್ಥಾನಮಾನಗಳನ್ನು ಅಲಂಕರಿಸುವ ಮೂಲಕ ಸಮುದಾಯಕ್ಕೆ, ಹೆತ್ತವರಿಗೆ, ಹುಟ್ಟಿದ ಊರಿಗೆ ಹಾಗೂ ನಾಡಿಗೆ ಕೀರ್ತಿಯನ್ನು ತರಬೇಕು ಎಂದು ಕಿವಿಮಾತು ಹೇಳಿದರು.

ಶ್ರೀ ದೇವರ ದಾಸಿಮಯ್ಯ ಅವರ ಭಾವಚಿತ್ರ ಹಾಗೂ ಹಂಪಿ ಹೇಮಕೂಟ ಗಾಯಿತ್ರಿ ಪೀಠದ ಜಗದ್ಗುರು ಶ್ರೀಶ್ರೀ ದಯಾನಂದಪುರಿ ಸ್ವಾಮೀಜಿ ಅವರನ್ನು ಬೆಳ್ಳಿ ಪಲ್ಲಕ್ಕಿಯಲ್ಲಿ ಕೇರಳದ ಮಂಗಳವಾದ್ಯ, ವೀರಗಾಸೆ ಸೇರಿದಂತೆ ವಿವಿಧ ಕಲಾತಂಡಗಳು ಹಾಗೂ ಪೂರ್ಣ ಕುಂಭ ಕಳಸಗಳೊಂದಿಗೆ ಗ್ರಾಮದ ಪ್ರಮುಖ ರಸ್ತೆಗಳ ಮೂಲಕ ಮೆರವಣಿಗೆಯನ್ನು ಮಾಡಿ ಗೌರವ ನಮನ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಸ್ವಾಮೀಜಿಯವರನ್ನು ಹಾಗೂ ಇತರ ಗಣ್ಯರುಗಳನ್ನು ಸಂಘದ ವತಿಯಿಂದ ಸನ್ಮಾನಿಸಿ ಪ್ರಸಾದ ವಿನಿಯೋಗವನ್ನು ಮಾಡಲಾಯಿತು.

ಸಮಾರಂಭದಲ್ಲಿ ಶ್ರೀ ಚೌಡೇಶ್ವರಿ ದೇವಾಂಗ ಸಂಘದ ಯಜಮಾನರುಗಳು, ಆಡಳಿತ ಮಂಡಳಿಯವರು, ಜನಪ್ರತಿನಿಧಿಗಳು, ಯುವಕರು, ಮಹಿಳೆಯರು, ಮಕ್ಕಳು ಸೇರಿದಂತೆ ಗ್ರಾಮಸ್ಥರು ಪಾಲ್ಗೊಂಡಿದ್ದರು.

# ಸಮಾಜದಲ್ಲಿ ಶಾಂತಿ ಕಾಪಾಡುವುದು ಪೊಲೀಸ್ ಇಲಾಖೆ ಕರ್ತವ್ಯ: ದಾಸಪ್ಪ

**ಮಂಡ್ಯ:** ಸಮಾಜದಲ್ಲಿ ಶಾಂತಿ, ಸುವ್ಯವಸ್ಥೆ ಮತ್ತು ಭದ್ರತೆಯನ್ನು ಕಾಪಾಡುವುದು ಪೊಲೀಸ್ ಇಲಾಖೆಯ ಪ್ರಮುಖ ಕರ್ತವ್ಯವಾಗಿದೆ ಎಂದು ನಿವೃತ್ತ ಆರಕ್ಷಕ ಉಪನಿರೀಕ್ಷಕರಾದ ದಾಸಪ್ಪ ಹೇಳಿದರು.

ಗುರುವಾರ ಮಂಡ್ಯ ಡಿ.ಎ.ಆರ್. ಜಿಲ್ಲಾ ಪೊಲೀಸ್ ಕಾವಾಯತು ಮೈದಾನದಲ್ಲಿ ನಡೆದ ಪೊಲೀಸ್ ಧ್ವಜ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಕುವೆಂಪು ಅವರು ನಾಡಗೀತೆಯಲ್ಲಿ ಉಲ್ಲೇಖಿಸಿದ ಸರ್ವ ಜನಾಂಗದ ತೋಟ ಎಂಬ ಆದರ್ಶದಂತೆ ಎಲ್ಲಾ ಸಮುದಾಯಗಳನ್ನು ಒಗ್ಗೂಡಿಸುವುದು ಪೊಲೀಸ್ ಇಲಾಖೆಯ ಹೊಣೆಗಾರಿಕೆ ಎಂದು ತಿಳಿಸಿದರು.

ಮಂಡ್ಯ ಜಿಲ್ಲೆ ರಾಜಕೀಯ, ಆರ್ಥಿಕ ಹಾಗೂ ಸಾಮಾಜಿಕವಾಗಿ ಅಭಿವೃದ್ಧಿ ಹೊಂದಿದ್ದು ಪ್ರಮುಖ ಪ್ರವಾಸಿ ತಾಣವಾಗಿದೆ. ಸೈಬರ್ ಅಪರಾಧ, ನೈಸರ್ಗಿಕ ವಿಪತ್ತು ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಕರ್ನಾಟಕ ಪೊಲೀಸ್ ಇಲಾಖೆ ಮಾದರಿಯಾಗಿದೆ ಎಂದು ಅವರು ಹೇಳಿದರು.

ಜಿಲ್ಲೆಯನ್ನು ಸ್ವಚ್ಛ ನಗರಿಯಾಗಿ ರೂಪಿಸುವಲ್ಲಿ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಪೊಲೀಸ್ ಅಧಿಕಾರಿಗಳು ತಮ್ಮ ಕರ್ತವ್ಯವನ್ನು ನಿಷ್ಠೆಯಿಂದ ನಿರ್ವಹಿಸಬೇಕು ಎಂದು ತಿಳಿಸಿದರು.




**ಪೊಲೀಸ್ ಧ್ವಜ ದಿನದ ಮಹತ್ವ:** ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಡಾ.ಶೋಭಾ ರಾಣಿ ವಿ.ಜೆ ಅವರು ಮಾತನಾಡಿ, ಏಪ್ರಿಲ್ 2ರಂದು ಕರ್ನಾಟಕ ಪೊಲೀಸ್ ಕಾಯ್ದೆ ಜಾರಿಗೆ ಬಂದ ಹಿನ್ನೆಲೆಯಲ್ಲಿ ಪ್ರತಿವರ್ಷ ಈ ದಿನವನ್ನು ಪೊಲೀಸ್ ಧ್ವಜ ದಿನ ಮತ್ತು ಪೊಲೀಸ್ ಕಲ್ಯಾಣ ದಿನವಾಗಿ ಆಚರಿಸಲಾಗುತ್ತದೆ ಎಂದರು.

ಪೊಲೀಸ್ ಇಲಾಖೆ 24/7 ಸೇವೆ ಸಲ್ಲಿಸುವ ನೌಕರರು ಮತ್ತು ನಿವೃತ್ತ ಅಧಿಕಾರಿಗಳ ಸೇವೆಯನ್ನು ಸ್ಮರಿಸುವುದು ಈ ದಿನದ ಉದ್ದೇಶವಾಗಿದೆ.

ಪೊಲೀಸ್ ಧ್ವಜ ಮಾರಾಟದಿಂದ ಸಂಗ್ರಹವಾಗುವ ನಿಧಿಯನ್ನು ನಿವೃತ್ತ ಪೊಲೀಸ್ ಸಿಬ್ಬಂದಿಗೆ ವೈದ್ಯಕೀಯ ನೆರವು ಮತ್ತು ಅಂತ್ಯಸಂಸ್ಕಾರ ನೆರವಿಗೆ ಬಳಸಲಾಗುತ್ತದೆ. ಸಂಗ್ರಹಿತ ಮೊತ್ತದಲ್ಲಿ 50% ನಿವೃತ್ತ ಪೊಲೀಸ್ ನಿಧಿಗೆ ಹಾಗೂ 50% ಕೇಂದ್ರ ಕಲ್ಯಾಣ ನಿಧಿಗೆ ನೀಡಲಾಗುತ್ತದೆ ಎಂದು ವಿವರಿಸಿದರು.

01-04-2025 ರಿಂದ 31-03-2026ರವರೆಗೆ 27 ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ನಿವೃತ್ತಿಯಾಗಲಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಅಪರ ಪೊಲೀಸ್ ವರಿಷ್ಠಾಧಿಕಾರಿಗಳಾದ ತಿಮ್ಮಯ್ಯ ಹಾಗೂ ಗಂಗಾಧರ್ ಸ್ವಾಮಿ ಉಪಸ್ಥಿತರಿದ್ದರು.

# ಎಂ.ಆರ್.ಲಕ್ಷ್ಮಿಕಾಂತ್‌ಗೆ ಪಿ.ಎಚ್.ಡಿ

**ಕೆ.ಆರ್.ನಗರ:** ಕೃಷ್ಣರಾಜನಗರ ವಿಧಾನಸಭಾ ಕ್ಷೇತ್ರದ ಸಾಲಿಗ್ರಾಮ ತಾಲೂಕಿನ ಮಲುಗನಹಳ್ಳಿ ಗ್ರಾಮದ ನಿವೃತ್ತ ಮುಖ್ಯ ಶಿಕ್ಷಕ ರಂಗೇಗೌಡ ಮತ್ತು ಪೂರ್ಣಿಮಾ ದಂಪತಿಗಳ ಸುಪುತ್ರ ಎಂ.ಆರ್.ಲಕ್ಷ್ಮಿಕಾಂತ್ ಅವರು ಓಡಿಸಾ ಯುನಿವರ್ಸಿಟಿ ಆಫ್ ಅಗ್ರಿಕಲ್ಚರ್ ಅಂಡ್ ಟೆಕ್ನಾಲಜಿ ಎಂಬ ವಿಶ್ವವಿದ್ಯಾಲಯದಲ್ಲಿ ಅನುವಂಶಿಯತೆ ಮತ್ತು ತಳಿ ಅಭಿವೃದ್ಧಿ ವಿಷಯಕ್ಕೆ ಪಿ.ಎಚ್.ಡಿ ಪಡೆದಿದ್ದಾರೆ.

ಭತ್ತದ ಇಳುವರಿಯನ್ನು ಹೆಚ್ಚಿಸುವ ಜೀನ್ಸ್‌ಗಳನ್ನು ಪತ್ತೆಹಚ್ಚುವುದರ ಬಗ್ಗೆ ಒಡಿಶಾದ ಕಟಕನಲ್ಲಿರುವ ರಾಷ್ಟ್ರೀಯ ಭತ್ತ ಸಂಶೋಧನಾ ಕೇಂದ್ರದಲ್ಲಿ ಸಂಶೋಧನೆಯನ್ನು ಮಾಡಿರುತ್ತಾರೆ.

ಭಾರತೀಯ ಕೃಷಿ ಸಂಶೋಧನಾ ಮಂಡಳಿ ನಡೆಸುವ ಜೆ.ಆರ್.ಎಫ್ ಮತ್ತು ಎಸ್.ಆರ್.ಎಫ್ ಪರೀಕ್ಷೆಯಲ್ಲಿ ಉತ್ತಮ ರಾಂಕ್ ಪಡೆದು ಎಂ.ಎಸ್.ಸಿ (ಕೃಷಿ) ಮತ್ತು ಪಿ.ಹೆಚ್.ಡಿ ಎರಡನ್ನು ಫೇಲೋಶಿಪ್ ತೆಗೆದುಕೊಂಡು ಉನ್ನತ ಶಿಕ್ಷಣವನ್ನು ಮಾಡಿರುತ್ತಾರೆ.

ಸಂಶೋಧನೆ ಮೂಲಕ ರೈತರಿಗೆ ಉತ್ತಮ ತಳಿಗಳನ್ನು ಅಭಿವೃದ್ಧಿಪಡಿಸಿ ಹಾಗೂ ಗುಣಮಟ್ಟದ ಬೀಜಗಳನ್ನು ಒದಗಿಸಿ ಅವರು ಮಾಡುವ ಕೃಷಿಯಲ್ಲಿ ಸೇವೆ ಸಲ್ಲಿಸಬೇಕೆಂಬ ಇಚ್ಛೆ ಇದೆ ಎಂದು ತಮ್ಮ ಮನದಿಂಗಿತವನ್ನು ಎಂ.ಆರ್.ಲಕ್ಷ್ಮಿಕಾಂತ್ ವ್ಯಕ್ತಪಡಿಸಿದರು.

ಈ ಸಾಧನೆಯನ್ನು ಮಾಡಿರುವ ಗ್ರಾಮೀಣ ಪ್ರತಿಭೆ ಎಂ.ಆರ್.ಲಕ್ಷ್ಮಿಕಾಂತ್ ಅವರಿಗೆ ಗ್ರಾಮಸ್ಥರು, ಕುಟುಂಬಸ್ಥರು ಹಾಗೂ ಸ್ನೇಹಿತರುಗಳು ಅಭಿನಂದನೆ ಸಲ್ಲಿಸಿದ್ದಾರೆ.



# ಆನೆ ದಾಳಿಯಿಂದ ಬಾಳೆಗಿಡ ನಾಶ ರೈತ ಕಂಗಾಲು



**ಹನೂರು :** ರೈತರು ತಮ್ಮ ಆರ್ಥಿಕತೆಯ ಅಭಿವೃದ್ಧಿಗಾಗಿ ಅವರ ನೆಚ್ಚಿನ ತೋಟಗಳಲ್ಲಿ ಬಾಳೆ ,ಅರಿಸಿಣ ಸೇರಿದಂತೆ ಇನ್ನಿತರ ಅನೇಕ ಬೆಳೆಗಳನ್ನು ಬೆಳೆಯುತ್ತಾರೆ ,ಆದರೆ ಕಾಡಿನಿಂದ ಬಂದು ಪ್ರಾಣಿಗಳು ರೈತರ ಬೆಳೆಗಳನ್ನು ಹಾಳು ಮಾಡಿದರೆ ರೈತನ ಪರಿಸ್ಥಿತಿ ಏನಾಗಬಹುದು ಎಂದು ವಕೀಲರಾದ ಅಶೋಕ್ ಕುಮಾರ್ ತಿಳಿಸಿದರು.

ಹನೂರು ತಾಲೂಕಿನ ಲೋಕನಹಳ್ಳಿ ಹೋಬಳಿಯ ಚಿಕ್ಕಮಾಲಾಪುರ ಗ್ರಾಮದ ಸರ್ವೆ ನಂ 117/1 ರ ನಾರಾಯಣ್ ಮೂರ್ತಿ ಹಾಗೂ 117/2 ರಲ್ಲಿನ ದಿವ್ಯಶ್ರೀ ರವರಿಗೆ ಸೇರಿದ ಜಮೀನಿನಲ್ಲಿತಡ ರಾತ್ರಿ ಸರಿಸುಮಾರು 170ರಿಂದ 200 ಬಾಳೆ ಗಿಡಗಳನ್ನು ಹಾಗೂ ಮೂವತ್ತು ಅಡಿಕೆ ಗಿಡಗಳನ್ನು ತುಳಿದು ತಂತಿ ಬೇಲಿಯನ್ನು ತುಳಿದು ಮುರಿದು ಹಾಕಲಾಗಿದೆ ,ಅರಣ್ಯ ಇಲಾಖೆಯ ಅಧಿಕಾರಿಗಳು ಕೂಡಲೆ ಸ್ಪಂದಿಸಿ ರೈತರಿಗೆ ಪರಿಹಾರವನ್ನು ನೀಡಬೇಕಾಗಿದೆ ಎಂದು ರೈತರು ತಿಳಿಸಿದರು.

ಇದೇ ಸಂದರ್ಭದಲ್ಲಿ ಆನೆ ನುಗ್ಗಿ ತುಳಿದ ಜಮೀನಿಗೆ ರೈತರ ಜೊತೆಯಲ್ಲಿ ಅರಣ್ಯ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ಚಿಕ್ ಸುದ್ದಿ

### ಏ.10 ರಿಂದ ಮಕ್ಕಳ ಬೇಸಿಗೆ ರಂಗ ತರಬೇತಿ ಶಿಬಿರ

**ತುಮಕೂರು:** ಗುಬ್ಬಿ ಪಟ್ಟಣದ ಡಾ: ಗುಬ್ಬಿ ವೀರಣ್ಣ ಟ್ರಸ್ಟ್ ವತಿಯಿಂದ ಏಪ್ರಿಲ್ 10 ರಿಂದ ಮೇ 10ರವರೆಗೆ ತುಮಕೂರು ಜಿಲ್ಲೆಯ ಗುಬ್ಬಿ ಟೌನ್‌ನಲ್ಲಿರುವ ಡಾ: ಗುಬ್ಬಿ ವೀರಣ್ಣ ರಂಗಮಂದಿರದಲ್ಲಿ ಮಕ್ಕಳ ಬೇಸಿಗೆ ರಂಗ ತರಬೇತಿ ಶಿಬಿರವನ್ನು ಆಯೋಜಿಸಲಾಗಿದೆ.

ಈ ಶಿಬಿರಕ್ಕೆ ಆಸಕ್ತ ಮಕ್ಕಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿಯನ್ನು ಡಾ: ಗುಬ್ಬಿ ವೀರಣ್ಣ ರಂಗಮಂದಿರ, ಗುಬ್ಬಿ ಟೌನ್ ಇಲ್ಲಿ ಪಡೆದು ಭರ್ತಿ ಮಾಡಿದ ಅರ್ಜಿಯನ್ನು ಏಪ್ರಿಲ್ 9ರೊಳಗೆ ಸಲ್ಲಿಸಬೇಕು.

ತರಬೇತಿ ಶಿಬಿರವನ್ನು ಪ್ರತಿ ದಿನ ಬೆಳಗ್ಗೆ ಹಾಗೂ ಮಧ್ಯಾಹ್ನದ ಅವಧಿಯಲ್ಲಿ ಆಯೋಜಿಸಲಾಗುವುದು. ಶಿಬಿರದಲ್ಲಿ 8 ರಿಂದ 14 ವರ್ಷ ವಯೋಮಾನದ ಮಕ್ಕಳು ಭಾಗವಹಿಸಬಹುದಾಗಿದೆ. ಮಕ್ಕಳ ಜನನ ಪ್ರಮಾಣ ಪತ್ರ ಲಗತ್ತಿಸಬೇಕು. ಶಿಬಿರದಲ್ಲಿ ಭಾಗವಹಿಸಲು 1,500 ರೂ.ಗಳ ಶುಲ್ಕವನ್ನು ನಿಗದಿಪಡಿಸಲಾಗಿದ್ದು, ಭಾಗವಹಿಸುವ ಮಕ್ಕಳು ಬೆಳಗಿನ / ಮಧ್ಯಾಹ್ನದ ತಿಂಡಿ / ಉಪಹಾರವನ್ನು ಮತ್ತು ಕುಡಿಯುವ ನೀರನ್ನು ಸ್ವಯಂ ವ್ಯವಸ್ಥೆ ಮಾಡಿಕೊಳ್ಳಬೇಕು. ಆಯ್ಕೆಯಾದ ಮಕ್ಕಳು ಟ್ರಸ್ಟ್ ಕಾಲ ಕಾಲಕ್ಕೆ ರೂಪಿಸುವ / ತಿಳಿಸುವ ನಿಯಮಗಳಿಗೆ ಬದ್ಧರಾಗಿರಬೇಕು.

ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ: 08131-223336 / 9343535345 / 9448661266ನ್ನು ಸಂಪರ್ಕಿಸಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ಸಿಳಿಸಿದ್ದಾರೆ.

### ಏ.12ರಂದು 6ನೇ ತರಗತಿ ಪ್ರವೇಶ ಪರೀಕ್ಷೆ

**ತುಮಕೂರು:** ತುಮಕೂರು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ / ಡಾ॥ ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆಗಳಿಗೆ 2026-27ನೇ ಶೈಕ್ಷಣಿಕ ಸಾಲಿಗೆ 6ನೇ ತರಗತಿ ಪ್ರವೇಶಕ್ಕೆ 5ನೇ ತರಗತಿಯಲ್ಲಿ ಉತ್ತೀರ್ಣರಾದ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅಲ್ಪಸಂಖ್ಯಾತರ ನಿರ್ದೇಶನಾಲಯದ ಸೂಚನೆಯಂತೆ 6ನೇ ತರಗತಿ ಪ್ರವೇಶಕ್ಕೆ ರಾಜ್ಯ ಮಟ್ಟದ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ಏಪ್ರಿಲ್ 12ರಂದು ಭಾನುವಾರ ನಡೆಸಲು ಉದ್ದೇಶಿಸಲಾಗಿದ್ದು, ಸಾಮಾನ್ಯ ಪ್ರವೇಶ ಪರೀಕ್ಷೆಯ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಮೌಲಾನಾ ಆಜಾದ್ ಭವನ, ಇಂದಿರಾ ಕಾಲೇಜು ಮುಂಭಾಗ, ಉಪ್ಪಾರಹಳ್ಳಿ, ತುಮಕೂರು ಅಥವಾ ದೂರವಾಣಿ ಸಂಖ್ಯೆ: 0816-2273724ನ್ನು ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗೆಲುವಿಗೆ ಚಲಾಯಿತ ಮತಗಳಲ್ಲಿ ಶೇ.50 ರಷ್ಟು ನಿಗದಿಪಡಿಸಲಿ: ಮುಖ್ಯಮಂತ್ರಿ ಚಂದ್ರು



**ಮೈಸೂರು:** ಮತದಾರರಿಗೆ ಚುನಾಯಿತ ಪ್ರತಿನಿಧಿಗಳನ್ನು ವಾಪಸ್ ಕರೆಸಿಕೊಳ್ಳುವ ಅಧಿಕಾರ ಇರಬೇಕಿತ್ತು. ಅಂತೆಯೇ ಗೆಲುವಿಗೆ ಚಲಾಯಿತ ಮತಗಳಲ್ಲಿ ಶೇ.50ರಷ್ಟು ನಿಗದಿಪಡಿಸಲಿ ಎಂದು ಖ್ಯಾತ ಚಲನಚಿತ್ರ ನಟ ಡಾ.ಮುಖ್ಯಮಂತ್ರಿ ಚಂದ್ರು ಅಭಿಪ್ರಾಯಪಟ್ಟರು.

ನಗರದ ವಾಲ್ಮೀಕಿ ರಸ್ತೆಯ ಮಹಾರಾಣಿ ಮಹಿಳಾ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜಿನಲ್ಲಿ ದಾರಿ ಫೌಂಡೇಷನ್ ಗುರುವಾರ ಏರ್ಪಡಿಸಿದ್ದ 'ಭವಿಷ್ಯದಲ್ಲಿ ಪ್ರಜಾಪ್ರಭುತ್ವದ ರಕ್ಷಣೆಯ ಜವಾಬ್ದಾರಿ ಯುವಶಕ್ತಿಯ ಕೈಯಲ್ಲಿ' ಕುರಿತ ಮುಕ್ತ ಸಂವಾದವನ್ನು ಉದ್ಘಾಟಿಸಿ ಮಾತನಾಡಿದ ಅವರು, ಅದೇ ರೀತಿ ಗೆಲುವಿಗೆ ಚಲಾಯಿತ ಮತಗಳ ಪೈಕಿ ಶೇ.50 ರಷ್ಟನ್ನು ನಿಗದಿಪಡಿಸಬೇಕು ಎಂದು ಆಗ್ರಹಿಸಿದರು.

ಈಗ ಆಯ್ಕೆಯಾದ ನಂತರ ಐದು ವರ್ಷ ಚುನಾಯಿತಪ್ರತಿನಿಧಿಗಳು ಏನು ಮಾಡಿದರೂ ಕೇಳುವಂತಿಲ್ಲ ಎಂಬಂತಿದೆ. ಇದು ಹೋಗಬೇಕು. ಅವರು ಮತದಾರರಿಗೆ ಉತ್ತರದಾಯಿಗಳಾಗಿರಬೇಕು. ವಾಪಸ್ ಕರೆಸಿಕೊಳ್ಳುವ ಅಧಿಕಾರ ಇದ್ದಲ್ಲಿ ಭಯದಿಂದ ಜನರ ಕೆಲಸ ಮಾಡುತ್ತಾರೆ. ಚುನಾಯಿತ ಪ್ರತಿನಿಧಿಗಳು ಪ್ರಜೆಗಳ ಗುಲಾಮರಾಗಿರಬೇಕೆ ಹೊರತು ಪ್ರಜೆಗಳನ್ನೇ ತಮ್ಮ ಗುಲಾಮರನ್ನಾಗಿ ಮಾಡಿಕೊಳ್ಳಬಾರದು ಎಂದು ಅವರು ಮಾರ್ಮಿಕವಾಗಿ ಹೇಳಿದರು.

ಈಗ ಶೇ.50 ರಷ್ಟು ಮತದಾನ ಆಗದಿದ್ದರೂ , ಚಲಾಯಿತ ಮತಗಳಲ್ಲಿ ಶೇ.50 ಮತಗಳನ್ನು ಪಡೆಯದಿದ್ದರೂ ಹೆಚ್ಚು ಮತ ಪಡೆದವರನ್ನು ಚುನಾಯಿತ ಎಂದು ಘೋಷಿಸಲಾಗುತ್ತಿದೆ. ಇದ್ಯಾವ ರೀತಿಯ ಪ್ರಜಾಪ್ರಭುತ್ವ?. ಇದು ತಪ್ಪಬೇಕು. ಗೆಲುವಿಗೆ ಚಲಾಯಿತ ಮತಗಳಲ್ಲಿ ಶೇ.50 ರಷ್ಟು ನಿಗದಿಪಡಿಸಬೇಕು ಎಂದು ಅವರು ಹೇಳಿದರು.

ಸರ್ಕಾರಗಳು ಉಚಿತ ಗ್ಯಾರಂಟಿಗಳನ್ನು ನೀಡುವ ಬದಲು ಎಲ್ಲರಿಗೂ ಉಚಿತ ಶಿಕ್ಷಣ ಹಾಗೂ ಆರೋಗ್ಯ ಸೌಲಭ್ಯ ಕಲ್ಪಿಸಬೇಕು. ಸರ್ಕಾರಿ ಶಾಲೆಗಳು, ಕಾಲೇಜುಗಳು ಹಾಗೂ ಆಸ್ಪತ್ರೆಗಳನ್ನು ಬಲಪಡಿಸಬೇಕು. ರೈತರಿಗೆ ಬೆಂಬಲ ಬೆಲೆ ಬದಲು ಸಮರ್ಪಕವಾಗಿ ನೀರು ಹಾಗೂ ವಿದ್ಯುತ್ ಪೂರೈಸಬೇಕು ಎಂದು ಅವರು ಸಲಹೆ ಮಾಡಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಪ್ರೊ.ಸಿ. ನಟರಾಜ್ ಮಾತನಾಡಿ, ಪ್ರತಿಯೊಬ್ಬರೂ ಬದ್ಧತೆ, ಪ್ರಾಮಾಣಿಕತೆ ಬೆಳೆಸಿಕೊಳ್ಳಬೇಕು. ಯಾವುದೇ ಹುದ್ದೆಗೆ ಹೋದರೂ ಭ್ರಷ್ಟಾಚಾರಮುಕ್ತವಾಗಿ ಕೆಲಸ ಮಾಡುವ ಸಂಕಲ್ಪ ಮಾಡಬೇಕು ಎಂದು ಕರೆ ನೀಡಿದರು.


ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ದಾರಿ ಫೌಂಡೇಷನ್ ಅಧ್ಯಕ್ಷ ಎಲ್. ರಂಗಯ್ಯ ಮುಖ್ಯ ಅತಿಥಿಗಳಾಗಿದ್ದರು. ಕಾರ್ಯದರ್ಶಿ ತಗಡೂರು ವೀರೇಶ್‌ಕುಮಾರ್ ಮಹಾಮನೆ ಪ್ರಾಸ್ತಾವಿಕ ಭಾಷಣ ಮಾಡಿದರು. ಸಂಚಾಲಕ ಪ್ರಭಾಕರ್, ಐಕ್ಯೂಎಸಿ ಸಂಚಾಲಕ ಡಾ.ಎಸ್. ಮುತ್ತುರಾಜ, ಖಜಾಂಚಿ ರಾಘವೇಂದ್ರ, ಮಲ್ಲಣ್ಣ, ತೋಂಟೇಶ್ ಮೊದಲಾದವರು ಇದ್ದರು. ಐಕ್ಯತಾ ಪ್ರಾರ್ಥಿಸಿದರು. ಮೈಸೂರು ಎಂ. ಮಹಾಲಿಂಗ ಅವರು ನಾಡಗೀತೆ ಹಾಗೂ ಸಂವಿಧಾನಗೀತೆ ಹಾಡಿದರು. ವಿದ್ಯಾರ್ಥಿನಿ ಅಧ್ಯಕ್ಷೆ ಎಸ್.ಜೆ. ಸಿಂಚನಾ ಸ್ವಾಗತಿಸಿದರು. ಕಾರ್ಯದರ್ಶಿ ಸೈಯದಾ ನೂರೈನ್ ವಂದಿಸಿದರು. ತನುಶ್ರೀ ವಂದಿಸಿದರು. ಪಲ್ಲವಿ ಅತಿಥಿಗಳನ್ನು ಪರಿಚಯಿಸಿದರು.

## ಶ್ರೀ ಕ್ಷೇತ್ರ ಧರ್ಮಸ್ಥಳದ ಹೇಮಾವತಿ ವಿ.ಹೆಗಡೆ ಅವರ ಹುಟ್ಟುಹಬ್ಬ

# ಸಾಲಿಗ್ರಾಮ: 35 ವಾತ್ಸಲ್ಯ ಯೋಜನೆಯ ಫಲಾನುಭವಿಗಳಿಗೆ ಹಣ್ಣು ಹಂಪಲು ವಿತರಣೆ

**ಕೆ.ಆರ್.ನಗರ:** ಶ್ರೀ ಕ್ಷೇತ್ರ ಧರ್ಮಸ್ಥಳದ ಹೇಮಾವತಿ ವಿ.ಹೆಗಡೆ ಅವರ ಹುಟ್ಟು ಹಬ್ಬದ ಅಂಗವಾಗಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸಾಲಿಗ್ರಾಮ ತಾಲೂಕಿನ 35 ವಾತ್ಸಲ್ಯ ಯೋಜನೆಯ ಫಲಾನುಭವಿಗಳಿಗೆ ಹಣ್ಣು ಹಂಪಲುಗಳನ್ನು ವಿತರಣೆ ಮಾಡುವ ಮೂಲಕ ವಿಶಿಷ್ಟವಾಗಿ ಹೇಮಾವತಿ. ವಿ. ಹೆಗಡೆ ಅಮ್ಮನವರ ಹುಟ್ಟುಹಬ್ಬವನ್ನು ಆಚರಣೆ ಮಾಡಲಾಯಿತು.

ಈ ಫಲಾನುಭವಿಗಳಿಗೆ ಪ್ರತಿ ತಿಂಗಳು ಒಂದು ಸಾವಿರ ರೂಗಳಂತೆ ಮಾಶಾಸನವನ್ನು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ನೀಡಲಾಗುತ್ತಿದೆ. ಈ ಸಂದರ್ಭದಲ್ಲಿ ಯೋಜನೆಯ ಸಾಲಿಗ್ರಾಮ ತಾಲೂಕು ಯೋಜನಾಧಿಕಾರಿ ಉಮೇಶ್ ಪೂಜಾರಿ, ಜಿಲ್ಲಾ ಕಚೇರಿಯ ಪ್ರಬಂಧಕ ರಾಜೇಶ್, ಮೇಲ್ವಿಚಾರಕಿ ಸಂಗೀತ, ಸೇವಾ ಪ್ರತಿನಿಧಿ ಪವಿತ್ರ ಸೇರಿದಂತೆ ಹಲವರು ಇದ್ದರು.



# ಏ.15ರವರೆಗೆ ಸ್ವಯಂ ಗಣನೆಗೆ ಡಿ.ಸಿ. ಕರೆ

**ತುಮಕೂರು:** ಭಾರತ ಸರ್ಕಾರದ ಜನಗಣತಿ-2027 ಕಾರ್ಯದ ಅಂಗವಾಗಿ ತುಮಕೂರು ಜಿಲ್ಲೆಯಲ್ಲಿ ಏಪ್ರಿಲ್ 15ರವರೆಗೆ ಸ್ವಯಂ ಗಣನೆ (Self Enumeration) ಪ್ರಕ್ರಿಯೆಯನ್ನು ನಡೆಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ.

ಈ ಅವಧಿಯಲ್ಲಿ ಜಿಲ್ಲೆಯ ಎಲ್ಲಾ ಕುಟುಂಬಗಳು ತಮಗೆ ಸಂಬಂಧಿಸಿದ ಜನಗಣತಿ ಮಾಹಿತಿಯನ್ನು ಸ್ವಯಂವಾಗಿ ಆನ್‌ಲೈನ್ ಮೂಲಕ ದಾಖಲಿಸಲು ಅವಕಾಶ ಕಲ್ಪಿಸಲಾಗಿದೆ. ಸ್ವಯಂ ಗಣನೆ ಪ್ರಕ್ರಿಯೆಯಲ್ಲಿ ಭಾಗವಹಿಸುವುದರಿಂದ ಜನಗಣತಿ ಕಾರ್ಯವು ವೇಗವಾಗಿ, ಸುಲಭವಾಗಿ ಮತ್ತು ಶುದ್ಧತೆಯಿಂದ ಪೂರ್ಣಗೊಳ್ಳಲು ಸಹಕಾರಿ ಆಗುತ್ತದೆ ಎಂದರು.

# ಕೆಎಸ್ ಒಯು ಕುಲಪತಿ ವಿರುದ್ಧ ದಸಂಸ ಪ್ರತಿಭಟನೆ

**ಮೈಸೂರು:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆರನ್ನು ವಜಾಗೊಳಿಸುವಂತೆ ಒತ್ತಾಯಿಸಿ ಸಂಶೋಧಕರ ಸಂಘ, ದಲಿತ ಸಂಘರ್ಷ ಸಮಿತಿ ಹಾಗೂ ಪ್ರಗತಿಪರ ಮುಖಂಡರು ಬುಧವಾರ ಪ್ರತಿಭಟನೆ ನಡೆಸಿದರು.

ಹುಣಸೂರು ರಸ್ತೆಯಲ್ಲಿರುವ ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಎದುರು ಸಮಾವೇಶಗೊಂಡು ವಿವಿಧ ಘೋಷಣೆಗಳನ್ನು ಆಕ್ರೋಶ ವ್ಯಕ್ತಪಡಿಸಿದರು. ಕುಲಪತಿ ಆರ್‌ಎಸ್‌ಎಸ್ ಕೈಗೊಂಬೆಯಾಗಿ ವರ್ತಿಸುತ್ತಿದ್ದು, ಶೈಕ್ಷಣಿಕ ವಾತಾವರಣದಲ್ಲಿ ಕೇಸರಿಕರಣ ಮಾಡುತ್ತಿದ್ದಾರೆ ಎಂದು ಆರೋಪಿಸಿ ಆಕ್ರೋಶ ವ್ಯಕ್ತಪಡಿಸಿದರು.

ಸಂಘ ಪರಿವಾರದ ಸಂಘಟನೆಗೆ ಕಾರ್ಯಕ್ರಮಕ್ಕೆ ಅವಕಾಶ ನೀಡಿ ಜೀವ ವಿರೋಧಿ ಸಿದ್ಧಾಂತಗಳ ಪ್ರಚಾರಕ್ಕೆ ಅಧಿಕಾರವನ್ನು ದುರುಪಯೋಗ ಪಡಿಸಿಕೊಂಡಿದ್ದಾರೆ. ಸರ್ಕಾರದ ಆದೇಶವನ್ನು ಉಲ್ಲಂಘಿಸಿದ್ದಾರೆ. ದಸಂಸ ಮುಖಂಡ ಹರಿಹರ ಆನಂದಸ್ವಾಮಿ ಮಾತನಾಡಿ, ಕರಾಮುವಿಯಲ್ಲಿ ಭ್ರಷ್ಟಾಚಾರ ಮೇರೆ ಮೀರಿದೆ. ಮತಾಂಧ ಶಕ್ತಿಗಳಿಗೆ ಸಹಕಾರ ನೀಡಲಾಗುತ್ತಿದೆ. ಅಧಿಕಾರಿಗಳಿಗೆ ಕಿರುಕುಳ ನೀಡಲಾಗುತ್ತಿದೆ. ವಿವಿಯ ಎಲ್ಲ ಬೆಳವಣಿಗೆಗಳ ಬಗ್ಗೆ ಸಮಗ್ರವಾಗಿ ತನಿಖೆ ಮಾಡಬೇಕು. 15 ದಿನಗಳ ಒಳಗೆ ಯಾವುದೇ ಕ್ರಮ ಕೈಗೊಳ್ಳದಿದ್ದರೆ ವಿವಿಯ ಆಡಳಿತ ಕಚೇರಿಗೆ ಮುತ್ತಿಗೆ ಹಾಕುವುದಾಗಿ ಹೇಳಿದರು.



ದಸಂಸ ಸಂಚಾಲಕ ಚರೋನಹಳ್ಳಿ ಶಿವಣ್ಣ ಮಾತನಾಡಿ, ಕುಲಪತಿ ಪ್ರೊ.ಶರಣಪ್ಪ ವಿ. ಹಲಸೆ ವಿಶ್ವವಿದ್ಯಾನಿಲಯದ ಸೌಹಾರ್ದತೆಯನ್ನು ಹಾಳು ಮಾಡುವ ಕೆಲಸ ಮಾಡುತ್ತಿದ್ದಾರೆ. ಧಾರ್ಮಿಕ ವಿಚಾರದಲ್ಲಿ ಕೋಮು ಭಾವನೆ ಬಿತ್ತುವ ಅವರನ್ನು ಸೇವಾಯಿಂದ ವಜಾ ಮಾಡಬೇಕು. ಕುಲಪತಿಯಾಗಿ ಸರ್ಕಾರದ ಆದೇಶ ಉಲ್ಲಂಘಿಸಿ ತುರ್ತಾಗಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಸಾಮಾಜಿಕ ಹೋರಾಟಗಾರ ಅಹಿಂದ ಜವರಪ್ಪ ಮಾತನಾಡಿ, ಮುಕ್ತವಿಶ್ವವಿದ್ಯಾನಿಲಯವನ್ನು ನವದೆಹಲಿಯ ಜೆಎನ್‌ಯೂ ಮಾದರಿಯಲ್ಲಿ ಶಿಕ್ಷಣ ಸಿಗಬೇಕೆಂದು ಸ್ಥಾಪಿಸಲಾಯಿತು.

ಪ್ರೊ.ರಂಗಪ್ಪ ಕುಲಪತಿಯಾದ ನಂತರ ಮೂಲ ಉದ್ದೇಶವನ್ನು ಕಟ್ಟಡ ಕಟ್ಟಿ ಭ್ರಷ್ಟಾಚಾರ ಮಾಡುವುದು, ಸ್ವಜಾತಿ ನೇಮಕತಿ ನಡೆದಿದೆ. ಅನೇಕ ತನಿಖೆ ನಡೆದಿದೆ. ಆದರೆ, ಯಾವುದೇ ಕ್ರಮ ಕೈಗೊಂಡಿಲ್ಲ. ಪ್ರೊ.ಶರಣಪ್ಪ ವಿ.ಹಲಸೆ ಕುಲಪತಿಯಾಗಿ ಬಂದ ಬಳಿಕ ಸ್ವಜನಪಕ್ಷ ಪಾತ, ಹಣಕಾಸು ದುರಪಯೋಗ, ಕಾನೂನು ಬಾಹಿರವಾಗಿ ಖಾಸಗಿ ಬ್ಯಾಂಕ್‌ಗಳಲ್ಲಿ ಅಕೌಂಟ್ ತೆರೆದು ತುಂಬಿದ್ದ ಬೊಕ್ಕಸವನ್ನು ಬರಿದು ಮಾಡಿದ್ದಾರೆ. ಆರ್‌ಎಸ್‌ಎಸ್ ಕೇಂದ್ರಿತ ಕಾರ್ಯಕ್ರಮ ಆಯೋಜಿಸಿ ಸರ್ಕಾರದ ನಿರ್ದೇಶನವನ್ನು ಗಾಳಿಗೆ ತೂರಿದ್ದಾರೆಂದರು.



# ಜೋಡಿ ನಂ.1 ಏ. 4 ರಿಂದ ಜೀ ಕನ್ನಡದಲ್ಲಿ



ಹೊಸ ನಾನ್-ಫಿಕ್ಷನ್ ಶೋ ಜೋಡಿ ನಂ.1 ಏ. 4 ರಿಂದ ರಾತ್ರಿ 9 ಗಂಟೆಗೆ ಶುರುವಾಗಲಿದೆ.


ಜನಪ್ರಿಯ ಹಿರಿತೆರೆ ಮತ್ತು ಕಿರುತೆರೆ ಜೋಡಿಗಳು ತೆರೆಯ ಹಿಂದೆ ಹೇಗೆ ಇರ್ತಾರೆ, ಒಬ್ಬರನ್ನೊಬ್ಬರು ಎಷ್ಟು ಅರ್ಥ ಮಾಡ್ಕೊಂಡಿದ್ದಾರೆ ಎಂಬುದನ್ನು ಜನರಿಗೆ ಈ ರಿಯಾಲಿಟಿ ಶೋ ತೋರಿಸುತ್ತದೆ. ಅನುಭವಸ್ಥ ಮತ್ತು ಇತ್ತೀಚಿಗೆ ದಾಂಪತ್ಯ ಜೀವನಕ್ಕೆ ಕಾಲಿಟ್ಟ ಜೋಡಿಗಳನ್ನು ಒಳಗೊಂಡ ಈ ಶೋನಲ್ಲಿ, ಮನರಂಜನೆ, ಭಾವನೆಗಳು ಮತ್ತು ನಮ್ಮ ಜೀವನಕ್ಕೆ ಹತ್ತಿರವಾದ ಕ್ಷಣಗಳು ಕಾಣಸಿಗಳಿದ್ದು ಪ್ರೇಕ್ಷಕರಿಗೆ ಭರಪೂರ ಮನರಂಜನೆ ಸಿಗಲಿದೆ.

ಅತ್ಯುತ್ತಮ ತೀರ್ಪುಗಾರರ ಬಳಗ ಮತ್ತೊಂದು ಹೈಲೈಟ್. ನಟಿ, ಮಾಳವಿಕಾ ಅವಿನಾಶ್, ಕ ಛಾಯಾ ಸಿಂಗ್ ಮತ್ತು ನೆನಪಿರಲಿ ಪ್ರೇಮ್ ಈ ಶೋ ನ ತೀರ್ಪುಗಾರಾಗಿರಲಿದ್ದು ಸ್ಪರ್ಧಿಗಳಿಗೆ ಮಾರ್ಗದರ್ಶನ ನೀಡಲಿದ್ದಾರೆ. ತಮ್ಮ ಅಪಾರ ಅನುಭವ ಮತ್ತು ವಿಭಿನ್ನ ವ್ಯಕ್ತಿತ್ವಗಳೊಂದಿಗೆ, ತೀರ್ಪುಗಾರರು ಕೇವಲ ತೀರ್ಪು ನೀಡುವುದಷ್ಟೇ ಅಲ್ಲ, ಉಪಯುಕ್ತ ಸಲಹೆಗಳು, ಸಂಬಂಧಗಳ ಬಗ್ಗೆ ತಮ್ಮ ಅಭಿಪ್ರಾಯಗಳು ಮತ್ತು ಹಾಸ್ಯಭರಿತ ಕ್ಷಣಗಳನ್ನೂ ಹಂಚಿಕೊಳ್ಳುತ್ತಾರೆ, ಇದರಿಂದ ಶೋ ವೀಕ್ಷಕರಿಗೆ ಇನ್ನಷ್ಟು ಹತ್ತಿರವಾಗುತ್ತದೆ. ಈ ಶೋವನ್ನು ಎಲ್ಲರ ಅಚ್ಚುಮೆಚ್ಚಿನ, ನಕ್ಕು ನಗಿಸುವುದಕ್ಕೆ ಮನೆಮಾತಾದ ಕುರಿ ಪ್ರತಾಪ್ ಮತ್ತು ಚೆಲುವೆ ಶ್ವೇತಾ ಚೆಂಗಪ್ಪ ಅವರು ನಿರೂಪಿಸಲಿದ್ದಾರೆ. ಇವರ ಕಾಮಿಡಿ ಟೈಮಿಂಗ್ ಮತ್ತು ಜೋಶ್‌ಭರಿತ ಮಾತುಗಳು ಪ್ರತಿ ಎಪಿಸೋಡ್‌ಗೂ ಇನ್ನಷ್ಟು ಎನರ್ಜಿ ಮತ್ತು ಮನರಂಜನೆಯನ್ನು ನೀಡುತ್ತವೆ.

ಇನ್ನು ಈ ಶೋನಲ್ಲಿ ತಮ್ಮದೇ ಆದ ವೃತ್ತಿರಂಗದಲ್ಲಿ ಹೆಸರು ಮಾಡಿದ ಹಿರಿಯ ಮತ್ತು ಇತ್ತೀಚಿಗೆ ಮದುವೆಯಾದ ಜೋಡಿಗಳು ಭಾಗವಹಿಸಲಿದ್ದಾರೆ. ರುದ್ರ ಮಾಸ್ಟರ್ , ನಿರೀಕ್ಷ, ರಜನಿ-ಅರುಣ್ ಗೌಡ, ಧನರಾಜ್ , ಪ್ರಜ್ಞಾ, ಬಾಳು ಬೆಳಗುಂದಿ , ಮಾಲಾಶ್ರೀ, ನಯನಾ ನಾಗರಾಜ್ , ಸುಹಾಸ್, ಮಿಮಿಕ್ರಿ ಗೋಪಿ , ಉಷಾರಾಣಿ, ಜಗ್ಗಪ್ಪ , ಸುಶ್ಮಿತಾ, ಕೋಟೆ ಪ್ರಭಾಕರ್ , ಮಾಲತಿ, ಗೀತಾ ಭಾರತೀ ಭಟ್ , ರಾಜಾರಾಮ್ ಭಟ್, ಹಾಗೂ ಅಭಿಲಾಷ್ , ಅಪೂರ್ವ ಅವರು ಜೋಡಿ.ನಂ.1 ನಲ್ಲಿ ಸ್ಪರ್ಧಿಗಳಾಗಿ ಕಾಣಿಸಿಕೊಳ್ಳಲಿದ್ದಾರೆ ಪ್ರತಿ ಜೋಡಿಯೂ ಎಷ್ಟು ಅರ್ಥ ಮಾಡಿಕೊಂಡಿದ್ದಾರೆ, ಹೊಂದಾಣಿಕೆ ಮತ್ತು ಭಾವನಾತ್ಮಕ ಬಂಧವನ್ನು ಪರೀಕ್ಷಿಸುವ ವಿವಿಧ ಟಾಸ್ಕ್‌ಗಳಲ್ಲಿ ಭಾಗವಹಿಸುತ್ತಾರೆ. ಇದು ವೀಕ್ಷಕರಿಗೆ ಎಮೋಷನಲ್ ಆಗಿ ಹತ್ತಿರವಾಗಲಿದೆ.

ಅದ್ಭುತ ಪರ್ಫಾರ್ಮೆನ್ಸ್ ಗಳು, ಸಕ್ಕತ್ ಟಾಸ್ಕ್ ಗಳು ಮತ್ತು ಪ್ರೀತಿಯ ಕ್ಷಣಗಳ ಸಂಗಮವೇ ಈ 'ಜೋಡಿ ನಂ.1'. ಇದರಲ್ಲಿ ದಂಪತಿಗಳ ನಡುವಿನ ಪ್ರೀತಿ, ನಂಬಿಕೆ ಮತ್ತು ಹೊಂದಾಣಿಕೆಯನ್ನು ಪರೀಕ್ಷಿಸುವ ಆಕರ್ಷಕ ಗೇಮ್ ಗಳ ಜೊತೆಗೆ ಅದ್ಭುತ ಡಾನ್ಸ್ ಮತ್ತು ಸ್ಕಿಟ್‌ಗಳೂ ಇರುತ್ತವೆ. ಜೋಡಿಗಳು ಒಬ್ಬರನ್ನೊಬ್ಬರು ಎಷ್ಟು ಚೆನ್ನಾಗಿ ಅರ್ಥ ಮಾಡಿಕೊಂಡಿದ್ದಾರೆ ಎಂದು ತೋರಿಸುವ ರಾಪಿಡ್-ಫೈರ್ ಗೇಮ್ ಗಳು ಮತ್ತು ಸವಾಲುಗಳು ಈ ಶೋನ ಹೈಲೈಟ್. ಸಂಬಂಧಗಳನ್ನು ಸಂಭ್ರಮಿಸುವ ಈ ಕಾರ್ಯಕ್ರಮವು ಕರ್ನಾಟಕದ ಪ್ರತಿ ಮನೆಯೂ ಇಷ್ಟಪಡುವ ಒಂದು ಕಂಪ್ಲೀಟ್ ವೀಕೆಂಡ್ ಎಂಟರ್ಟೈನರ್ ಆಗಿರಲಿದೆ.

ಜೋಡಿಗಳ ಪೈಪೋಟಿಯನ್ನು ನೋಡಿ 'ಜೋಡಿ ನಂ.1' ನಲ್ಲಿ ಪ್ರತಿ ಶನಿವಾರ ಮತ್ತು ಭಾನುವಾರ ಇದೆ ಏಪ್ರಿಲ್ 4 ರಿಂದ ಜೀ ಕನ್ನಡ ವಾಹಿನಿಯಲ್ಲಿ.




## ಏಪ್ರಿಲ್ ಎಂದರೆ ಡಾ. ರಾಜಕುಮಾರ್ ನೆನಪು ನುಗ್ಗಿ ಬರುತ್ತದೆ

**12ರಂದು ರಾಜ್ ಪುಣ್ಯಸ್ಮರಣೆ**

24ರಂದು ರಾಜ್ ಹುಟ್ಟು ಹಬ್ಬ ಹುಟ್ಟುಹಬ್ಬವನ್ನು ಸರಕಾರದ ಮಟ್ಟದಲ್ಲಿಯೇ ಆಚರಿಸಲಾಗುತ್ತಿದೆ..

ತಮ್ಮ ಕಂಠಸಿರಿಯಿಂದ ಜನಮನ ಸೂರೆಗೊಂಡಿರುವ ಹೆಸರಾಂತ ಗಾಯಕ ರಾಮಚಂದ್ರ ಹಡಪದ ಅವರು ರಾಜಕುಮಾರ್ ನೆನಪಿನಲ್ಲಿ ಸೊಗಸಾದ ಕಾರ್ಯಕ್ರಮವೊಂದನ್ನು ಹಮ್ಮಿಕೊಂಡಿದ್ದಾರೆ.

ಐದನೇ ತಾರೀಕು ಸಂಜೆ ಐದು ಗಂಟೆಗೆ ಬೆಂಗಳೂರಿನ ಪ್ರೆಸ್ಟೀಜ್ ಸೆಂಟರ್ ಫಾರ್ ಪರ್ಫಾರ್ಮಿಂಗ್ ಆರ್ಟ್ಸ್ ಸಭಾಂಗಣದಲ್ಲಿ ರಾಜಕುಮಾರ್ ಕಂಠಸಿರಿಯಿಂದ ಹೊರಹೊಮ್ಮಿದ ಚಿತ್ರಗೀತೆಗಳ ಮೃದು ಮಧುರ ಪ್ರಸ್ತುತಿ ಅನಾವರಣಗೊಳ್ಳಲಿದೆ.

ಗಾಯಕ ರಾಮಚಂದ್ರ ಹಡಪದರೊಂದಿಗೆ ದಿವ್ಯಾ ರಾಘವನ್, ಆರ್ ಕೆ ಸ್ಪರ್ಶ, ಶ್ವೇತಾ ಹಿರೇಮಠ, ಹರ್ಷ ರಂಜನಿ, ವಿಕಾಸ್ ವಸಿಷ್ಠ ಅವರ ಕಂಠಗಳೂ ಸಭಾಂಗಣದಲ್ಲಿ ಅನುರಣಿಸಲಿವೆ. ರಾಘವೇಂದ್ರ ಕಾಂಚನ್ ನಿರೂಪಣೆ ಮಾಡಲಿದ್ದಾರೆ. ಕಾರ್ಯಕ್ರಮದಲ್ಲಿ ಅನೇಕ ಚಲನಚಿತ್ರ ಕಲಾವಿದರು ತಂತ್ರಜ್ಞರ ಉಪಸ್ಥಿತಿ ಇರಲಿದೆ.



## ಹನುಮ ಜಯಂತಿಯಂದು ರಾಮನ ದರ್ಶನ

ಭಾರತೀಯ ಚಿತ್ರರಂಗದ ಅತ್ಯಂತ ದೊಡ್ಡ ಸಿನಿಮಾ ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ?ರಾಮಾಯಣ? ಚಿತ್ರದ ಬಗ್ಗೆ ಈಗ ಮಹತ್ವದ ಅಪ್‌ಡೇಟ್ ಹೊರಬಿದ್ದಿದೆ. ನಿರ್ದೇಶಕ ನಿತೇಶ್ ತಿವಾರಿ ಹಾಗೂ ನಿರ್ಮಾಪಕ ನಮಿತ್ ಮಲ್ಹೋತ್ರಾ ಅವರ ಈ ದೃಶ್ಯಕಾವ್ಯವು 2026ರ ಬಹುನಿರೀಕ್ಷಿತ ಸಿನಿಮಾವಾಗಿದ್ದು, ಜಾಗತಿಕ ಮಟ್ಟದ ತಾಂತ್ರಿಕತೆಯಲ್ಲಿ ಮೂಡಿಬರುತ್ತಿದೆ. ಎರಡು ಭಾಗಗಳಲ್ಲಿ ಬಿಡುಗಡೆಯಾಗಲಿರುವ ಈ ಸಿನಿಮಾ, ಭಾರತೀಯ ಪುರಾಣವನ್ನು ಅಂತರಾಷ್ಟ್ರೀಯ ಗುಣಮಟ್ಟದೊಂದಿಗೆ ತೆರೆಮೇಲೆ ತರುವ ಸಾಹಸಕ್ಕೆ ಕೈಹಾಕಿದೆ.

ನಿರ್ಮಾಪಕ ನಮಿತ್ ಮಲ್ಹೋತ್ರಾ ಅವರು ರಾಮನವಮಿಯ ಶುಭ ಸಂದರ್ಭದಲ್ಲಿ ಈ ಚಿತ್ರದ ಕುರಿತು ದೊಡ್ಡ ಸುದ್ದಿಯೊಂದನ್ನು ಹಂಚಿಕೊಂಡಿದ್ದಾರೆ. ಹನುಮ ಜಯಂತಿಯ ಪವಿತ್ರ ದಿನದಂದು ?ರಾಮ?ನ ವಿಶೇಷ ತುಣುಕನ್ನು ವಿಶ್ವಾದ್ಯಂತ ಅಭಿಮಾನಿಗಳ ಸಮ್ಮುಖದಲ್ಲಿ ಬಿಡುಗಡೆ ಮಾಡುವುದಾಗಿ ಅವರು ಘೋಷಿಸಿದ್ದಾರೆ. ಈ ಮೂಲಕ ಕಳೆದ ಹಲವು ವರ್ಷಗಳ ಸತತ ಪರಿಶ್ರಮದ ಮೊದಲ ನೋಟವನ್ನು ಜಗತ್ತಿಗೆ ಪರಿಚಯಿಸಲು ಚಿತ್ರತಂಡ ಸಜ್ಜಾಗಿದೆ.

ಈ ಕುರಿತು ಭಾವನಾತ್ಮಕವಾಗಿ ಬರೆದುಕೊಂಡಿರುವ ನಮಿತ್, "ರಾಮಾಯಣವು ನಮ್ಮೆಲ್ಲರ ಪರಂಪರೆಯಾಗಿದೆ. ಅತ್ಯಂತ ಜವಾಬ್ದಾರಿ ಮತ್ತು ಭಕ್ತಿಯಿಂದ ಈ ಮಹಾಕಾವ್ಯಕ್ಕೆ ಜೀವ ತುಂಬುತ್ತಿದ್ದೇವೆ. ಹನುಮ ಜಯಂತಿಯಂದು ನಡೆಯಲಿರುವ ಈ ?ಗ್ರಾಂಡ್ ವರ್ಲ್ಡ್ ರಿವೀಲ್? ಕೇವಲ ಸಿನಿಮಾದ ಅಪ್‌ಡೇಟ್ ಅಲ್ಲ, ಇದು ವಿಶ್ವಾದ್ಯಂತ ಇರುವ ರಾಮಭಕ್ತರು ಮತ್ತು ಅಭಿಮಾನಿಗಳ ಸಂಭ್ರಮದ ಆಚರಣೆಯಾಗಲಿದೆ," ಎಂದು ತಿಳಿಸಿದ್ದಾರೆ. ಈ ಘೋಷಣೆಯು ಈಗಾಗಲೇ ಸಾಮಾಜಿಕ ಜಾಲತಾಣದಲ್ಲಿ ಭಾರೀ ಕುತೂಹಲ ಮೂಡಿಸಿದೆ. ಚಿತ್ರದ ತಾರಾಬಳಗವು ಅತ್ಯಂತ ಪ್ರಭಾವಶಾಲಿಯಾಗಿದ್ದು, ರಣಬೀರ್ ಕಪೂರ್ ಶ್ರೀರಾಮನಾಗಿ, ಸಾಯಿ ಪಲ್ಲವಿ ಸೀತೆಯಾಗಿ ಹಾಗೂ ಕನ್ನಡಿಗರ ಹೆಮ್ಮೆಯ ರಾಕಿಂಗ್ ಸ್ಟಾರ್ ಯಶ್ ರಾವಣನ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಇವರ ಜೊತೆಗೆ ಸನ್ನಿ ಡಿಯೋಲ್ ಹನುಮಂತನಾಗಿ ಮತ್ತು ರವಿ ದುಬೆ ಲಕ್ಷ್ಮಣನಾಗಿ ಕಾಣಿಸಿಕೊಳ್ಳುತ್ತಿರುವುದು ಚಿತ್ರದ ಗಾಂಭೀರ್ಯವನ್ನು ಹೆಚ್ಚಿಸಿದೆ. ಅತ್ಯಾಧುನಿಕ ವಿಎಫ್‌ಎಕ್ಸ್ ತಂತ್ರಜ್ಞಾನದ ಮೂಲಕ ಈ ಪೌರಾಣಿಕ ಕಥೆಯನ್ನು ಕಣ್ಣಿಗೆ ಕಟ್ಟುವಂತೆ ಚಿತ್ರೀಕರಿಸಲಾಗುತ್ತಿದೆ.

ಪ್ರೈಮ್ ಫೋಕಸ್ ಸ್ಟುಡಿಯೋಸ್, ಆಸ್ಕರ್ ವಿಜೇತ ಡಿಎನ್‌ಇಜಿ ಮತ್ತು ಯಶ್ ಅವರ ಮಾನ್ಸ್ಟರ್ ಮೈಂಡ್ ಕ್ರಿಯೇಷನ್ಸ್ ಸಹಯೋಗದಲ್ಲಿ ತಯಾರಾಗುತ್ತಿರುವ ಈ ಚಿತ್ರವು ಐಮ್ಯಾಕ್ಸ್ ಆವೃತ್ತಿಯಲ್ಲಿ ತೆರೆಗೆ ಬರಲಿದೆ. ಚಿತ್ರದ ಮೊದಲ ಭಾಗವು 2026ರ ದೀಪಾವಳಿಗೆ ಮತ್ತು ಎರಡನೇ ಭಾಗವು 2027ರ ದೀಪಾವಳಿಗೆ ಜಾಗತಿಕವಾಗಿ ಬಿಡುಗಡೆಯಾಗಲಿದ್ದು, ಭಾರತೀಯ ಚಿತ್ರರಂಗದ ಇತಿಹಾಸದಲ್ಲೇ ಇದು ಮೈಲಿಗಲ್ಲಾಗುವ ಮುನ್ಸೂಚನೆ ನೀಡಿದೆ.

# ಏ 17ಕ್ಕೆ `ಎಲ್ರ ಕಾಲೆಳೆಯುತ್ತೆ ಕಾಲ'

ಹಾಸ್ಯ ನಟ ಸುಜಯ್ ಶಾಸ್ತ್ರಿ ನಿರ್ದೇಶನದ, ಗೋಕುಲ ಎಂಟರ್ಟೈನರ್ಸ್ ಲಾಂಛನದಲ್ಲಿ ಗೋವಿಂದರಾಜು ಅವರು ನಿರ್ಮಿಸಿರುವ ಹಾಗೂ ಖ್ಯಾತ ಗಾಯಕ - ಸಂಗೀತ ನಿರ್ದೇಶಕ ಚಂದನ್ ಶೆಟ್ಟಿ ನಾಯಕನಾಗಿ ನಟಿಸಿರುವ "ಎಲ್ರ ಕಾಲೆಳಿಯತ್ತೆ ಕಾಲ" ಚಿತ್ರ ಏಪ್ರಿಲ್ 17 ರಂದು ಬಿಡುಗಡೆಯಾಗುತ್ತಿದೆ. ಅದಕ್ಕೂ ಪೂರ್ವದಲ್ಲಿ ಚಿತ್ರತಂಡ "ಮಾತು ಮಧುರ" ಎಂಬ ಹಾಡನ್ನು ಆನಂದ್ ಆಡಿಯೋ ಮೂಲಕ ಅನಾವರಣ ಮಾಡಿದೆ. ಹಾಡು ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು.

ಕಾರಣಾಂತರದಿಂದ ನಮ್ಮ ಚಿತ್ರ ಬಿಡುಗಡೆ ತಡವಾಗಿದೆ. ಈಗ ಬಿಡುಗಡೆಗೆ ಮುಹೂರ್ತ ಕೂಡಿ ಬಂದಿದೆ ಎಂದು ಮಾತನಾಡಿದ ನಿರ್ದೇಶಕ ಸುಜಯ್ ಶಾಸ್ತ್ರಿ, ಇದೊಂದು 90 ರ ಕಾಲಘಟ್ಟದಲ್ಲಿ ನಡೆಯುವ ಕಥೆ. ಕನಕಪುರದಲ್ಲೇ ಹೆಚ್ಚಿನ ಭಾಗದ ಚಿತ್ರೀಕರಣವಾಗಿದೆ. ಸಮಯದ ಮಹತ್ವ ಸಾರುವ ಈ ಚಿತ್ರಕ್ಕೆ ನನ್ನ ಸ್ನೇಹಿತ ರಾಜಗುರು ಹೊಸಕೋಟೆ ಕಥೆ ಬರೆದಿದ್ದಾರೆ. ಕಥೆಗೆ ಈ ಶೀರ್ಷಿಕೆ ಪೂರಕವಾಗಿದೆ. ಇದು ಚಂದನ್ ಶೆಟ್ಟಿ ನಾಯಕನಾಗಿ ನಟಿಸಿರುವ ಮೊದಲ ಚಿತ್ರ. ಅರ್ಚನಾ ಕೊಟ್ಟಿಗೆ ಈ ಚಿತ್ರದ ನಾಯಕಿ. ದತ್ತಣ್ಣ, ತಾರಾ ಅನುರಾಧ, ಮಂಜು ಪಾವಗಡ ಮುಂತಾದವರು ಈ ಚಿತ್ರದ ತಾರಾಬಳಗದಲ್ಲಿದ್ದಾರೆ. ಇಂದು "ಮಾತು ಮಧುರ" ಹಾಡು ಬಿಡುಗಡೆ ಮಾಡಿದ್ದೇವೆ. ಪ್ರವೀಣ್ - ಪ್ರದೀಪ್ ಸಂಗೀತ ನೀಡಿದ್ದಾರೆ. ಗೋವಿಂದರಾಜು ಅವರು ಯಾವುದೇ ಕೊರತೆ ಬಾರದ ಹಾಗೆ ನಿರ್ಮಾಣ ಮಾಡಿದ್ದಾರೆ. ಕೌಟುಂಬಿಕ ಕಾಮಿಡಿ ಜಾನರ್ ನ ಈ ಚಿತ್ರ ಏಪ್ರಿಲ್ 17 ರಂದು ಬಿಡುಗಡೆಯಾಗುತ್ತಿದೆ. ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದರು.

ಇದು ನಾನು ನಾಯಕನಾಗಿ ನಟಿಸಿರುವ ಮೊದಲ ಚಿತ್ರ. ಸಾಕಷ್ಟು ತಯಾರಿ ಮಾಡಿಕೊಂಡು ಈ ಚಿತ್ರದಲ್ಲಿ ನಟಿಸಿದ್ದೇನೆ. ಪಾತ್ರಕ್ಕಾಗಿ ದೇಹದ ತೂಕ ಸಹ ಹೆಚ್ಚಿಸಿಕೊಂಡಿದ್ದೆ. ಸಮಯಕ್ಕೆ ಬೆಲೆ ಕೊಡಬೇಕು. ಇಲ್ಲದಿದ್ದರೆ ಏನೆಲ್ಲಾ ಆಗುತ್ತದೆ ಎಂಬುದನ್ನು ಈ ಚಿತ್ರದಲ್ಲಿ ಮನಮುಟ್ಟುವ ಹಾಗೆ ತೋರಿಸಿದ್ದಾರೆ. ಇಂದು ಬಿಡುಗಡೆಯಾಗಿರುವ ಹಾಡು ಚೆನ್ನಾಗಿದೆ ಎಂದು ನಾಯಕ ಚಂದನ್ ಶೆಟ್ಟಿ ಹೇಳಿದರು .

ಇದು ನಮ್ಮ ಸಂಸ್ಥೆಯಿಂದ ನಿರ್ಮಾಣವಾಗಿರುವ ಮೂರನೇ ಚಿತ್ರ. ಒಂದೊಳ್ಳೆ ಸಂದೇಶವಿರುವ ಚಿತ್ರವೂ ಹೌದು. ನಮ್ಮ ಚಿತ್ರವನ್ನು ಎಲ್ಲರು ಚಿತ್ರಮಂದಿರಗಳಲ್ಲೇ ನೋಡಿ ಎಂದರು ನಿರ್ಮಾಪಕ ಗೋವಿಂದರಾಜು.

ಈ ಚಿತ್ರದಲ್ಲಿ ಐದು ಹಾಡುಗಳಿದೆ. ಇಂದು ಬಿಡುಗಡೆಯಾಗಿರುವ "ಮಾತು ಮಧುರ" ಹಾಡನ್ನು ದರ್ಶನ್ ನಾರಾಯಣ್ ಹಾಗೂ ಅನುರಾಧಾ ಭಟ್ ಹಾಡಿದ್ದಾರೆ. ನಾಲ್ಕು ಹಾಡುಗಳು 90ರ ಕಾಲಘಟದ ಹಾಡುಗಳ ಹಾಗೆ ಇರುತ್ತದೆ. ಒಂದು ಪ್ರಮೋಷನ್ ಸಾಂಗ್ ಇದ್ದು, ಅದನ್ನು ಚಂದನ್ ಶೆಟ್ಟಿ ಅವರೆ ಹಾಡಿ ಸಂಗೀತ ಸಂಯೋಜನೆ ಮಾಡಿದ್ದಾರೆ ಎಂದು ಸಂಗೀತ ನಿರ್ದೇಶಕರಾದ ಪ್ರವೀಣ್ - ಪ್ರದೀಪ್ ತಿಳಿಸಿದರು.


ವಸಂತ ನನ್ನ ಪಾತ್ರದ ಹೆಸರು. ನಾನು ಈ ಚಿತ್ರದಲ್ಲಿ ಮೆಸ್ ಓನರ್ ಎಂದು ನಾಯಕಿ ಅರ್ಚನಾ ಕೊಟ್ಟಿಗೆ ಹೇಳಿದರು. ಚಿತ್ರ ಆರಂಭವಾದ ಕುರಿತು ಹಾಗೂ ಕಥೆ ಬಗ್ಗೆ ಕಥೆ ಬರೆದಿರುವ ರಾಜಗುರು ಹೊಸಕೋಟೆ ಮಾಹಿತಿ ನೀಡಿದರು.



## ಕ್ಯಾಲೆಂಡರ್ ಬಿಡುಗಡೆ ಒಂದು ವಾರ ಮುಂದಕ್ಕೆ

**ಏಪ್ರಿಲ್ 3ಕ್ಕೆ ಬರಬೇಕಿದ್ದ ಚಿತ್ರ ಏಪ್ರಿಲ್ 10ಕ್ಕೆ ಬಿಡುಗಡೆ**

ಈ ಹಿಂದೆ "ಸ್ವಾರ್ಥ ರತ್ನ" ಸೇರಿದಂತೆ ಎರಡು ಸಿನಿಮಾಗಳಲ್ಲಿ ನಾಯಕನಾಗಿ ನಟಿಸಿದ್ದ ಆದರ್ಶ ಗುಂಡುರಾಜ್ ಅಭಿನಯದ "ಕ್ಯಾಲೆಂಡರ್" ಚಿತ್ರ ಈಗಾಗಲೇ ಟ್ರೇಲರ್ ಹಾಗೂ ಹಾಡುಗಳ ಮೂಲಕ ಜನಪ್ರಿಯವಾಗಿದೆ. ಮಹಿಳಾ ಪ್ರಧಾನ ಈ ಚಿತ್ರ ಏಪ್ರಿಲ್ 3 ರಂದು ಬಿಡುಗಡೆಯಾಗುತ್ತಿದೆ ಎಂದು ಚಿತ್ರತಂಡ ಈ ಹಿಂದೆ ತಿಳಿಸಿತ್ತು. ಪ್ರಸ್ತುತ "ದುರಂಧರ್ 2" ಚಿತ್ರ ರಾಜ್ಯಾದ್ಯಂತ ಪ್ರದರ್ಶನ ಕಾಣುತ್ತಿರು ವುದರಿಂದ ಹೆಚ್ಚಿನ ಚಿತ್ರಮಂದಿರಗಳಲ್ಲಿ ಆ ಚಿತ್ರ ಪ್ರದರ್ಶನ ಕಾಣುತ್ತಿದೆ. ಹಾಗಾಗಿ "ಕ್ಯಾಲೆಂಡರ್" ಚಿತ್ರಕ್ಕೆ ಚಿತ್ರಮಂದಿರಗಳ ಸಮಸ್ಯೆ ಎದುರಾಗಿದೆ. ಆ ಕಾರಣದಿಂದ "ಕ್ಯಾಲೆಂಡರ್" ಚಿತ್ರ ಬಿಡುಗಡೆಯನ್ನು ಒಂದು ವಾರ ತಡವಾಗಿ ಏಪ್ರಿಲ್ 10ರಂದು ಬಿಡುಗಡೆ ಮಾಡುತ್ತಿರುವುದಾಗಿ ಚಿತ್ರದ ನಿರ್ಮಾಪಕರೂ ಆಗಿರುವ ನಾಯಕ ಆದರ್ಶ ಗುಂಡುರಾಜ್ ತಿಳಿಸಿದ್ದಾರೆ.




ಈ ಚಿತ್ರದ ನಾಯಕಿಯರಾಗಿ ನಿವಿಷ್ಕ ಪಾಟೀಲ್ ಹಾಗೂ ಸುಶ್ಮಿತ ನಟಿಸಿದ್ದಾರೆ.ಕನಸಿನ ರಾಣಿ ಮಾಲಾಶ್ರೀ ಅವರು ವಿಶೇಷ ಪಾತ್ರದಲ್ಲಿ ಅಭಿನಯಿಸಿದ್ದಾರೆ. ರಮೇಶ್ ಇಂದಿರಾ, ಪ್ರಮೋದ್ ಶೆಟ್ಟಿ, ಪ್ರಕಾಶ್ ತುಮ್ಮಿನಾಡು, ಸುಚೇಂದ್ರ ಪ್ರಸಾದ್, ಚಂದ್ರಪ್ರಭ ಮುಂತಾದವರು ತಾರಾಬಳಗದಲ್ಲಿದ್ದಾರೆ. ಸುನಾದ್ ಗೌತಮ್ ಸಂಗೀತ ನೀಡಿದ್ದಾರೆ. ರಮೇಶ್ ಕೊಯಿರಾ ಛಾಯಾಗ್ರಹಣ, ಕೆ.ಜಿ.ಎಫ್ ಖ್ಯಾತಿಯ ವಿಕ್ರಂ ಮೋರ್ ಸಾಹಸ ನಿರ್ದೇಶನ, ಭಜರಂಗಿ ಮೋಹನ್ ನೃತ್ಯ ನಿರ್ದೇಶನ, ಸುರೇಶ್ ಆರ್ಮುಗಂ ಸಂಕಲನ ಹಾಗೂ ಮಹಾಂತೇಶ್ ಆರ್ ಅವರ ಸಹ ನಿರ್ದೇಶನವಿರುವ ಈ ಚಿತ್ರವನ್ನು ನವೀನ್ ಶಕ್ತಿ ನಿರ್ದೇಶಿಸಿದ್ದಾರೆ.




ಸುಮನ ಟಿ ವಿ ಆಯೋಜಿತ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ನಿನ್ನೆ ನಗರದಲ್ಲಿ ನಡೆಯಿತು... ವಿವಿಧ ಕ್ಷೇತ್ರದ ಸಾಧಕರು ವೇದಿಕೆಯಲ್ಲಿ ಸನ್ಮಾನಿತರಾದರು.. ಚಲನಚಿತ್ರ, ರಂಗಭೂಮಿ, ನೃತ್ಯ ಕ್ಷೇತ್ರದ

## ಏಪ್ರಿಲ್ 10ರಂದು "ಗೊಗ್ಗಯ್ಯ" ನ ಆಗಮನ

**ಚಿಕ್ಕ ಮಕ್ಕಳಿಗೆ ಹೆದರಿಸುವ ಪದವೇ ಈಗ ಸಿನಿಮಾ ಶೀರ್ಷಿಕೆ**

ಸಾಮಾನ್ಯವಾಗಿ ಚಿಕ್ಕಮಕ್ಕಳು ಊಟ ಮಾಡದಿದ್ದರೆ, ತಾಯಿ ಹೇಳುವ ಪದವೇ ಊಟ ಮಾಡು ಕಂದ. ಇಲ್ಲದಿದ್ದರೆ "ಗೊಗ್ಗಯ್ಯ" ಬರುತ್ತಾನೆ ಅಂತ. ಈಗ "ಗೊಗ್ಗಯ್ಯ" ಎಂಬ ಶೀರ್ಷಿಕೆಯಲ್ಲೇ ಸಿನಿಮಾ ನಿರ್ಮಾಣವಾಗಿದ್ದು ತೆರೆಗೆ ಬರಲು ಸಿದ್ದವಾಗಿದೆ. ಚಿತ್ರ ಏಪ್ರಿಲ್ 10 ರಂದು ತೆರೆಗೆ ಬರುತ್ತಿದೆ. ಇತ್ತೀಚೆಗೆ ಈ ಚಿತ್ರದ ಹಾಡು ಬಿಡುಗಡೆ ಸಮಾರಂಭ ಅದ್ದೂರಿಯಾಗಿ ನೆರವೇರಿತು. ಹಾಡು ಬಿಡುಗಡೆ ಸಮಾರಂಭದ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು.

ನಾನು ಸಾಕಷ್ಟು ಚಿತ್ರಗಳಿಗೆ ಸಹ ನಿರ್ದೇಶಕನಾಗಿ ಹಾಗೂ ನಿರ್ದೇಶಕನಾಗಿಯೂ ಕಾರ್ಯ ನಿರ್ವಹಿಸಿದ್ದೇನೆ. ಪ್ರಸ್ತುತ "ಗೊಗ್ಗಯ್ಯ" ಚಿತ್ರವನ್ನು ನಿರ್ದೇಶಿಸಿದ್ದೇನೆ. ವಂದನ ಎಂಟರ್ ಪ್ರೈಸಸ್ ಲಾಂಛನದಲ್ಲಿ ರಾಧಾ ಜೆ ಅವರು ನಿರ್ಮಾಣ ಮಾಡಿರುವ ಈ ಚಿತ್ರಕ್ಕೆ ನಾನೇ ಕಥೆ ಬರೆದಿದ್ದೇನೆ. ಸಂಗೀತ ನಿರ್ದೇಶನದ ಜೊತೆಗೆ ನಾಯಕನಾಗಿಯೂ ಅಭಿನಯಿಸಿದ್ದೇನೆ. ತನ್ಮಯ್ ಎಸ್ ಆನಂದ್ ಕುಮಾರ್ ಅವರು ಚಿತ್ರಕಥೆ, ಗೀತರಚನೆ ಹಾಗೂ ಸಂಭಾಷಣೆ ಬರೆದು ನೃತ್ಯ ನಿರ್ದೇಶನ ಮಾಡಿದ್ದರೆ. ಈ ಚಿತ್ರದಲ್ಲಿ ಮೂರು ಹಾಡುಗಳಿದ್ದು, ರಾಮನವಮಿಯ ಪ್ರಯುಕ್ತ "ನೀ ಹೆದರದಿರು ಕಂದ" ಎಂಬ ಹನುಮಂತನ ಕುರಿತಾದ ಹಾಡು ಬಿಡುಗಡೆ ಮಾಡಿದ್ದೇವೆ. ಕೈಲಾಶ್ ಖೇರ್ ಅವರು ಹಾಡಿರುವ ಈ ಹಾಡನ್ನು ತನ್ಮಯ್ ಎಸ್ ಆನಂದ್ ಕುಮಾರ್ ಬರೆದಿದ್ದಾರೆ. ಸಿರಿ ಮ್ಯೂಸಿಕ್ ಯೂಟ್ಯೂಬ್ ಚಾನಲ್ ನಲ್ಲಿ ಈ ಹಾಡು ಬಿಡುಗಡೆಯಾಗಿದೆ. ಕಾಮಿಡಿ, ಹಾರಾರ್ ಹಾಗೂ ಸೆಂಟಿಮೆಂಟ್ ಕಥಾಹಂದರ ಹೊಂದಿರುವ ಈ ಚಿತ್ರ ಏಪ್ರಿಲ್ 10 ರಂದು ಬಿಡುಗಡೆಯಾಗುತ್ತಿದೆ. ನಮ್ಮ ಚಿತ್ರಕ್ಕೆ ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದರು ನಿರ್ದೇಶಕ ಹಾಗೂ ನಾಯಕ ವಸಂತ್.



ಸಾಮಾನ್ಯವಾಗಿ ತಾಯಂದಿರು ಮಕ್ಕಳು ಊಟ ಮಾಡಿದಿದ್ದಾಗ ಬಳಸುವ ಮೊದಲ ಪದವೇ "ಗೊಗ್ಗಯ್ಯ" ಅಂತ. ನಾನೇ ನಿರ್ದೇಶಕರಿಗೆ ಈ ಶೀರ್ಷಿಕೆ ಕೊಟ್ಟೆ. ಶೀರ್ಷಿಕೆಗೆ ಕಥೆ ಪೂರಕವಾಗಿದೆ ಎಂದು ನಿರ್ಮಾಪಕಿ ರಾಧಾ ತಿಳಿಸಿದರು.

ನಾಯಕಿ ಸ್ನೇಹ, ನಟರಾದ ಕೌರವ ವೆಂಕಟೇಶ್, ವೈಭವ ನಾಗರಾಜ್, ಸಿರಿ ಮ್ಯೂಸಿಕ್ ನ ಸುರೇಶ್ ಚಿಕ್ಕಣ್ಣ ಹಾಗೂ ಚಿತ್ರಕಥೆ, ಸಂಭಾಷಣೆ ಬರೆದು ಗೀತರಚನೆ ಮಾಡಿ, ನಿರ್ಮಾಣದ ಮೇಲ್ವಿಚಾರಣೆಯನ್ನು ಹೊತ್ತಿರುವ ತನ್ಮಯ್ ಎಸ್ ಆನಂದ್ ಕುಮಾರ್ ಸೇರಿದಂತೆ ಚಿತ್ರತಂಡದ ಅನೇಕ ಸದಸ್ಯರು "ಗೊಗ್ಗಯ್ಯ" ಚಿತ್ರದ ಕುರಿತು ಮಾತನಾಡಿದರು.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,